# ನ್ಯಾಯಸ್ಥಾಪಕರು

## ಮುನ್ನುಡಿ

ಕಾನಾನ್ ನಾಡನ್ನು ಸ್ವಾಧೀನಪಡಿಸಿಕೊಂಡ ಕಾಲದಿಂದ ಆ ನಾಡನ್ನು ಅರಸರು ವ್ಯವಸ್ಥಿತವಾಗಿ ಆಳುವ ತನಕ ಇಸ್ರಯೇಲ್ ಸಮಾಜದಲ್ಲಿ ನಡೆದ ಆಗುಹೋಗುಗಳನ್ನು ಒಳಗೊಂಡಿದೆ ಪವಿತ್ರ ಬೈಬಲ್ಲಿನ ಈ ಭಾಗ. ಈ ಅಸ್ತವ್ಯಸ್ತ ಅವಧಿಯಲ್ಲಿ ಇಸ್ರಯೇಲರು ಮತ್ತೆ ಮತ್ತೆ ತಮ್ಮ ದೇವರಾದ ಸರ್ವೇಶ್ವರನಿಗೆ ಅಪ್ರಾಮಾಣಿಕರಾಗಿ ನಡೆದುಕೊಂಡು ಬೇರೆ ದೇವತೆಗಳತ್ತ ತಿರುಗಿಕೊಳ್ಳುತ್ತಾರೆ. ಆಗ ದೇವರು ಅವರನ್ನು ಅನ್ಯರ ದಬ್ಬಾಳಿಕೆಗೆ ಗುರಿಪಡಿಸುತ್ತಾರೆ. ಪಶ್ಚತ್ತಾಪಪಟ್ಟು ತನಗೆ ಮೊರೆಯಿಟ್ಟಾಗ ಅವರನ್ನು ಬಿಡುಗಡೆ ಮಾಡಲು ಏರ್ಪಾಡು ಮಾಡುತ್ತಾರೆ. ಮಹಾವೀರರನ್ನೂ ಯುದ್ಧಪರಾಕ್ರಮಿಗಳನ್ನೂ ಕಳುಹಿಸಿ ಬಿಡುಗಡೆ ಮಾಡುತ್ತಾರೆ. ಹೀಗೆ ಕಳುಹಿಸಲಾದ ಹನ್ನೆರಡು ಪ್ರಮುಖ ನ್ಯಾಯಸ್ಥಾಪಕರಲ್ಲಿ ಅಥವಾ ವಿಮೋಚಕರಲ್ಲಿ ಸಂಸೋನನು ಸುಪ್ರಸಿದ್ಧನು (ಅಧ್ಯಾಯ 13–16). ಪಾಪಕ್ಕೆ ವಿಮುಖರಾಗಿ ದೇವರ ಕಡೆ ತಿರುಗಿಕೊಳ್ಳಬಯಸುವವರನ್ನು ದೇವರು ಎಂದಿಗೂ ಕೈಬಿಡುವುದಿಲ್ಲ ಎಂಬ ಪಾಠವನ್ನು ನಾನಾ ಘಟನೆಗಳಿಂದ ಎತ್ತಿತೋರಿಸಲಾಗಿದೆ.

### ಪರಿವಿಡಿ


| | | |
|---|---|---|
| ಯೆಹೋಶುವನ ಮರಣ ಸಂದರ್ಭದಲ್ಲಿ ನಡೆದ ಘಟನೆಗಳು | – | 1.1 – 2.10 |
| ಇಸ್ರಯೇಲರನ್ನು ಬಿಡುಗಡೆಮಾಡಿದ ಮಹಾವೀರರು | – | 2.11 – 16.31 |

1. ಒತ್ನೀಯೆಲ್
2. ಏಹೂದ್
3. ಶಮ್ಗರ್
4. ದೆಬೋರ್ – ಬಾರಾಕ್
5. ಗಿದ್ಯೋನ – ಅಬೀಮೆಲೆಕ್
6. ತೋಲ
7. ಯಾಯಿರ
8. ಯೆಪ್ತಾಹ
9. ಇಬ್ಬಾನ್
10. ಏಲೋನ್
11. ಅಬ್ದೋನ್
12. ಸಂಸೋನ

ದಾನ್ಯರು ಮೀಕನ ವಿಗ್ರಹವನ್ನು ಲಯಿಷಿಗೆ ಒಯ್ದದ್ದು – 17
ಗಿಬೆಯ್ಯರ ಪೈಶಾಚಿಕ ಕೃತ್ಯ – 18
ಇಸ್ರಯೇಲ್ ಹಾಗು ಬೆನ್ಯಮೀನ್ ಕುಲದವರ
ನಡುವೆ ಯುದ್ಧ – 20–21

## ಕಾನಾನ್ ನಾಡು ಸ್ವಾಧೀನವಾಗುವ ಸಂದರ್ಭದಲ್ಲಿ ನಡೆದ ಕೆಲವು ಘಟನೆಗಳು

**1** ಯೆಹೋಶುವನು ಮರಣಹೊಂದಿದ ಬಳಿಕ ಇಸ್ರಯೇಲರು ಕಾನಾನ್ಯರೊಡನೆ ಯುದ್ಧ ಮಾಡಲು ತಮ್ಮಲ್ಲಿ ಯಾವ ಕುಲ ಮುಂದಾಗಿ ಹೋಗಬೇಕೆಂದು ಸರ್ವೇಶ್ವರಸ್ವಾಮಿಯನ್ನು ವಿಚಾರಿಸಿದರು.

2 "ಯೆಹೂದಕುಲ ಹೋಗಲಿ; ಇಗೋ, ನಾಡನ್ನು ಅವರ ಕೈಗೆ ಒಪ್ಪಿಸಿದ್ದೇನೆ," ಎಂದರು ಸರ್ವೇಶ್ವರ.

3 ಆಗ ಯೆಹೂದಕುಲದವರು ತಮ್ಮ ಸೋದರರಾದ ಸಿಮೆಯೋನ್ಯರಿಗೆ, "ಕಾನಾನ್ಯರೊಡನೆ
ಯುದ್ಧಮಾಡಲು ನೀವೂ ನಮ್ಮ ಸಂಗಡ ನಮ್ಮ ಸ್ವಂತಪ್ರಾಂತ್ಯಕ್ಕೆ ಬನ್ನಿ; ಅನಂತರ ನಾವೂ ನಿಮ್ಮ ಸಂಗಡ
ನಿಮ್ಮ ಸ್ವಂತಪ್ರಾಂತ್ಯಕ್ಕೆ ಬರುತ್ತೇವೆ," ಎಂದು ಹೇಳಿದರು. [4]ಅವರು ಒಪ್ಪಿ ಯೆಹೂದ ಕುಲದವರ ಜೊತೆ
ಯುದ್ಧಕ್ಕೆ ಹೋದರು. ಸರ್ವೇಶ್ವರ ಕಾನಾನ್ಯರನ್ನು ಹಾಗು ಪೆರಿಜ್ಜೀಯರನ್ನು ಅವರ ಕೈವಶಮಾಡಲು ಅವರು
ಹತ್ತುಸಾವಿರ ಶತ್ರುಗಳನ್ನು ಬೆಜೆಕಿನಲ್ಲಿ ಸೋಲಿಸಿದರು. [5]ಅದೋನೀ ಬೆಜೆಕನನ್ನು ಅಲ್ಲಿ ಎದುರುಗೊಂಡು
ಯುದ್ಧಮಾಡಿ ಸೋಲಿಸಿದರು. [6]ಅದೋನೀಬೆಜೆಕನು ಅಲ್ಲಿಂದ ಓಡಿಹೋಗುತ್ತಿರುವಾಗ ಅವನನ್ನು ಹಿಂದಟ್ಟಿ
ಹಿಡಿದು ಅವನ ಕೈಕಾಲುಗಳ ಹೆಬ್ಬೆರಳುಗಳನ್ನು ಕತ್ತರಿಸಿಬಿಟ್ಟರು. [7]ಆಗ ಅದೋನೀಬೆಜೆಕನು, "ಎಪ್ಪತ್ತು ಮಂದಿ
ಅರಸರ ಕೈಕಾಲುಗಳ ಹೆಬ್ಬೆರಳುಗಳನ್ನು ನಾನು ಕತ್ತರಿಸಿದೆ; ನನ್ನ ಊಟದ ಮೇಜಿನ ಕೆಳಗೆ ಬೀಳುತ್ತಿದ್ದ ಚೂರು
ಪಾರುಗಳನ್ನು ಅವರು ತಿನ್ನುತ್ತಿದ್ದರು; ನಾನು ಅವರಿಗೆ ಮಾಡಿದಂತೆಯೇ ದೇವರು ನನಗೆ ಮಾಡಿದ್ದಾರೆ,"
ಎಂದನು. ಅವನನ್ನು ಜೆರುಸಲೇಮಿಗೆ ಕರೆತರಲು ಅವನು ಅಲ್ಲೇ ನಿಧನನಾದನು.

## ಯೆಹೂದ ಕುಲದ ವಶವಾದ ಜೆರುಸಲೇಮ್ ಮತ್ತು ಹೆಬ್ರೋನ್

(ಯೆಹೋ. 15.13–19)

8 ಯೆಹೂದ ಕುಲದವರು ಜೆರುಸಲೇಮಿನೊಡನೆ ಯುದ್ಧಮಾಡಿದರು. ಆ ಜನರನ್ನು ಕತ್ತಿಗೆ
ತುತ್ತಾಗಿಸಿ ಅವರ ಪಟ್ಟಣವನ್ನು ಸುಟ್ಟು ಹಾಕಿದರು. [9]ಅನಂತರ ಅವರು ಪರ್ವತಪ್ರದೇಶ, ದಕ್ಷಿಣಸೀಮೆ
ಮತ್ತು ತಗ್ಗುಪ್ರದೇಶ ಇವುಗಳಿಗೆ ಹೋಗಿ ಅಲ್ಲಿದ್ದ ಕಾನಾನ್ಯರೊಡನೆ ಯುದ್ಧ ಮಾಡಿದರು. [10]'ಕಿರ್ಯತರ್ಬ'
ಎಂದು ಈ ಮುಂದೆ ಹೆಸರುಗೊಂಡಿದ್ದ ಹೆಬ್ರೋನಿಗೆ ಹೋಗಿ ಅಲ್ಲಿದ್ದ ಕಾನಾನ್ಯರ ಮೇಲೆ ದಾಳಿಮಾಡಿ
ಅವರಲ್ಲಿ ಶೇಷೈ, ಅಹೀಮನ್, ತಲ್ಮೈ ಎಂಬವರನ್ನು ಸೋಲಿಸಿದರು.

11 ಅಲ್ಲಿಂದ ದೆಬೀರಿನವರೆಗೆ ತೆರಳಿ ಅಲ್ಲಿಯವರ ವಿರುದ್ಧ ಯುದ್ಧಮಾಡಿದರು. ದೆಬೀರಕ್ಕೆ ಇದಕ್ಕೆ
ಮುಂಚೆ 'ಕಿರ್ಯತ್‍ಸೇಫೆರ್' ಎಂಬ ಹೆಸರಿತ್ತು. [12]ಕಿರ್ಯತ್‍ಸೇಫೆರನ್ನು ಹಿಡಿದುಕೊಳ್ಳುವವನಿಗೆ ತನ್ನ ಮಗಳು
'ಅಕ್ಸಾ' ಎಂಬಾಕೆಯನ್ನು ಕೊಟ್ಟು ಮದುವೆ ಮಾಡುವುದಾಗಿ ಕಾಲೇಬನು ಹೇಳಿದ್ದನು. [13]ಅಂತೆಯೇ ಅವನ
ತಮ್ಮನೂ ಕೆನಜನ ಮಗನೂ ಆದ ಒತ್ನೀಯೇಲನು ಅದನ್ನು ಹಿಡಿದುಕೊಂಡಾಗ ಕಾಲೇಬನು ತನ್ನ ಮಗಳು
ಅಕ್ಸಾ ಎಂಬಾಕೆಯನ್ನು ಆತನಿಗೆ ಮದುವೆಮಾಡಿಕೊಟ್ಟನು. [14]ಆಕೆ ಬಂದಾಗ ತನ್ನ ತಂದೆಯ ಬಳಿ
ಭೂಮಿಯನ್ನು ಕೇಳುವಂತೆ ಗಂಡನನ್ನು ಪ್ರೇರೇಪಿಸಿದಳು. ಆಕೆ ಕತ್ತೆಯಿಂದ ಇಳಿಯುವಾಗ ಕಾಲೇಬನು,
"ನಿನಗೇನು ಬೇಕು", ಎಂದು ಕೇಳಲು ಅವಳು, "ನನ್ನನ್ನು ಬೆಂಗಾಡಿಗೆ ಕೊಟ್ಟುಬಿಟ್ಟಿರಿ. [15]ಬುಗ್ಗೆಗಳಿರುವ
ಭೂಮಿಯನ್ನು ದಾನವಾಗಿಕೊಡಿ," ಎಂದಳು. ಕಾಲೇಬನು ಆಕೆಗೆ ಮೇಲಿನ ಹಾಗು ಕೆಳಗಿನ ಬುಗ್ಗೆಗಳನ್ನು
ದಾನ ಮಾಡಿದನು.

## ಯೆಹೂದ ಹಾಗು ಬೆನ್ಯಾಮಿನ್ ಕುಲದವರ ವಿಜಯಯಾತ್ರೆ

16 ಕೇನ್ಯನೂ ಮೋಶೆಯ ಮಾವನೂ ಆದ ಹೋಬಾಬನ ವಂಶದವರು ಖರ್ಜೂರ ನಗರದಿಂದ
ಹೊರಟು ಯೆಹೂದ ಕುಲದವರ ಜೊತೆಯಲ್ಲಿ ಆರಾದಿನ ದಕ್ಷಿಣದಲ್ಲಿರುವ ಯೆಹೂದ ಮರುಭೂಮಿಗೆ
ಬಂದು ಅಲ್ಲಿಯ ಜನರ ಸಂಗಡ ವಾಸಮಾಡಿದರು. 17ತರುವಾಯ ಯೆಹೂದಕುಲದವರು ತಮ್ಮ
ಬಂಧುಗಳಾದ ಸಿಮೆಯೋನ್ ಕುಲದವರ ಸಂಗಡ ಹೋಗಿ 'ಚೆಫತ್' ಎಂಬ ಪಟ್ಟಣದಲ್ಲಿದ್ದ ಕಾನಾನ್ಯರನ್ನು
ಸೋಲಿಸಿ ಆ ಪಟ್ಟಣವನ್ನು ಹಾಳುಮಾಡಿ ಅದನ್ನು 'ಹೋರ್ಮಾ' ಎಂದು ಕರೆದರು. 18ಅನಂತರ ಅವರು
ಗಾಜಾ, ಅಷ್ಕೆಲೋನ್, ಎಕ್ರೋನ್ ಎಂಬ ಪಟ್ಟಣಗಳನ್ನೂ ಅವುಗಳ ಮೇರೆಗಳನ್ನೂ
ಸ್ವಾಧೀನಮಾಡಿಕೊಂಡರು. 19ಸರ್ವೇಶ್ವರ ಯೆಹೂದ ಕುಲದವರ ಸಂಗಡ ಇದ್ದುದರಿಂದ ಅವರು ಪರ್ವತ
ಪ್ರದೇಶಗಳನ್ನೆಲ್ಲಾ ಸ್ವತಂತ್ರಿಸಿಕೊಂಡರು. ಆದರೆ ತಗ್ಗಿನ ಪ್ರದೇಶಗಳಲ್ಲಿ ವಾಸಿಸುವವರಿಗೆ ಕಬ್ಬಿಣ
ರಥಗಳಿದ್ದುದರಿಂದ ಅವರನ್ನು ಹೊರಗಟ್ಟಲು ಆಗಲಿಲ್ಲ. 20ಮೋಶೆ ಆಜ್ಞಾಪಿಸಿದಂತೆ ಅವರು ಕಾಲೇಬನಿಗೆ
ಹೆಬ್ರೋನ್ ಪಟ್ಟಣವನ್ನು ಕೊಟ್ಟರು; ಅವನು ಅನಾಕನ ಮೂರು ಮಂದಿ ಮಕ್ಕಳನ್ನು ಅಲ್ಲಿಂದ ಅಟ್ಟಿಬಿಟ್ಟನು.
21ಜೆರುಸಲೇಮಿನಲ್ಲಿದ್ದ ಯೆಬೂಸಿಯರನ್ನು ಹೊರಡಿಸಲು ಬೆನ್ಯಾಮಿನ್ಯರಿಂದ ಆಗದೆ ಹೋಯಿತು. ಅವರು
ಇಂದಿನವರೆಗೂ, ಬೆನ್ಯಾಮಿನ್ಯರ ಸಂಗಡ ಜೆರುಸಲೇಮಿನಲ್ಲೇ ವಾಸವಾಗಿ ಇದ್ದಾರೆ.

## ಜೋಸೆಫ್ ವಂಶೀಯರು

22 ಇವರ ಹಾಗೆಯೇ ಜೋಸೆಫನ ಕುಲದವರು ಹೊರಟು ಬೇತೇಲಿಗೆ ಬಂದರು. ಸರ್ವೇಶ್ವರಸ್ವಾಮಿ
ಅವರೊಂದಿಗೆ ಇದ್ದರು. 23ಅವರು 'ಲೂಜ್' ಎಂದು ಕರೆಯಲಾದ ಬೇತೇಲ್ ಊರನ್ನು ಸಂಚರಿಸಿನೋಡಲು
ಗೂಢಚಾರರನ್ನು ಕಳುಹಿಸಿದರು. 24ಇವರು ಆ ಊರೊಳಗಿಂದ ಬರುತ್ತಿದ್ದ ಒಬ್ಬ ವ್ಯಕ್ತಿಯನ್ನು ಕಂಡು,
"ದಯಮಾಡಿ, ಪಟ್ಟಣದೊಳಗೆ ನುಗ್ಗಬಹುದಾದ ದಾರಿಯನ್ನು ನಮಗೆ ತೋರಿಸಿಕೊಡು; ನಾವು ನಿನಗೆ
ಒಳ್ಳೆಯದನ್ನೇ ಮಾಡುತ್ತೇವೆ," ಎಂದರು. ಅವನು ಅವರಿಗೆ ಆ ದಾರಿಯನ್ನು ತೋರಿಸಿದನು. 25ಹೀಗೆ ಅವರು
ಆ ಪಟ್ಟಣವನ್ನು ಕತ್ತಿಗೆ ತುತ್ತಾಗಿಸಿದರು. ಆದರೆ ಆ ವ್ಯಕ್ತಿಯನ್ನು ಮತ್ತು ಅವನ ಕುಟುಂಬದವರನ್ನು
ಕಳುಹಿಸಿಬಿಟ್ಟರು. 26ಅವನು ಹಿತ್ತಿಯರ ದೇಶಕ್ಕೆ ಹೋಗಿ ಒಂದು ಪಟ್ಟಣವನ್ನು ಕಟ್ಟಿಕೊಂಡು ಅದಕ್ಕೆ 'ಲೂಜ್'
ಎಂದು ಹೆಸರಿಟ್ಟನು. ಅದಕ್ಕೆ ಇಂದಿನವರೆಗೂ ಅದೇ ಹೆಸರು ಉಳಿದಿದೆ.

## ಇಸ್ರಯೇಲರು ಹೊರದೂಡದೆ ಬಿಟ್ಟ ಅನ್ಯವಂಶೀಯರು

27 ಮನಸ್ಸೆ ಕುಲದವರು ಬೇತ್‍ಷೆಯಾನ್, ತಾನಾಕ್, ದೋರ್, ಇಬ್ಲೆಯಾಮ್, ಮೆಗಿದ್ದೋ ಎಂಬ
ಪಟ್ಟಣಗಳನ್ನೂ ಅವುಗಳ ಗ್ರಾಮಗಳನ್ನೂ ಸ್ವಾಧೀನಮಾಡಿಕೊಳ್ಳಲಿಲ್ಲ. ಆದುದರಿಂದ ಕಾನಾನ್ಯರು ಆ
ಪ್ರಾಂತ್ಯಗಳಲ್ಲೇ ವಾಸಿಸುವುದಕ್ಕೆ ನಿರ್ಧರಿಸಿಕೊಂಡರು. 28ಇಸ್ರಯೇಲರು ಬಲಗೊಂಡ ಮೇಲೆ ಅವರನ್ನು
ದಾಸತ್ವದಲ್ಲಿ ಇಟ್ಟುಕೊಂಡರೇ ಹೊರತು ಅಲ್ಲಿಂದ ಅಟ್ಟಿಬಿಡಲಿಲ್ಲ.

29 ಎಫ್ರಯಿಮ್ ಕುಲದವರು ಗೆಜೆರಿನಲ್ಲಿದ್ದ ಕಾನಾನ್ಯರನ್ನು ಹೊರಡಿಸಿಬಿಡಲಿಲ್ಲ. ಆದುದರಿಂದ
ಅವರು ಅವರ ನಡುವೆಯೇ ವಾಸಿಸಿದರು.

30 ಜೆಬುಲೂನ್ ಕುಲದವರು ಕಿಟ್ರೋನ್, ನಹಲೋಲ್ ಎಂಬ ಪಟ್ಟಣಗಳ ನಿವಾಸಿಗಳನ್ನು
ಅಟ್ಟಿಬಿಡಲಿಲ್ಲ. ಆದರೆ ಆ ಕಾನಾನ್ಯರು ಅವರಿಗೆ ಗುಲಾಮರಾಗಿ ಅವರ ಮಧ್ಯದಲ್ಲೇ ವಾಸಮಾಡಿದರು.

31 ಆಶೇರ್ಯ ಕುಲದವರು ಆಕ್ಕೋ, ಚೀದೋನ್, ಆಹ್ಲಾಬ್, ಅಕ್ಷೀಬ್, ಹೆಲ್ಬಾ, ರೆಹೋಬ್ ಎಂಬ
ಪಟ್ಟಣಗಳನ್ನು ಸ್ವಾಧೀನ ಮಾಡಿಕೊಳ್ಳಲಿಲ್ಲ; 32ಅವರು ಆ ದೇಶದ ಕಾನಾನ್ಯರನ್ನು ಹೊರಡಿಸದೆ ಅವರ
ಮಧ್ಯದಲ್ಲೇ ವಾಸಮಾಡಿದರು.

33 ನಫ್ತಾಲಿ ಕುಲದವರು ಬೇತ್‍ಷೆಮೆಷ್, ಬೇತನಾತ್ ಎಂಬ ಊರುಗಳನ್ನು ಸ್ವತಂತ್ರಿಸಿಕೊಳ್ಳದೆ
ಅಲ್ಲಿಯ ನಿವಾಸಿಗಳಾದ ಕಾನಾನ್ಯರ ಮಧ್ಯದಲ್ಲೇ ವಾಸಮಾಡಿದರು. ಮತ್ತು ಆ ಬೇತ್‍ಷೆಮೆಷ್, ಬೇತನಾತ್
ಊರುಗಳ ಜನರು ಅವರಿಗೆ ಗುಲಾಮರಾದರು.

34 ಇದಲ್ಲದೆ ಅಮೋರಿಯರು ದಾನ್ ಕುಲದವರನ್ನು ತಗ್ಗಿನ ಪ್ರದೇಶಕ್ಕೆ ಇಳಿಯಗೊಡದೆ ಹಿಂದಟ್ಟಿ
ಬೆಟ್ಟಗಳಿಗೆ ಓಡಿಸಿಬಿಟ್ಟರು. 35ಹೀಗೆ ಅಮೋರಿಯರು ಹರ್‌ಹೆರೆಸ್, ಅಯ್ಯಾಲೋನ್, ಶಾಲ್ಬೀಮ್ ಎಂಬ
ಊರುಗಳಲ್ಲೇ ವಾಸಿಸಲು ನಿರ್ಧಾರಮಾಡಿದರು. ಆದರೆ ಜೋಸೆಫ್ ಕುಲದವರ ಪ್ರಭಾವ ಹೆಚ್ಚಾದಮೇಲೆ
ಅವರಿಗೆ ಗುಲಾಮರಾದರು. 36ಅಮೋರಿಯರ ಮೇರೆಯು ಅಕ್ರಬ್ಬೀಮ್ ಕಣಿವೆಯಲ್ಲಿರುವ ಬಂಡೆಯಿಂದ
ಮೇಲಕ್ಕೆ ವಿಸ್ತರಿಸಿಕೊಂಡಿದೆ.

## ಬೋಕೀಮಿನಲ್ಲಿ ಸರ್ವೇಶ್ವರನ ದೂತ

**2** ಸರ್ವೇಶ್ವರಸ್ವಾಮಿಯ ದೂತನು ಗಿಲ್ಗಾಲಿನಿಂದ ಬೋಕೀಮಿಗೆ ಬಂದು ಇಸ್ರಯೇಲರಿಗೆ, "ನಾನು ನಿಮ್ಮನ್ನು
ಈಜಿಪ್ಟಿನಿಂದ ಬರಮಾಡಿ ನಿಮ್ಮ ಪೂರ್ವಜರಿಗೆ ಪ್ರಮಾಣಮಾಡಿದ ನಾಡಿಗೆ ಕರೆದುತಂದೆನು. ನಿಮ್ಮೊಡನೆ
ಮಾಡಿಕೊಂಡ ಒಡಂಬಡಿಕೆಯನ್ನು ಎಂದೂ ಭಂಗಪಡಿಸುವುದಿಲ್ಲ ಎಂದು ಮಾತುಕೊಟ್ಟೆನು. 2ಆಗ, ನೀವು
ಈ ನಾಡಿನ ನಿವಾಸಿಗಳ ಸಂಗಡ ಒಡಂಬಡಿಕೆಮಾಡಿ ಕೊಳ್ಳಬಾರದು, ಅವರ ಬಲಿಪೀಠಗಳನ್ನು ಕೆಡವಿ
ಬಿಡಬೇಕು ಎಂದು ಆಜ್ಞಾಪಿಸಿದೆನು. ಆದರೆ ನೀವು ನನ್ನ ಮಾತನ್ನು ಕೇಳಲಿಲ್ಲ. ಹೀಗೇಕೆ ಮಾಡಿದಿರಿ? 3ನೀವು
ಹೀಗೆ ಮಾಡುವುದಾದರೆ ನಾನು ಈ ನಾಡಿನ ನಿವಾಸಿಗಳನ್ನು ನಿಮ್ಮಿಂದ ಓಡಿಸಿಬಿಡುವುದಿಲ್ಲ. ಅವರು
ನಿಮ್ಮನ್ನು ಉಪದ್ರವಪಡಿಸುವರು. ಅವರ ದೇವತೆಗಳು ನಿಮ್ಮನ್ನು ತಮ್ಮ ಉರುಳಿನಲ್ಲಿ ಸಿಕ್ಕಿಸಿಕೊಳ್ಳುವುವು
ಎಂದು ನಿಮಗೆ ಮೊದಲೇ ಹೇಳಿದ್ದೇನೆ" ಎಂದನು. 4ಸರ್ವೇಶ್ವರನ ದೂತನು ಹೇಳಿದ ಈ ಮಾತುಗಳನ್ನು
ಕೇಳಿ ಇಸ್ರಯೇಲರೆಲ್ಲರು ಗಟ್ಟಿಯಾಗಿ ಅತ್ತರು. 5ಆದುದರಿಂದಲೇ ಆ ಸ್ಥಳಕ್ಕೆ 'ಬೋಕೀಮ್' ಎಂದು ಹೆಸರಿಟ್ಟು
ಅಲ್ಲಿಯೇ ಸರ್ವೇಶ್ವರನಿಗೆ ಬಲಿಯನ್ನರ್ಪಿಸಿದರು.

## ನ್ಯಾಯಾಧಿಪತಿಗಳ ಇತಿಹಾಸ:
## ಯೆಹೋಶುವನ ಮರಣ

6 ಯೆಹೋಶುವನು ಇಸ್ರಯೇಲರನ್ನು ಕಳುಹಿಸಿದ ಮೇಲೆ ಅವರು ತಮ್ಮ ತಮ್ಮ ಪಾಲಿಗೆ ಬಂದ
ಪ್ರದೇಶಗಳಿಗೆ ಹೋಗಿ ಅವುಗಳನ್ನು ಸ್ವತಂತ್ರಿಸಿಕೊಂಡರು. 7ಯೆಹೋಶುವನ ದಿನಗಳಲ್ಲೂ ಅವನ ಕಾಲದಿಂದ
ಇನ್ನೂ ಜೀವಿಸುತ್ತಿದ್ದ ಹಿರಿಯರ ದಿನಗಳಲ್ಲೂ ಇಸ್ರಯೇಲರು ಸರ್ವೇಶ್ವರನಿಗೆ ಸೇವೆಸಲ್ಲಿಸುತ್ತಾ ಬಂದರು.
ಈ ಹಿರಿಯರು ಸರ್ವೇಶ್ವರ ಇಸ್ರಯೇಲರ ಪರವಾಗಿ ಮಾಡಿದ ಮಹತ್ಕಾರ್ಯಗಳಿಗೆ ಸಾಕ್ಷಿಗಳಾಗಿದ್ದರು.
8ಸರ್ವೇಶ್ವರನ ದಾಸ ನೂನನ ಮಗ ಯೆಹೋಶುವನು ನೂರಹತ್ತು ವರ್ಷದವನಾಗಿ ಮರಣಹೊಂದಿದನು.
9ಅವನನ್ನು ಅವನ ಸ್ವಾಸ್ತ್ಯಭೂಮಿಯಾದ ತಿಮ್ನತ್‌ಹೆರೆಸ್ ಎಂಬಲ್ಲಿ ಸಮಾಧಿಮಾಡಿದರು. ಅದು ಎಫ್ರಯಿಮ್
ಪರ್ವತಪ್ರದೇಶದಲ್ಲಿರುವ ಗಾಷ್ ಬೆಟ್ಟದ ಉತ್ತರದಿಕ್ಕಿನಲ್ಲಿದೆ 10ಅವನ ಕಾಲದವರೆಲ್ಲರೂ ತಮ್ಮ
ಪೂರ್ವಜರಂತೆ ದೈವಾಧೀನರಾದ ಮೇಲೆ ಬೇರೊಂದು ಸಂತಾನ ಹುಟ್ಟಿಕೊಂಡಿತು. ಇವರು
ಸರ್ವೇಶ್ವರಸ್ವಾಮಿಯನ್ನು ಮರೆತರು; ಇಸ್ರಯೇಲರಿಗೆ ಮಾಡಿದ ಮಹತ್ಕಾರ್ಯಗಳ ನೆನಪು ಇವರಿಗೆ
ಇರಲಿಲ್ಲ.

## ಸತ್ಯದೇವರ ಮರೆತ, ಅನ್ಯದೇವತೆಗಳಿಗೆ ಶರಣಾಗತ

11 ಈ ಇಸ್ರಯೇಲರು ಬಾಳ್ ದೇವತೆಯ ಪ್ರತಿಮೆಗಳನ್ನು ಪೂಜಿಸಿ ಸರ್ವೇಶ್ವರನ ದೃಷ್ಟಿಯಲ್ಲಿ
ದ್ರೋಹಿಗಳಾದರು. 12ತಮ್ಮ ಪೂರ್ವಜರನ್ನು ಈಜಿಪ್ಟಿನಿಂದ ಕರೆದುತಂದ ದೇವರಾದ ಸರ್ವೇಶ್ವರನನ್ನು ಬಿಟ್ಟು
ಅನ್ಯದೇವತೆಗಳನ್ನು ಅಂದರೆ, ತಮ್ಮ ಸುತ್ತಮುತ್ತಲಿನ ಜನಾಂಗಗಳ ದೇವರುಗಳನ್ನು ಅವಲಂಬಿಸಿ ಅವುಗಳಿಗೆ
ಅಡ್ಡಬಿದ್ದು ಸರ್ವೇಶ್ವರನನ್ನು ರೇಗಿಸಿದರು. 13ಅವರು ಸರ್ವೇಶ್ವರನನ್ನು ಬಿಟ್ಟು 'ಬಾಳ್ ಅಷ್ಟೋರೆತ್' ಎಂಬ
ದೇವತೆಗಳನ್ನು ಪೂಜಿಸತೊಡಗಿದರು. 14ಆದ್ದರಿಂದ ಸರ್ವೇಶ್ವರನ ಕೋಪ ಅವರ ಮೇಲೆ ಉರಿಯಹತ್ತಿತು;
ಅವರನ್ನು ಕೊಳ್ಳೆಹೊಡೆಯುವವರ ಕೈಗೆ ಒಪ್ಪಿಸಿದರು. ಶತ್ರುಗಳು ಅವರನ್ನು ಸುಲಿಗೆ ಮಾಡಿದರು. ಸರ್ವೇಶ್ವರ
ಅವರನ್ನು ಅಕ್ಕಪಕ್ಕದ ವೈರಿಗಳಿಗೆ ಮಾರಿಬಿಟ್ಟರು. ಆ ಶತ್ರುಗಳ ಮುಂದೆ ಇಸ್ರಯೇಲರು ನಿಲ್ಲಲಾರದೆ

ಹೋದರು. [15]ಮೊದಲೇ ಆಣೆಯಿಟ್ಟು ಹೇಳಿದಂತೆ ಅವರು ಎಲ್ಲಿಗೆ ಹೋದರೂ ಸರ್ವೇಶ್ವರನ ಕೈ ಅವರಿಗೆ
ವಿರೋಧವಾಗಿಯೇ ಇತ್ತು. ಅವರಿಗೆ ಬಹಳ ದುಃಖ ಉಂಟಾಯಿತು.

16 ಆಗ ಸರ್ವೇಶ್ವರ ಅವರನ್ನು ಸೂರೆ ಮಾಡುವವರ ಕೈಯಿಂದ ತಪ್ಪಿಸಲು ನ್ಯಾಯಾಧಿಪತಿಗಳನ್ನು
ಕಳುಹಿಸಿದರು. [17]ಇಸ್ರಯೇಲರು ಇವರ ಮಾತನ್ನೂ ಕೇಳದೆ ಅನ್ಯದೇವತೆಗಳನ್ನು ಪೂಜಿಸಿ ಅವುಗಳಿಗೆ
ಅಡ್ಡಬಿದ್ದು ದೇವದ್ರೋಹಿಗಳಾದರು. ಸರ್ವೇಶ್ವರನ ಆಜ್ಞೆಗಳನ್ನು ಪಾಲಿಸುತ್ತಿದ್ದ ತಮ್ಮ ಪೂರ್ವಜರ
ಮಾರ್ಗವನ್ನು ಬೇಗನೆ ತ್ಯಜಿಸಿಬಿಟ್ಟರು. ಅವರಂತೆ ನಡೆಯಲೇ ಇಲ್ಲ. [18]ವೈರಿಗಳ ಹಿಂಸೆಯನ್ನು ತಾಳಲಾರದೆ
ಇಸ್ರಯೇಲರು ಗೋಳು ಇಟ್ಟರು. ಸರ್ವೇಶ್ವರ ಅದನ್ನು ಕೇಳಿ ಕನಿಕರಪಟ್ಟು ನ್ಯಾಯಾಧಿಪತಿಗಳನ್ನು
ಕಳುಹಿಸಿಕೊಟ್ಟರು; ಜೀವಮಾನವೆಲ್ಲ ಅವರ ಸಂಗಡವೇ ಇದ್ದು ಅವರ ಮುಖಾಂತರ ಇಸ್ರಯೇಲರನ್ನು
ಶತ್ರುಗಳಿಂದ ಬಿಡಿಸಿದರು. ತಮ್ಮನ್ನು ಹಿಂಸಿಸುತ್ತಿದ್ದವರ ಕಾಟವನ್ನು ತಾಳದೆ ಮೊರೆಯಿಡುವುದನ್ನು ಸರ್ವೇಶ್ವರ
ಕೇಳಿ ಮನಮರುಗಿದರು. [19]ಅಂಥ ನ್ಯಾಯಾಧಿಪತಿಗಳು ತೀರಿಹೋದ ನಂತರ ಇಸ್ರಯೇಲರು ಮತ್ತೆ ತಮ್ಮ
ಹಿಂದಿನವರಿಗಿಂತಲೂ ಭ್ರಷ್ಟರಾಗಿ ಅನ್ಯದೇವತೆಗಳನ್ನು ಅವಲಂಬಿಸಿ, ಅವುಗಳಿಗೆ ಸೇವೆಮಾಡಿ ಅಡ್ಡಬಿದ್ದರು.
ಅವರು ತಮ್ಮ ದುರ್ಮಾರ್ಗವನ್ನೂ ಹಠಮಾರಿತನವನ್ನೂ ಬಿಡಲೇಇಲ್ಲ. [20]ಆದ್ದರಿಂದ ಸರ್ವೇಶ್ವರನ ಕೋಪ
ಇಸ್ರಯೇಲರ ಮೇಲೆ ಉರಿಯುತ್ತಲೇ ಇತ್ತು; "ಈ ಜನರ ಪೂರ್ವಜರಿಗೆ ನಾನು ಕೊಟ್ಟ ನಿಬಂಧನೆಯನ್ನು
ಇವರು ಪಾಲಿಸಲಿಲ್ಲ, ನನ್ನ ಮಾತಿಗೆ ಕಿವಿಗೊಡಲಿಲ್ಲ. [21]ಆದ್ದರಿಂದ ಯೆಹೋಶುವನು ಸಾಯುವ ಮೊದಲು
ಹೊರಗಟ್ಟದೆ ಬಿಟ್ಟ ಜನಾಂಗಗಳಲ್ಲಿ ಒಂದನ್ನಾದರೂ ನಾನು ಹೊರಡಿಸುವುದಿಲ್ಲ. [22]ಇವರು ತಮ್ಮ
ಹಿರಿಯರಂತೆ ಜಾಗರೂಕತೆಯಿಂದ ಸರ್ವೇಶ್ವರನಾದ ನನ್ನ ಮಾರ್ಗದಲ್ಲಿ ನಡೆಯುವರೋ ಇಲ್ಲವೋ ಎಂದು
ಈ ಜನಾಂಗಗಳ ಮುಖಾಂತರವೇ ಪರೀಕ್ಷಿಸುವೆನು," ಎಂದುಕೊಂಡರು. [23]ಈ ಕಾರಣ ಸರ್ವೇಶ್ವರಸ್ವಾಮಿ
ಯೆಹೋಶುವನ ಕೈಗೆ ಒಪ್ಪಿಸದೆ ಉಳಿಸಿದ್ದ ಜನಾಂಗಗಳನ್ನು ಬೇಗನೆ ಅಟ್ಟಿಬಿಡಲಿಲ್ಲ.

### ನಾಡಿನಲ್ಲೇ ಉಳಿದ ಅನ್ಯಜನಾಂಗಗಳು

**3** ಕಾನಾನ್ಯರೊಡನೆ ನಡೆದ ಯುದ್ಧಗಳಲ್ಲಿ ಒಂದರಲ್ಲೂ ಪಾಲ್ಗೊಳ್ಳದೆ ಇದ್ದ ಇಸ್ರಯೇಲರನ್ನು
ಪರೀಕ್ಷಿಸುವುದಕ್ಕೂ [2]ಇಸ್ರಯೇಲ್ ಸಂತತಿಯವರಲ್ಲಿ ಯುದ್ಧವಿದ್ಯೆ ಅರಿಯದವರಿಗೆ ಅದನ್ನು ಕಲಿಸುವುದಕ್ಕೂ
ಸರ್ವೇಶ್ವರ ಆ ನಾಡಿನಲ್ಲೇ ಉಳಿಸಿದ ಅನ್ಯಜನಾಂಗದವರು ಇವರು: [3]ಐದುಮಂದಿ ಫಿಲಿಷ್ಟಿಯ ಪ್ರಭುಗಳು,
ಸರ್ವಕಾನಾನ್ಯರು, ಸಿದೋನ್ಯರು, ಲೆಬನೋನ್ ಪರ್ವತದಲ್ಲಿ ಬಾಳ್ ಹೆರ್ಮೋನ್ ಬೆಟ್ಟದಿಂದ ಹಮಾತಿನ
ದಾರಿಯವರೆಗೆ ವಾಸವಾಗಿರುವ ಹಿವ್ವಿಯರು. [4]ತಾವು ಮೋಶೆಯ ಮೂಲಕ ಇವರ ಪೂರ್ವಜರಿಗೆ ವಿಧಿಸಿದ
ಆಜ್ಞೆಗಳನ್ನು ಇಸ್ರಯೇಲರು ಕೈಗೊಂಡು ನಡೆಯುವರೋ ಇಲ್ಲವೋ ಎಂಬುದನ್ನು ಪರೀಕ್ಷಿಸಿ
ತಿಳಿದುಕೊಳ್ಳುವುದಕ್ಕಾಗಿ ಸರ್ವೇಶ್ವರ ಅವರನ್ನು ಉಳಿಸಿದರು. [5]ಇಸ್ರಯೇಲರು ಕಾನಾನ್ಯ, ಹಿತ್ತಿಯ,
ಅಮೋರಿಯ, ಪೆರಿಜ್ಜೀಯ, ಹಿವ್ವಿಯ, ಯೆಬೂಸಿಯ ಎಂಬೀ ಜನಾಂಗಗಳ ಮಧ್ಯದಲ್ಲಿ ವಾಸಮಾಡುತ್ತಾ
[6]ಅವರ ಕನ್ಯೆಯರನ್ನು ತಾವು ತಂದು ತಮ್ಮ ಕನ್ಯೆಯರನ್ನು ಅವರ ಕುಮಾರರಿಗೆ ಕೊಟ್ಟು ಅವರ
ದೇವತೆಗಳನ್ನು ಪೂಜಿಸಿದರು.

### ನ್ಯಾಯಾಧಿಪತಿಗಳು: ಒತ್ನೀಯೇಲ್

7 ಇಸ್ರಯೇಲರು ಬಾಳ್, ಅಶೇರ ಎಂಬ ದೇವತೆಗಳನ್ನು ಪೂಜಿಸಿ ತಮ್ಮ ದೇವರಾದ
ಸರ್ವೇಶ್ವರನನ್ನು ಮರೆತುಬಿಟ್ಟರು. ಅವರ ದೃಷ್ಟಿಯಲ್ಲಿ ದ್ರೋಹಿಗಳಾದರು. [8]ಆದುದರಿಂದ ಸರ್ವೇಶ್ವರ
ಇಸ್ರಯೇಲರ ಮೇಲೆ ಕೋಪಗೊಂಡು ಅವರನ್ನು ಎರಡು ನದಿಗಳ ಮಧ್ಯದಲ್ಲಿರುವ ಅರಾಮ್ ರಾಜ್ಯದ
ಅರಸ ಕೂಷನ್ ರಿಷಾತಯಿಮ್ ಎಂಬವನಿಗೆ ಮಾರಿಬಿಟ್ಟರು. ಈ ಕಾರಣ ಇಸ್ರಯೇಲರು ಎಂಟು
ವರ್ಷಗಳವರೆಗೆ ಅವನಿಗೆ ಗುಲಾಮರಾಗಿದ್ದರು. [9]ಇಸ್ರಯೇಲರು ಮೊರೆಯಿಟ್ಟಾಗ ಅವರನ್ನು
ಬಿಡುಗಡೆಮಾಡಲು ಸರ್ವೇಶ್ವರ ಒಬ್ಬ ವ್ಯಕ್ತಿಯನ್ನು ಎಬ್ಬಿಸಿದರು; ಆತನೇ ಕಾಲೇಬನ ತಮ್ಮನೂ ಕೆನಜನ
ಮಗನೂ ಆದ ಒತ್ನೀಯೇಲ್. [10]ಸರ್ವೇಶ್ವರನ ಆತ್ಮ ಅವನ ಮೇಲೆ ಬಂದುದರಿಂದ ಅವನು ಇಸ್ರಯೇಲರಿಗೆ

ನ್ಯಾಯದೊರಕಿಸಲು ಯುದ್ಧಕ್ಕೆ ಹೊರಟನು. ಎರಡು ನದಿಗಳ ಮಧ್ಯೆಯಿರುವ ಅರಾಮ್ ರಾಜ್ಯದ ಅರಸ
ಕೂಷನ್ ರಿಷಾತಯಿಮನನ್ನು ಸರ್ವೇಶ್ವರ ಆತನ ಕೈಗೊಪ್ಪಿಸಿದ್ದರಿಂದ ಅವನನ್ನು ಸಂಪೂರ್ಣವಾಗಿ
ಸೋಲಿಸಿಬಿಟ್ಟನು. 11ನಾಡಿನಲ್ಲಿ ನಾಲ್ವತ್ತು ವರ್ಷಗಳ ಕಾಲ ನೆಮ್ಮದಿ ನೆಲಸಿತ್ತು. ತರುವಾಯ ಕೆನಜನ ಮಗ
ಒತ್ನೀಯೇಲನು ಮರಣ ಹೊಂದಿದನು.

**ಏಹೂದ**

12 ಇಸ್ರಯೇಲರು ಮತ್ತೆ ಸರ್ವೇಶ್ವರನ ದೃಷ್ಟಿಯಲ್ಲಿ ದ್ರೋಹಿಗಳಾದರು. ಮೋವಾಬ್ಯರ ಅರಸ
ಎಗ್ಲೋನನನ್ನು ಇಸ್ರಯೇಲರಿಗೆ ವಿರುದ್ಧ ಸರ್ವೇಶ್ವರ ಬಲಪಡಿಸಿದರು. 13ಎಗ್ಲೋನನು ಅಮ್ಮೋನಿಯರನ್ನೂ
ಅಮಾಲೇಕ್ಯರನ್ನೂ ಕೂಡಿಸಿಕೊಂಡು ಬಂದು ಇಸ್ರಯೇಲರನ್ನು ಸೋಲಿಸಿ ಖರ್ಜೂರ ನಗರವನ್ನು
ಗೆದ್ದುಕೊಂಡನು. 14ಹದಿನೆಂಟು ವರ್ಷಕಾಲ ಇಸ್ರಯೇಲರು ಅವನಿಗೆ ಗುಲಾಮರಾಗಿದ್ದರು.

15 ಆಗ ಇಸ್ರಯೇಲರು ಸರ್ವೇಶ್ವರನಿಗೆ ಮೊರೆಯಿಟ್ಟರು. ಅವರನ್ನು ಬಿಡುಗಡೆಮಾಡಲು
ಬೆನ್ಯಾಮೀನ್ ಕುಲದ ಗೇರನ ಮಗ ಏಹೂದನನ್ನು ವಿಮೋಚಕನಾಗಿ ಕಳುಹಿಸಲಾಯಿತು. ಅವನೊಬ್ಬ
ಎಡಚ. ಇಸ್ರಯೇಲರು ಅವನ ಮುಖಾಂತರ ಮೋವಾಬ್ಯರ ಅರಸ ಎಗ್ಲೋನನಿಗೆ ಕಪ್ಪ ಕಾಣಿಕೆಯನ್ನು
ಕಳುಹಿಸಿದರು. 16ಅವನು ತನಗಾಗಿ ಒಂದುವರೆ ಅಡಿ ಉದ್ದವಾದ ಇಬ್ಬಾಯಿ ಕತ್ತಿಯನ್ನು ಮಾಡಿ ಅದನ್ನು
ಬಟ್ಟೆಗಳ ಒಳಗೆ, ಬಲಗಡೆಯ ಸೊಂಟಕ್ಕೆ ಕಟ್ಟಿಕೊಂಡು ಹೋದನು. 17ಮೋವಾಬ್ಯರ ಅರಸ ಎಗ್ಲೋನನಿಗೆ
ಕಾಣಿಕೆಯನ್ನು ಒಪ್ಪಿಸಿದನು. ಎಗ್ಲೋನನು ಬಹಳ ದಪ್ಪನಾದ ವ್ಯಕ್ತಿ. 18ಏಹೂದನು ಕಾಣಿಕೆಯನ್ನು ಒಪ್ಪಿಸಿದ
ಮೇಲೆ ಅದನ್ನು ಹೊತ್ತು ತಂದ ಆಳುಗಳನ್ನು ಕಳುಹಿಸಿಬಿಟ್ಟನು. 19ತಾನಾದರೋ ಗಿಲ್ಗಾಲಿನಲ್ಲಿರುವ
ವಿಗ್ರಹಸ್ಥಳದವರೆಗೆ ಹೋಗಿ, ಹಿಂದಿರುಗಿ ಎಗ್ಲೋನನ ಬಳಿಗೆ ಬಂದನು; "ಅರಸರೇ, ತಮಗೆ ತಿಳಿಸಬೇಕಾದ
ಒಂದು ರಹಸ್ಯ ವಿಷಯವಿದೆ," ಎಂದನು. ಆಗ ಅರಸ, "ನಿಶ್ಯಬ್ದ" ಎಂದನು. ಅವನ ಸೇವಕರೆಲ್ಲರು ಅಲ್ಲಿಂದ
ಹೊರಗೆ ಹೋದರು.

20 ಅರಸನು ತನ್ನ ತಂಪಾದ ಮೇಲುಪ್ಪರಿಗೆಯಲ್ಲಿ ಒಬ್ಬನೇ ಕುಳಿತುಕೊಂಡಿದ್ದಾಗ ಏಹೂದನು
ಅವನ ಬಳಿಗೆ ಬಂದನು; "ನಿಮಗೆ ತಿಳಿಸಬೇಕಾದ ಒಂದು ದೈವೋಕ್ತಿ ಇದೆ," ಎಂದನು. ಅರಸನು ತನ್ನ
ಸಿಂಹಾಸನದಿಂದ ಎದ್ದು ನಿಂತನು. 21ಆಗ ಏಹೂದನು ಎಡಗೈ ಚಾಚಿ, ಬಲಗಡೆಯ ಸೊಂಟಕ್ಕೆ ಕಟ್ಟಿದ್ದ
ಕತ್ತಿಯನ್ನು ಹಿರಿದು ಅವನ ಹೊಟ್ಟೆಯನ್ನು ತಿವಿದನು. 22ಆ ಕತ್ತಿ ಹಿಡಿಯ ಸಮೇತ ಹೊಟ್ಟೆಯನ್ನು ಹೊಕ್ಕಿತು.
ಏಹೂದನು ಕತ್ತಿಯನ್ನು ಹೊರಗೆ ತೆಗೆಯಲಿಲ್ಲ. ಬೊಜ್ಜು ಅದನ್ನು ಮುಚ್ಚಿಕೊಂಡಿತ್ತು. ಮಲ ಹೊರಗೆ
ಬಂದಿತು. 23ಏಹೂದನು ಆ ಮೇಲುಪ್ಪರಿಗೆಯ ಕದವನ್ನು ಮುಚ್ಚಿ, ಅಗಳಿ ಹಾಕಿ ಪಡಸಾಲೆಯ ಮೂಲಕ
ಹೊರಟು ಹೋದನು. 24ತರುವಾಯ ಸೇವಕರು ಅಲ್ಲಿಗೆ ಬಂದು ಬಾಗಿಲಿಗೆ ಅಗಳಿ ಹಾಕಿರುವುದನ್ನು ಕಂಡು,
"ಅರಸ ತಂಪಾದ ಕೊಠಡಿಗೆ ಸೇರಿದ ಪಾಯಖಾನೆಗೆ ಹೋಗಿರಬೇಕೆಂದು, 25ತಮಗೆ ಬೇಸರವಾಗುವ ತನಕ
ಕಾಯುತ್ತಾ ಇದ್ದರು. ಆದರೂ ಅರಸ ಕದಗಳನ್ನು ತೆರೆಯದೆ ಇರುವುದನ್ನು ನೋಡಿ ಬೀಗದ ಕೈಯಿಂದ
ತಾವೇ ಬಾಗಿಲು ತೆರೆದರು. ಇಗೋ, ಅವರ ಒಡೆಯ ನೆಲದ ಮೇಲೆ ಸತ್ತುಬಿದ್ದಿದ್ದನು!

26 ಅವರು ಕಾಯ್ದಿದ್ದ ಸಮಯದಲ್ಲೇ ಏಹೂದನು ತಪ್ಪಿಸಿಕೊಂಡು ವಿಗ್ರಹಗಳಿದ್ದ ಸ್ಥಳದಲ್ಲಿ ನದಿ
ದಾಟಿ 27ಸೆಯಿರಾ ಎಂಬಲ್ಲಿಗೆ ಬಂದು ಎಫ್ರಯಿಮ್ ಪರ್ವತಪ್ರದೇಶದಲ್ಲಿ ಕಹಳೆಯನ್ನು ಊದಿದನು.
ಕೂಡಲೆ ಇಸ್ರಯೇಲರು ಅವನ ಬಳಿಗೆ ಬಂದು, ಗುಡ್ಡದಿಂದ ಇಳಿದು ಅವನ ಸಂಗಡ ಹೊರಟರು.
28ಏಹೂದನು ಅವರಿಗೆ ನಾಯಕನಾಗಿ, "ನನ್ನನ್ನು ಹಿಂಬಾಲಿಸಿ ಬನ್ನಿ; ಸರ್ವೇಶ್ವರ ನಿಮ್ಮ ಶತ್ರುಗಳಾದ
ಮೋವಾಬ್ಯರನ್ನು ನಿಮ್ಮ ಕೈಗೊಪ್ಪಿಸಿದ್ದಾರೆ," ಎಂದನು. ಅಂತೆಯೇ ಅವರು ಅವನನ್ನು ಹಿಂಬಾಲಿಸಿ
ಮೋವಾಬಿಗೆ ಹೋಗುವ ಹಾಯಗಡಗಳನ್ನೆಲ್ಲ ಹಿಡಿದುಕೊಂಡು ಯಾರನ್ನೂ ದಾಟಗೊಡಲಿಲ್ಲ. 29ಅಂದು
ಅವರು ಸುಮಾರು ಹತ್ತು ಸಾವಿರ ಮಂದಿ, ಪುಷ್ಟ ಹಾಗು ಪರಾಕ್ರಮಿಗಳಾದ ಮೋವಾಬ್ಯರನ್ನು ಸದೆಬಡಿದರು.
ಒಬ್ಬನೂ ತಪ್ಪಿಸಿಕೊಳ್ಳಲಾಗಲಿಲ್ಲ. 30ಮೋವಾಬ್ಯರು ಇಸ್ರಯೇಲರಿಗೆ ಶರಣಾದರು; ನಾಡಿನಲ್ಲಿ ಎಂಬತ್ತು ವರ್ಷ
ನೆಮ್ಮದಿ ಇತ್ತು.

## ಶಮ್ಗರ

31 ಏಹೂದನ ಬಳಿಕ ಅನಾತನ ಮಗ ಶಮ್ಗರನು ಮುಂದೆಬಂದು ಎತ್ತಿನ ಮುಳ್ಳುಗೋಲಿನಿಂದ ಆರುನೂರು ಮಂದಿ ಫಿಲಿಷ್ಟಿಯರನ್ನು ಕೊಂದು ಇಸ್ರಯೇಲರನ್ನು ಕಾಪಾಡಿದನು.

## ದೆಬೋರಾ ಮತ್ತು ಬಾರಾಕ್

**4** ಏಹೂದನು ನಿಧನನಾದ ನಂತರ ಇಸ್ರಯೇಲರು ಪುನಃ ಸರ್ವೇಶ್ವರನ ದೃಷ್ಟಿಯಲ್ಲಿ ದ್ರೋಹಿಗಳಾದರು.
[2]ಈ ಕಾರಣ ಸರ್ವೇಶ್ವರ ಅವರನ್ನು ಹಾಚೋರಿನಲ್ಲಿ ಆಳುತ್ತಿದ್ದ ಕಾನಾನ್ಯ ರಾಜನಾದ ಯಾಬೀನನಿಗೆ
ವಶಪಡಿಸಿದರು. ಮ್ಲೇಚ್ಛರ ಹರೋಷೆತ್ ಎಂಬ ಪಟ್ಟಣದಲ್ಲಿ ವಾಸವಾಗಿದ್ದ ಸೀಸೆರನು ಅವನ ಸೇನಾಪತಿ
ಆಗಿದ್ದನು. [3]ಒಂಭೈನೂರು ಕಬ್ಬಿಣದ ರಥಗಳನ್ನು ಪಡೆದಿದ್ದ ಇವನು ಇಸ್ರಯೇಲರನ್ನು ಇಪ್ಪತ್ತು ವರ್ಷಕಾಲ
ದಬ್ಬಾಳಿಕೆಗೆ ಈಡುಪಡಿಸಿದನು. ಆಗ ಅವರು ಸರ್ವೇಶ್ವರನಿಗೆ ಮೊರೆಯಿಟ್ಟರು.

4 ಆ ಕಾಲದಲ್ಲಿ ಲಪ್ಪೀದೋತನ ಹೆಂಡತಿ, ದೆಬೋರಳೆಂಬ ಪ್ರವಾದಿನಿ ಇಸ್ರಯೇಲರಲ್ಲಿ ನ್ಯಾಯ
ತೀರಿಸುತ್ತಿದ್ದಳು. [5]ಆಕೆ ಎಫ್ರಯಿಮ್ ಬೆಟ್ಟದ ಸೀಮೆಯಲ್ಲಿ ರಾಮಕ್ಕೂ ಬೇತೇಲಿಗೂ ಮಧ್ಯದಲ್ಲಿರುವ
'ದೆಬೋರಳ ಖರ್ಜೂರ ವೃಕ್ಷ'ವೆಂದು ಹೆಸರುಗೊಂಡ ಮರದ ಕೆಳಗೆ ಆಸೀನಳಾಗಿರುತ್ತಿದ್ದಳು. ಇಸ್ರಯೇಲರು
ನ್ಯಾಯತೀರ್ಪಿಗಾಗಿ ಆಕೆಯ ಬಳಿಗೆ ಬರುತ್ತಿದ್ದರು. [6]ಆಕೆ ನಫ್ತಾಲಿ ದೇಶದ ಕೆದೆಷ್ ಊರಿನಲ್ಲಿದ್ದ
ಅಬೀನೋವಮನ ಮಗ ಬಾರಾಕನನ್ನು ಬರಹೇಳಿ ಅವನಿಗೆ, "ನಿಶ್ಚಯವಾಗಿ ಇಸ್ರಯೇಲರ ದೇವರಾದ
ಸರ್ವೇಶ್ವರ ನಿನಗೆ ಆಜ್ಞಾಪಿಸಿದ್ದಾರೆ: 'ನೀನೆದ್ದು ನಫ್ತಾಲಿ ಮತ್ತು ಜೆಬುಲೂನ್ ಕುಲಗಳಿಂದ ಹತ್ತುಸಾವಿರ
ಜನರನ್ನು ಕೂಡಿಸಿಕೊಂಡು ತಾಬೋರ್ ಬೆಟ್ಟಕ್ಕೆ ಹೋಗು; [7]ಯಾಬೀನನ ಸೇನಾಪತಿ ಸೀಸೆರನನ್ನು ನಿನ್ನ
ಬಳಿಗೆ ಕೀಷೋನ್ ಹಳ್ಳಕ್ಕೆ ಎಳೆದುಕೊಂಡು ಬರುವರು. ಅವನಿಗೆ ರಥಗಳೂ ಸೇನಾಪಡೆಗಳೂ ಇದ್ದರೂ
ನಾನು ನಿನಗೆ ಜಯವನ್ನು ದೊರಕಿಸುವೆನು'," ಎಂದಳು.

8 ಬಾರಾಕನು ಆಕೆಗೆ, "ನೀನು ನನ್ನ ಸಂಗಡ ಬರುವುದಾದರೆ ಹೋಗುತ್ತೇನೆ; ಇಲ್ಲವಾದರೆ ಹೋಗುವುದಿಲ್ಲ," ಎಂದನು.

9 ಆಕೆ, "ನಾನು ಹೇಗೂ ನಿನ್ನ ಸಂಗಡ ಬರುವೆನು; ಆದರೆ ಈ ಯುದ್ಧದಿಂದ ನಿನಗೆ
ಗೌರವಗಿಟ್ಟದು; ಏಕೆಂದರೆ ಸರ್ವೇಶ್ವರ ಸೀಸೆರನನ್ನು ಒಬ್ಬ ಮಹಿಳೆಗೆ ಒಪ್ಪಿಸಿಕೊಡುವರು," ಎಂದು ಹೇಳಿ
ಬಾರಾಕನೊಡನೆ ಕೆದೆಷಿಗೆ ಹೋದಳು. [10]ಬಾರಾಕನು ಜೆಬುಲೂನ್ಯರನ್ನೂ, ನಫ್ತಾಲ್ಯರನ್ನೂ ಕೆದೆಷಿಗೆ
ಕರೆಸಿದನು. ಅವರಲ್ಲಿ ಹತ್ತು ಸಾವಿರ ಮಂದಿ ಅವನ ಹೆಜ್ಜೆಹಿಡಿದು ಯುದ್ಧಕ್ಕೆ ಹೋದರು. ದೆಬೋರಳೂ
ಹೋದಳು.

11 ಕೇನ್ಯನಾದ ಹೆಬೆರನು ಮೋಶೆಯ ಮಾವ ಹೋಬಾಬನ ವಂಶದ ಉಳಿದ ಕೇನ್ಯರನ್ನು ಬಿಟ್ಟು ಕೆದೆಷಿನ ಹತ್ತಿರ ಇರುವ 'ಚಾನನ್ನೀಮ್' ಎಂಬ ಊರಿನ ಏಲೋನ್ ವೃಕ್ಷದವರೆಗೆ ಬಂದು ಅಲ್ಲಿ ಗುಡಾರ ಹಾಕಿಕೊಂಡಿದ್ದನು.

12 ಅಬೀನೋವಮನ ಮಗ ಬಾರಾಕನು ತಾಬೋರ್ ಬೆಟ್ಟವನ್ನೇರಿ ಬಂದಿದ್ದಾನೆಂಬ ವರ್ತಮಾನ
ಸೀಸೆರನಿಗೆ ಮುಟ್ಟಿದಾಗ [13]ಅವನು ತನ್ನ ಒಂಭೈನೂರು ಕಬ್ಬಿಣದ ರಥಗಳನ್ನೂ ಎಲ್ಲಾ ಸೈನ್ಯವನ್ನೂ
ತೆಗೆದುಕೊಂಡು ಮ್ಲೇಚ್ಛರ ಹರೋಷೆತಿನಿಂದ ಕೀಷೋನ್ ಹಳ್ಳಕ್ಕೆ ಬಂದನು.

14 ಆಗ ದೆಬೋರಳು ಬಾರಾಕನಿಗೆ, "ಏಳು, ಸರ್ವೇಶ್ವರ ಸೀಸೆರನನ್ನು ನಿನ್ನ ಕೈಗೆ ಒಪ್ಪಿಸುವ ದಿನ
ಇದೇ; ನಿಶ್ಚಯವಾಗಿ ಅವರು ತಾವೇ ನಿನ್ನ ಮುಂದಾಗಿ ಯುದ್ಧಕ್ಕೆ ಹೊರಡುವರು," ಎಂದಳು. ಬಾರಾಕನು
ಬೇಗನೆ ಹತ್ತು ಸಾವಿರ ಜನರ ಸಹಿತ ತಾಬೋರ್ ಬೆಟ್ಟದಿಂದಿಳಿದನು. [15]ಸರ್ವೇಶ್ವರ ಸೀಸೆರನನ್ನೂ ಅವನ
ಎಲ್ಲಾ ಸೈನ್ಯರಥಗಳನ್ನೂ ಬಾರಾಕನ ಮುಂದೆ ಗಲಿಬಿಲಿಪಡಿಸಿ ಕತ್ತಿಗೆ ತುತ್ತಾಗಿಸಿದರು. ಸೀಸೆರನು ರಥದಿಂದ
ಹಾರಿ ಓಡಿ ಹೋದನು. [16]ಬಾರಾಕನು ಅವನ ಸೈನ್ಯರಥಗಳನ್ನು ಮ್ಲೇಚ್ಛರ ಹರೋಷೆತಿನವರೆಗೂ
ಹಿಂದಟ್ಟಿದನು. ಸೀಸೆರನ ಸೈನ್ಯದವರೆಲ್ಲರು ಕತ್ತಿಯಿಂದ ಹತರಾದರು; ಒಬ್ಬನೂ ಉಳಿಯಲಿಲ್ಲ.

17 ಹಾಚೋರಿನ ಅರಸ ಯೂಬೀನನಿಗೂ ಕೇನ್ಯನಾದ ಹೆಬೆರನ ಮನೆಯವರಿಗೂ ಸಮಾಧಾನ
ಇದ್ದುದರಿಂದ ಸೀಸೆರನು ಕಾಲುನಡೆಯಾಗಿ ಕೇನ್ಯನಾದ ಹೆಬೆರನ ಹೆಂಡತಿಯಾದ ಯಾಯೇಲಳ ಗುಡಾರದ
ಕಡೆಗೆ ಹೋದನು. 18ಯಾಯೇಲಳು ಹೊರಗೆಹೋಗಿ ಸೀಸೆರನನ್ನು ಎದುರುಗೊಂಡು ಅವನಿಗೆ, "ಒಡೆಯಾ,
ಒಳಗೆ ಬನ್ನಿ; ಹೆದರಬೇಡಿ, ನಮ್ಮಲ್ಲಿಗೆ ಬನ್ನಿ," ಎನ್ನಲು ಅವನು ಗುಡಾರದೊಳಗೆ ಹೋದನು. ಆಗ ಆಕೆ
ಅವನನ್ನು ಕಂಬಳಿಯಿಂದ ಮುಚ್ಚಿದಳು. 19ಅವನು ಆಕೆಗೆ, "ದಯವಿಟ್ಟು ಸ್ವಲ್ಪ ನೀರನ್ನು ಕೊಡು. ನನಗೆ
ಬಹಳ ದಾಹವಾಗಿದೆ," ಎಂದನು. ಆಕೆ ಬುದ್ದಲಿಯನ್ನು ಬಿಚ್ಚಿ ಹಾಲನ್ನು ಕುಡಿಯಕೊಟ್ಟು ಅವನನ್ನು ಮತ್ತೆ
ಮುಚ್ಚಿದಳು. 20ಅವನು ಆಕೆಗೆ, "ನೀನು ಗುಡಾರದ ಬಾಗಿಲಲ್ಲೇ ನಿಂತಿರು; ಯಾರಾದರೂ ಬಂದು 'ಇಲ್ಲಿ
ಒಬ್ಬ ಮನುಷ್ಯ ಇರುವನೇ?' ಎಂದು ವಿಚಾರಿಸಿದರೆ, 'ಇಲ್ಲ' ಎನ್ನು" ಎಂದು ಹೇಳಿದನು.

21 ಆದರೆ ಹೆಬೆರನ ಹೆಂಡತಿ ಯಾಯೇಲಳು ಕೈಯಲ್ಲಿ ಗುಡಾರದ ಗೂಟವನ್ನೂ ಒಂದು
ಕೊಡತಿಯನ್ನೂ ತೆಗೆದುಕೊಂಡು ಅವನು ಆಯಾಸದಿಂದ ಗಾಢನಿದ್ರೆಯಲ್ಲಿದ್ದಾಗ ಮೆಲ್ಲಗೆ ಹತ್ತಿರ ಹೋಗಿ
ಅವನ ಕಣತಲೆಯಲ್ಲಿ ಆ ಗೂಟವನ್ನು ಹೊಡೆದು ನೆಲಕ್ಕೆ ನಾಟಿಸಿದಳು; ಅವನು ಸತ್ತನು. 22ಅದೇ ಕ್ಷಣದಲ್ಲಿ
ಸೀಸೆರನನ್ನ ಹಿಂದಟ್ಟುತ್ತಿದ್ದ ಬಾರಾಕನು ಅಲ್ಲಿಗೆ ಬಂದನು. ಯಾಯೇಲಳು ಹೊರಗೆ ಹೋಗಿ ಅವನನ್ನು
ಎದುರುಗೊಂಡು, "ಬಾ, ನೀನು ಹುಡುಕುವ ಮನುಷ್ಯನನ್ನು ತೋರಿಸುತ್ತೇನೆ," ಎಂದು ಹೇಳಲು ಅವನು
ಒಳಗೆ ಹೋಗಿ ಸೀಸೆರನು ಸತ್ತುಬಿದ್ದದ್ದನ್ನು ಕಂಡನು. ಅವನ ತಲೆಯಲ್ಲಿ ಗೂಟವು ಜಡಿದಿತ್ತು.

23 ಆ ದಿನದಂದು ದೇವರು ಕಾನಾನ್ಯ ರಾಜನಾದ ಯಾಬೀನನನ್ನು ಇಸ್ರಯೇಲರಿಗೆ
ಶರಣಾಗತನಾಗುವಂತೆ ಮಾಡಿದರು. 24ಇಸ್ರಯೇಲರು ಹೆಚ್ಚು ಹೆಚ್ಚು ಬಲಗೊಂಡದ್ದರಿಂದ ಕಾನಾನ್ಯರ ಅರಸ
ಯಾಬೀನನು ಪೂರ್ಣವಾಗಿ ಸೋತು ನಿರ್ನಾಮವಾದನು.

### ಜಯಗೀತೆ

**5** ಆ ದಿನ ದೆಬೋರಳು ಮತ್ತು ಅಬೀನೋವಮನ ಮಗ ಬಾರಾಕನು ಈ ಗೀತೆಯನ್ನು ಹಾಡಿದರು:

2 ಪಣತೊಟ್ಟಿದ್ದರು ಇಸ್ರಯೇಲಿನ ವೀರರು
ಸೈನ್ಯಸೇರಿದ್ದಾರೆ ಸ್ವೇಚ್ಛೆಯಿಂದಾ ಜನರು
ಮಾಡಿರಿ ನೀವು ಸರ್ವೇಶ್ವರನಾ
ಗುಣಗಾನವನು;
3 ಅರಸರೇ, ಕೇಳಿ; ಪ್ರಭುಗಳೇ, ಕಿವಿಗೊಡಿ:
ನಾ ಕಟ್ಟುವೆನು ಕವಿತೆಯನು
ಸರ್ವೇಶ್ವರನಿಗೆ
ನಾ ಭಜಿಸಿ ಹಾಡುವೆನು ಇಸ್ರಯೇಲರಾ
ದೇವನಿಗೆ;
4 ಎದೋಮ್ಯರ ಪ್ರಾಂತ್ಯದಿಂದ, ಸೇಯೀರ
ಗುಡ್ಡದಿಂದ
ಹೇ ಸರ್ವೇಶ್ವರಾ, ನೀ ಹೊರಟು
ಬರುವಾಗ
ಕಂಪಿಸಿತು ಭೂಮಿ, ಹನಿಗರೆಯಿತು ಆಗಸ
ಮಳೆಸುರಿಸಿತು ಮೇಘಮಂಡಲ
5 ಕರಗಿಹೋದವು ಬೆಟ್ಟಗುಡ್ಡಗಳು
ಆ ಸರ್ವೇಶ್ವರನ ಮುಂದೆ
ನೀರಾಗಿಹೋಯಿತು ಸೀನಾಯಿ ಪರ್ವತವು
ಇಸ್ರಯೇಲರ ದೇವನೆದುರಿಗೆ.

6 ಅನಾತನ ಮಗ ಶಮ್ಗರನ ಕಾಲದಲ್ಲಿ
ಯಾಯೇಲನ ದಿನಗಳಲಿ
ನಿಂತುಹೋಯಿತು ಸಂಚಾರ
ರಾಜಮಾರ್ಗಗಳಲಿ,
ನಡೆದರು ಪಯಣಿಗರು ಸೀಳುದಾರಿಗಳಲಿ.
7 ದೆಬೋರಾ, ಇಸ್ರಯೇಲರ ತಾಯಿಯಂತೆ
ನೀ ಬರುವ ಮುನ್ನ
ಪಾಳುಬಿದ್ದಿದ್ದವು ಇಸ್ರಯೇಲ
ಗ್ರಾಮಗಳೆಲ್ಲ.
8 ಆರಿಸಿಕೊಂಡಿದ್ದರು ಜನರು ಅನ್ಯ
ದೇವತೆಗಳನು
ಊರಬಾಗಿಲವರೆಗೆ ಬಂದಿತು
ಕದನಕಾಳಗಗಳು
ಇರಲಿಲ್ಲ ಗುರಾಣಿ, ಭರ್ಜಿಗಳಾವು
ಓರ್ವರಲ್ಲೂ
ಇಸ್ರಯೇಲರಾ ನಾಲ್ವತ್ತು ಸಾವಿರ
ಸೈನಿಕರಲ್ಲೂ.
9 ಇಸ್ರಯೇಲಿನಾ ನಾಯಕರೊಡನೆ ಸೇರಿ
ಸ್ವೇಚ್ಛೆಯಿಂದ ಸೈನ್ಯಸೇರಿದಾ
ಜನರೊಡಗೂಡಿ
ನಾ ನಲಿದುಹಾಡುವೆನು,
ಮಾಡಿರಿ ನೀವು ಸರ್ವೇಶ್ವರನ
ಗುಣಗಾನವನು:
10 ಬಿಳೀಕತ್ತೆಗಳ ಮೇಲೆ ಸವಾರಿ
ಮಾಡುವವರೇ,
ರತ್ನಗಂಬಳಿಗಳ ಮೇಲೆ ಕುಳಿತಿರುವವರೇ,
ಮಾಡಿರಿ ಗಾನ, ಮಾಡಿರಿ ಗುಣಗಾನ,
ಓ ಪಯಣಿಗರೇ.
11 ಸೇದುವ ಬಾವಿಗಳ ಬಳಿ ಕುಳಿತು
ಕೊಳ್ಳೆಹಂಚಿಕೊಳ್ಳುವವರ
ಧ್ವನಿಯನಾಲಿಸು!
ವರ್ಣಿಸುತಿಹರವರು ಸರ್ವೇಶ್ವರ
ಸಾಧಿಸಿದ ನೀತಿಯನು,
ತನ್ನ ಪ್ರಜೆ ಇಸ್ರಯೇಲ್
ಊರುಗಳಲ್ಲಾತನು
ಸ್ಥಾಪಿಸಿದ ನ್ಯಾಯವನು.
12 ಎಚ್ಚರಗೊಳ್ಳು, ಎಚ್ಚರಗೊಳ್ಳು,
ದೆಬೋರಾ,
ಎಚ್ಚರಗೊಳ್ಳು, ಎಚ್ಚರಗೊಳ್ಳು,
ಮಾಡು ನೀ ಗುಣಗಾನ

ಬಾರಾಕನೇ, ಏಳು;
ಅಬೀನೋವಮನ ಮಗನೇ, ಏಳು,
ಸೆರೆಹಿಡಿದವರನು ನೀ ಸಾಗಿಸಿಕೊಂಡು
ಹೋಗು.
13 ಚದರಿಹೋದವರು ಕೂಡಿಬಂದರು
ನಾಯಕರ ಬಳಿಗೆ
ಸರ್ವೇಶ್ವರನ ಶೂರಜನರು
ವೀರರಂತೆ
ನೆರೆದುಬಂದರು ನನ್ನ ಸಹಾಯಕ್ಕೆ.
14 ಬಂದರು ಅಮಾಲೇಕ್ಯರ ಪ್ರದೇಶದೊಳು
ನೆಲೆಗೊಂಡ ಎಫ್ರಯಿಮ್ಯರು,
ಅವರೊಂದಿಗೆ ಬಂದರು
ಬೆನ್ಯಾಮೀನ್ಯರು,
ಮಾಕೀರನ ಗೋತ್ರದ ಪ್ರಧಾನರು,
ಜೆಬುಲೂನ್ ಕುಲದೊಳು
ದಂಡಧಾರಿಗಳಾದ ಸೇನಾನಾಯಕರು.
15 ಇಸ್ಸಾಕಾರ್ ಕುಲಪ್ರಭುಗಳು ಬಂದರು
ದೆಬೋರಳ ಜೊತೆಯಲಿ,
ಆಗಮಿಸಿದನು ಬಾರಾಕನು
ಇಸ್ಸಾಕಾರ್ಯರ ಸಂಗಡದಲಿ,
ಇವನ ಹೆಜ್ಜೆಹಿಡಿದು ಬಂದರು
ಅವರೆಲ್ಲರು ತವಕದಲಿ.
16 ರೂಬೇನ್ಯರ ಮಧ್ಯೆ ಕಾಣಿಸಿಕೊಂಡಿತು
ವಾದವಿವಾದಗಳು, ಮನೋವೇದನೆಗಳು:
ರೂಬೇನ್ಯರೇ, ನೀವೇಕೆ ಕೂತಿರಿ
ಕುರಿಹಟ್ಟಿಗಳಲಿ? ಮಂದೆಗಳ
ಮಧ್ಯೆಯಲಿ?
ಕೇಳಬೇಕೆಂದೋ ಅಪಾಯದ ಸಿಳ್ಳು
ಸದ್ದನು?
ಹೌದು ರೂಬೇನ್ಯರ ಮಧ್ಯೆ
ಕಾಣಿಸಿಕೊಂಡಿತು
ವಾದವಿವಾದಗಳು, ಮನೋವೇದನೆಗಳು.
17 ಗಿಲ್ಯಾದರು ಉಳಿದರು ಜೋರ್ಡನಿನ
ಆಚೆಯಲ್ಲೇ
ದಾನ್‍ಕುಲದವರು ಉಳಿದರೇಕೆ,
ಹಡಗುಗಳಲ್ಲೇ?
ಅಶೇರ್ ಕುಲದವರೋ ಅಂಟುಕೊಂಡರು
ತಮ್ಮ ರೇವುಗಳಿಗೇ
ನೆಮ್ಮದಿಯಾಗಿ ಕೂತುಬಿಟ್ಟರು
ಸಮುದ್ರತೀರದಲ್ಲೆ.

18 ಅಂಥವರಲ್ಲ ಈ ಜೆಬುಲೂನ್ಯರು,
ನಫ್ತಾಲ್ಯರು
ಪ್ರಾಣವನೇ ಮುಡಿಪಾಗಿಟ್ಟರು
ರಣಭೂಮಿಯೊಳು.
19 ಎದ್ದುಬಂದು ಯುದ್ಧ ಮಾಡಿದರು
ಅರಸುಗಳು
ಕೂಡಿಬಂದು ಕಾದಾಡಿದರು
ಕಾನಾನ್ಯ ರಾಜರುಗಳು
ಮೆಗಿದ್ದೋ ನದಿಗಳ ಬಳಿ ತಾನಾಕದೊಳು
ಆದರೆ ಗಿಟ್ಟಲಿಲ್ಲ ಅವರಿಗೆ
ಬೆಳ್ಳಿದ್ರವ್ಯಗಳೇನು !
20 ಕದನವಾಡಿದವು ತಾರೆಗಳು ಆಗಸದಿಂದಲೆ
ಯುದ್ಧ ಮಾಡಿದವು ಸೀಸೆರನ ವಿರುದ್ಧ
ತಮ್ಮಾ ಪಥದಿಂದಲೆ.
21 ಶತ್ರುಗಳನು ಕೊಚ್ಚಿಕೊಂಡು ಹೋಯಿತು
ಪೂರ್ವಪ್ರಸಿದ್ಧವಾದ ಆ ಕೀಷೋನ್
ಹೊಳೆಯು.
ನನ್ನ ಮನವೇ, ನೀ ಧೈರ್ಯದಿಂದ ಮುಂದೆ
ಸಾಗು.
22 ನೆಲ ಕಂಪಿಸಿತು ಕುದುರೆಗಳ
ಭರದೌಡಿನಿಂದ
ಸುತ್ತಿಗೆಯಂತಹ ಆ ಕಾಲುಗಳ ಪೆಟ್ಟಿನಿಂದ.
23 ‘ಶಾಪಹಾಕಿರಿ ಮೇರೋಜ್ ಊರಿಗೆ,
ಅದರ ನಿವಾಸಿಗಳಿಗೆ
ಬರಲಿಲ್ಲ ಅವರು ಯುದ್ಧವೀರರ ಜೊತೆಗೆ
ಸರ್ವೇಶ್ವರನ ಸಹಾಯಕ್ಕೆ.
ಶಪಿಸಿರಿ ಅವರನ್ನು’ ಎಂದು ಕರೆಗೊಟ್ಟನು
ಸರ್ವೇಶ್ವರನ ದೂತನೆ.
24 ಗುಡಾರಗಳಲಿ ವಾಸಿಸುವ ಸ್ತ್ರೀಯರಲ್ಲಿ
ಯಾಯೇಲಳೆ ಭಾಗ್ಯವತಿ,
ಹೌದು, ಅವಳೇ ಭಾಗ್ಯವತಿ,
ಕೇನ್ಯನಾದ ಹೆಬೆರನ ಆ ಹೆಂಡತಿ.
25 ನೀರುಕೇಳಲು ಹಾಲುಕೊಟ್ಟಳು
ಉತ್ತಮ ಪಾತ್ರೆಯಲ್ಲಿ ಮೊಸರುಕೊಟ್ಟಳು.
26 ಗೂಟ ತೆಗೆದುಕೊಂಡಳು ಕೈಚಾಚಿ
ಹಿಡಿದಳು ಬಲಗೈಯಲಿ ದೊಡ್ಡ ಕೊಡತಿ
ಜಡಿದಳು ಸೀಸೆರನ ತಲೆಯನು
ಬಡಿದಳಾ ಕೊಡತಿಯಿಂದ
ಕಣತಲೆಗೇ ತಿವಿದು.
27 ಬೊಗ್ಗಿಬಿದ್ದನು, ಉರುಳಿಬಿದ್ದನು,

ಮುದುರಿಬಿದ್ದನವನು
ಅವಳ ಕಾಲುಗಳ ಬಳಿ
ಅಲ್ಲೆ ಸತ್ತುಬಿದ್ದನು.
28 ಸೀಸೆರನ ತಾಯಿ ಇಣುಕಿ ನೋಡಿದಳು
ಕಿಟಕಿಯಿಂದ
ಕೂಗಿದಳು ಆ ಕಿಟಕಿಯ
ಜಾಲರಿಗಳಿಂದ:
'ಇಷ್ಟು ಹೊತ್ತಾಗಬೇಕೆ ರಥ
ಬರುವುದಕ್ಕೆ?
ಕುದುರೆಗಳ ಕಾಲುಗಳಿಗೆ
ಇಷ್ಟು ಸಾವಕಾಶವೇಕೆ?'
29 ಸಭ್ಯಸ್ತ್ರೀಯರೊಳು ಬುದ್ಧಿವಂತೆಯರು
ಕೊಟ್ಟ ಉತ್ತರವನು
ತನ್ನೊಳಗೇ ಮೆಲಕು ಹಾಕಿದ್ದಳು
ಇಂತೆಂದುಕೊಂಡು:
30 'ನಿಶ್ಚಯವಾಗಿ ಸಿಕ್ಕಿರಬೇಕು
ಅವರಿಗೆ ಕೊಳ್ಳೆ
ಹಂಚಿಕೊಳ್ಳುತ್ತಿರಬೇಕು ಅದನು
ತಮ್ಮತಮ್ಮಲ್ಲೆ
ಪ್ರತಿಯೊಬ್ಬ ಸೈನಿಕನಿಗೆ ಒಬ್ಬೊಬ್ಬ
ದಾಸಿಯರು
ಸೀಸೆರನಿಗೊ, ಬಣ್ಣಬಣ್ಣವಾದ
ಬಟ್ಟೆಬರೆಗಳು
ವಿಚಿತ್ರ ಕಸೂತಿಹಾಕಿದ ಒಂದೆರಡು
ವಸ್ತ್ರಗಳು, ಕಂಠಮಾಲೆಗಳು'.
31 ಸರ್ವೇಶ್ವರನ ಶತ್ರುಗಳೆಲ್ಲರು
ನಾಶವಾಗಲಿ ಇವರಂತೆ
ಆತನ ಭಕ್ತರು ಬೆಳಗಲಿ
ಉದಯಕಾಲದ ಸೂರ್ಯನಂತೆ!
ನಾಡಿನಲಿ ನಾಲ್ವತ್ತು ವರ್ಷಕಾಲ ಶಾಂತಿ ನೆಲಸಿತ್ತು!

## ಗಿದ್ಯೋನನು ಮತ್ತು ಅಬೀಮೆಲೆಕನು

**6** ಇಸ್ರಯೇಲರು ಮತ್ತೆ ಸರ್ವೇಶ್ವರ ಸ್ವಾಮಿಯ ದೃಷ್ಟಿಯಲ್ಲಿ ದ್ರೋಹಿಗಳಾದರು. ಆದ್ದರಿಂದ ಸರ್ವೇಶ್ವರ
ಅವರನ್ನು ಏಳುವರ್ಷಕಾಲ ಮಿದ್ಯಾನ್ಯರ ಕೈಗೊಪ್ಪಿಸಿದರು. [2]ಮಿದ್ಯಾನ್ಯರ ಶಕ್ತಿ ಹೆಚ್ಚಿತು. ಇಸ್ರಯೇಲರು ಅವರಿಗೆ
ಹೆದರಿ ಬೆಟ್ಟಗುಡ್ಡಗಳಲ್ಲಿ ಕಂದರಗಳನ್ನೂ ಗುಹೆಗಳನ್ನೂ ಮಾಡಿ ಅವುಗಳಲ್ಲಿ ವಾಸ ಮಾಡಿದರು. [3]ಇವರು
ಮಾಡುತ್ತಿದ್ದ ಬಿತ್ತನೆಯನ್ನು ಮಿದ್ಯಾನ್ಯರು, ಅಮಾಲೇಕ್ಯರು, ಹಾಗು ಪೂರ್ವದೇಶದವರು ಇವರಿಗೆ ವಿರುದ್ಧ
ದಂಡೆತ್ತಿ ಬಂದು ಹಾಳು ಮಾಡುತ್ತಿದ್ದರು. [4]ಗಾಜಾ ಪ್ರಾಂತ್ಯದವರೆಗೆ ಭೂಮಿಯ ಫಲವನ್ನೆಲ್ಲ ನಾಶ
ಮಾಡುತ್ತಿದ್ದರು ಈ ಕಾರಣ ಇಸ್ರಯೇಲರಿಗೆ ದವಸಧಾನ್ಯವಾಗಲಿ, ಕುರಿದನಕತ್ತೆಗಳಾಗಲಿ ಉಳಿಯುತ್ತಿರಲಿಲ್ಲ.
[5]ಆ ಶತ್ರುಗಳು ತಮ್ಮ ಕುರಿದನ ಗುಡಾರಗಳ ಸಮೇತ ಮಿಡತೆಗಳಂತೆ ಗುಂಪು ಗುಂಪಾಗಿ ಬರುತ್ತಿದ್ದರು.

ಅವರ ಒಂಟೆಗಳೂ ಅಸಂಖ್ಯವಾಗಿದ್ದವು. ಆ ಗುಂಪುಗಳಿಂದ ನಾಡೆಲ್ಲ ನಾಶವಾಗುತ್ತಿತ್ತು. 6ಆ ಮಿದ್ಯಾನ್ಯರ
ನಿಮಿತ್ತ ಇಸ್ರಯೇಲರು ಬಹಳವಾಗಿ ಕುಗ್ಗಿಹೋಗಿ ಸರ್ವೇಶ್ವರನಿಗೆ ಮೊರೆಯಿಟ್ಟರು.

7 ಹೀಗೆ ಮಿದ್ಯಾನ್ಯರ ಕಾಟವನ್ನು ತಾಳಲಾಗದೆ ಇಸ್ರಯೇಲರು ಮೊರೆಯಿಟ್ಟಾಗ ಸರ್ವೇಶ್ವರ
ಅವರಿಗೊಬ್ಬ ಪ್ರವಾದಿಯನ್ನು ಕಳುಹಿಸಿದರು. 8ಅವನು ಬಂದು ಇಸ್ರಯೇಲರಿಗೆ ಹೀಗೆಂದನು: "ನಿಮ್ಮ
ದೇವರಾದ ಸರ್ವೇಶ್ವರ ಹೇಳುವ ಈ ಮಾತುಗಳನ್ನು ಗಮನಿಸಿರಿ: 'ನೀವು ದಾಸತ್ವದಲ್ಲಿದ್ದಾಗ ನಿಮ್ಮನ್ನು
ಈಜಿಪ್ಟಿನಿಂದ ಕರೆತಂದವನು ನಾನು. 9ಈಜಿಪ್ಟಿನವರಿಂದ ನಿಮ್ಮನ್ನು ಬಿಡಿಸಿದೆನಲ್ಲದೆ ಬೇರೆ ಎಲ್ಲಾ
ಶೋಷಕರಿಂದ ನಿಮ್ಮನ್ನು ಪಾರುಮಾಡಿ, ನಿಮ್ಮ ಕಣ್ಮುಂದೆಯೇ ಅವರನ್ನು ಅಟ್ಟಿಬಿಟ್ಟು, ಅವರ ನಾಡನ್ನು
ನಿಮಗೆ ಕೊಟ್ಟೆ. 10ಸರ್ವೇಶ್ವರನೆಂಬ ನಾನೇ ನಿಮ್ಮ ದೇವರಾಗಿದ್ದೇನೆಂದೂ ನೀವು ಅಮೋರಿಯರ ಮಧ್ಯೆ
ವಾಸಿಸುವಾಗ ಅವರ ದೇವತೆಗಳನ್ನು ಪೂಜಿಸಬಾರದೆಂದೂ ಹೇಳಿದೆ. ಆದರೆ ನೀವು ನನ್ನ ಮಾತನ್ನು
ಕೇಳಲಿಲ್ಲ'."

11 ಆಮೇಲೆ ಸರ್ವೇಶ್ವರನ ದೂತನು ಬಂದು ಒಫ್ರದಲ್ಲಿದ್ದ ಓಕ್‍ಮರದ ಅಡಿಯಲ್ಲಿ
ಕುಳಿತುಕೊಂಡನು. ಅದು ಅಬೀಯೆಜೆರನ ಗೋತ್ರದವನಾದ ಯೋವಾಷನದಾಗಿತ್ತು. ಅವನ ಮಗ
ಗಿದ್ಯೋನನು ಮಿದ್ಯಾನ್ಯರಿಗೆ ಗೊತ್ತಾಗದ ಹಾಗೆ ಅಲ್ಲಿ ದ್ರಾಕ್ಷಿಯ ಆಲೆಯ ಮರೆಯಲ್ಲಿ ಗೋದಿಯನ್ನು
ಬಡಿಯುತ್ತಿದ್ದನು. 12ಸರ್ವೇಶ್ವರನ ದೂತನು ಗಿದ್ಯೋನನಿಗೆ ಪ್ರತ್ಯಕ್ಷನಾಗಿ ಅವನಿಗೆ, "ಪರಾಕ್ರಮಶಾಲಿಯೇ,
ಸರ್ವೇಶ್ವರ ನಿನ್ನೊಡನೆ ಇದ್ದಾರೆ" ಎಂದನು.

13 ಆಗ ಗಿದ್ಯೋನನು ಅವನಿಗೆ, "ಸ್ವಾಮಿ, ಸರ್ವೇಶ್ವರ ನಮ್ಮೊಡನೆ ಇದ್ದರೆ ನಮಗೆ ಇದೆಲ್ಲಾ ಏಕೆ
ಸಂಭವಿಸಿತು? ನಮ್ಮ ಹಿರಿಯರು, ಸರ್ವೇಶ್ವರ ಅದ್ಭುತಗಳನ್ನು ನಡಿಸಿ ತಮ್ಮನ್ನು ಈಜಿಪ್ಟಿನಿಂದ
ಬಿಡಿಸಿದರೆಂಬುದಾಗಿ ವಿವರಿಸುತ್ತಿದ್ದರು. ಅಂಥ ಅದ್ಭುತಗಳು ಈಗೆಲ್ಲಿವೆ? ಅವರು ನಮ್ಮನ್ನು ತಿರಸ್ಕರಿಸಿ
ಮಿದ್ಯಾನ್ಯರ ಕೈಗೆ ಒಪ್ಪಿಸಿ ಬಿಟ್ಟಿದ್ದಾರಲ್ಲಾ," ಎನ್ನಲು.

14 ಸರ್ವೇಶ್ವರ ಅವನನ್ನು ದಿಟ್ಟಿಸಿ ನೋಡಿ, "ನಾನು ನಿನ್ನನ್ನು ಕಳುಹಿಸುತ್ತೇನೆ, ಹೋಗು; ಈ ನಿನ್ನ
ಬಲದಿಂದ ಇಸ್ರಯೇಲರನ್ನು ಮಿದ್ಯಾನ್ಯರಿಂದ ಬಿಡಿಸು," ಎಂದು ಹೇಳಿದರು.

15 ಆಗ ಗಿದ್ಯೋನನು, "ಸ್ವಾಮಿ, ನಾನು ಇಸ್ರಯೇಲರನ್ನು ರಕ್ಷಿಸುವುದು ಹೇಗೆ? ಮನಸ್ಸೆ ಕುಲದಿಂದ
ನನ್ನ ಮನೆ ಕನಿಷ್ಠವಾದದ್ದು; ಮತ್ತು ನಾನು ನಮ್ಮ ಕುಟುಂಬದಲ್ಲಿ ಅಲ್ಪನು," ಎಂದನು.

16 ಸರ್ವೇಶ್ವರ ಅವನಿಗೆ, "ನಾನು ನಿನ್ನೊಂದಿಗೆ ಇರುವುದರಿಂದ ನೀನು ಮಿದ್ಯಾನ್ಯರೆಲ್ಲರನ್ನೂ ಒಬ್ಬ
ಮನುಷ್ಯನನ್ನೋ ಎಂಬಂತೆ ಸದೆಬಡಿಯುವೆ," ಎಂದರು.

17 ಗಿದ್ಯೋನನು: "ಸ್ವಾಮಿ, ದಯವಿರಲಿ; ನನ್ನೊಂದಿಗೆ ಮಾತಾಡುತ್ತಿರುವ ತಾವು ಸ್ವಾಮಿಯವರೇ
ಆಗಿದ್ದೀರೆಂಬುದಕ್ಕೆ ನನಗೊಂದು ಗುರುತನ್ನು ಅನುಗ್ರಹಿಸಬೇಕು. 18ನಾನು ಹೋಗಿ ತಮಗೆ ಕಾಣಿಕೆಯನ್ನು
ತೆಗೆದುಕೊಂಡು ಬರುವವರೆಗೆ ತಾವು ಈ ಸ್ಥಳವನ್ನು ಬಿಡಬಾರದು," ಎಂದು ಬಿನ್ನವಿಸಲು ಅವರು, "ನೀನು
ತಿರುಗಿ ಬರುವವರೆಗೆ ನಾನು ಇಲ್ಲೇ ಇರುವೆನು," ಎಂದರು.

19 ಗಿದ್ಯೋನನು ಮನಗೆ ಹೋಗಿ ಒಂದು ಆಡಿನ ಮರಿಯನ್ನು ಪಕ್ವಮಾಡಿ ಹತ್ತು ಕಿಲೋಗ್ರಾಂ
ಹಿಟ್ಟಿನಿಂದ ಹುಳಿಯಿಲ್ಲದ ರೊಟ್ಟಿಗಳನ್ನು ಸುಟ್ಟು ಮಾಂಸವನ್ನು ಪುಟ್ಟಿಯಲ್ಲಿಟ್ಟು ಅದರ ರಸವನ್ನು ಬಟ್ಟಲಿನಲ್ಲಿ
ಹೊಯ್ದು ಎಲ್ಲವನ್ನೂ ಓಕ್‍ಮರದ ಕೆಳಗೆ ಅವರ ಮುಂದೆ ತಂದಿಟ್ಟನು. 20ಆಗ ದೇವದೂತನು ಅವನಿಗೆ,
"ಮಾಂಸವನ್ನೂ ರೊಟ್ಟಿಗಳನ್ನೂ ಆ ಬಂಡೆಯ ಮೇಲಿಟ್ಟು ರಸವನ್ನು ಹೊಯ್ಯಿ" ಎನ್ನಲು ಅವನು ಹಾಗೆಯೇ
ಮಾಡಿದನು. 21ಅನಂತರ ಸರ್ವೇಶ್ವರನ ದೂತನು ತನ್ನ ಕೈಕೋಲನ್ನು ಚಾಚಿ ಅದರ ತುದಿಯನ್ನು ಆ
ರೊಟ್ಟಿಗಳಿಗೂ ಮಾಂಸಕ್ಕೂ ಮುಟ್ಟಿಸಲು ಬಂಡೆಯಿಂದ ಬೆಂಕಿಯೆದ್ದು ಅವೆರಡನ್ನೂ ದಹಿಸಿಬಿಟ್ಟಿತು.
ಸರ್ವೇಶ್ವರನ ದೂತನು ಅದೃಶ್ಯನಾದನು.

22 ಆತನು ಸರ್ವೇಶ್ವರನ ದೂತನೆಂದು ಗಿದ್ಯೋನನು ತಿಳಿದು ಭಯಪಟ್ಟು, "ಅಯ್ಯೋ ಸ್ವಾಮಿ,
ಸರ್ವೇಶ್ವರಾ, ಸರ್ವೇಶ್ವರನ ದೂತನನ್ನು ಮುಖಾಮುಖಿಯಾಗಿ ನೋಡಿಬಿಟ್ಟೆನಲ್ಲಾ" ಎಂದು ಕೂಗಿದನು.
23ಆದರೆ ಸರ್ವೇಶ್ವರನು ಅವನಿಗೆ, "ಸಮಾಧಾನದಿಂದಿರು, ಹೆದರಬೇಡ; ನೀನು ಸಾಯುವುದಿಲ್ಲ" ಎಂದನು.

24ಗಿದ್ಯೋನನು ಅಲ್ಲೇ ಸರ್ವೇಶ್ವರನಿಗಾಗಿ ಒಂದು ಬಲಿಪೀಠವನ್ನು ಕಟ್ಟಿ ಅದಕ್ಕೆ 'ಯೆಹೋವ ಷಾಲೋಮ್'
ಎಂದು ಹೆಸರಿಟ್ಟನು; ಅದು ಈವರೆಗೂ ಅಬೀಯೆಜೆರ್ ಗೋತ್ರದವರ ಒಫ್ರದಲ್ಲಿರುತ್ತದೆ.
25 ಅದೇ ದಿನ ರಾತ್ರಿ ಸರ್ವೇಶ್ವರ ಅವನಿಗೆ, "ನೀನು ನಿನ್ನ ತಂದೆಯ ಹೋರಿಗಳಲ್ಲಿ ಒಂದು ಚಿಕ್ಕ
ಹೋರಿಯನ್ನೂ ಏಳು ವರ್ಷದ ಇನ್ನೊಂದು ಹೋರಿಯನ್ನೂ ತೆಗೆದುಕೊಂಡು ಹೋಗಿ ನಿನ್ನ ತಂದೆ
ಕಟ್ಟಿರುವ ಬಾಳನ ಬಲಿಪೀಠವನ್ನು ಕೆಡವಿ ಅದರ ಬಳಿಯಲ್ಲಿರುವ ಅಶೇರವೆಂಬ ವಿಗ್ರಹ ಸ್ತಂಭವನ್ನು
ಕಡಿದುಹಾಕು. 26ಈ ಗುಡ್ಡದ ಶಿಖರದಲ್ಲಿ ಸರ್ವೇಶ್ವರನಿಗಾಗಿ ನೇಮಕವಾದ ರೀತಿಯಿಂದ ಒಂದು
ಬಲಿಪೀಠವನ್ನು ಕಟ್ಟಿಸು. ನೀನು ಕಡಿದುಹಾಕಿದ ಅಶೇರ ವಿಗ್ರಹಸ್ತಂಭದಿಂದ ಬೆಂಕಿಮಾಡಿ ಆ ಎರಡನೆ
ಹೋರಿಯನ್ನು ದಹನ ಬಲಿಯಾಗಿ ಸಮರ್ಪಿಸು," ಎಂದು ಹೇಳಿದರು. 27ಅಂತೆಯೇ ಗಿದ್ಯೋನನು ತನ್ನ
ಸೇವಕರಲ್ಲಿ ಹತ್ತು ಮಂದಿಯನ್ನು ಕರೆದುಕೊಂಡು ಹೋಗಿ, ಸರ್ವೇಶ್ವರನು ಹೇಳಿದ ಹಾಗೆ ಮಾಡಿದನು.
ಆದರೆ ಅವನು ತನ್ನ ಮನೆಯವರಿಗೂ ಊರಿನವರಿಗೂ ಹೆದರಿಕೊಂಡದ್ದರಿಂದ ಅದನ್ನು ಹಗಲಿನಲ್ಲಿ
ಮಾಡದೆ ರಾತ್ರಿಯಲ್ಲಿ ಮಾಡಿದನು. 28ಊರಿನ ಜನರು ಬೆಳಿಗ್ಗೆ ಎದ್ದು ಬಾಳನ ಬಲಿಪೀಠ
ಕೆಡವಲಾಗಿರುವುದನ್ನೂ ಅದರ ಸಮೀಪದಲ್ಲಿದ್ದ ವಿಗ್ರಹ ಸ್ತಂಭ ಕಡಿಯಲಾಗಿರುವುದನ್ನೂ ಹೊಸದಾಗಿ ಕಟ್ಟಿದ
ಬಲಿಪೀಠದ ಮೇಲೆ ಎರಡನೆಯ ಹೋರಿ ಬಲಿಯಾದದ್ದನ್ನೂ ಕಂಡು, 29"ಹೀಗೆ ಮಾಡಿದವರಾರು?"
ಎಂದು ಒಬ್ಬರನ್ನೊಬ್ಬರು ವಿಚಾರಿಸಿದರು. ಯೋವಾಷನ ಮಗನಾದ ಗಿದ್ಯೋನನೇ ಎಂದು ಗೊತ್ತಾಯಿತು.
30ಆ ಜನರು ಯೋವಾಷನಿಗೆ, "ನಿನ್ನ ಮಗನನ್ನು ಹೊರಗೆ ತೆಗೆದುಕೊಂಡು ಬಾ; ಅವನು ಸಾಯಬೇಕು;
ಏಕೆಂದರೆ ಬಾಳನ ಬಲಿಪೀಠವನ್ನು ಕೆಡವಿ ಅದರ ಬಳಿಯಲ್ಲಿದ್ದ ಅಶೇರ ವಿಗ್ರಹಸ್ತಂಭವನ್ನು ಕಡಿದು
ಹಾಕಿದ್ದಾನೆ," ಎಂದರು.
31 ಯೋವಾಷನು ತನಗೆ ವಿರೋಧವಾಗಿ ನಿಂತವರೆಲ್ಲರಿಗೆ, "ಬಾಳನ ಪರ ನೀವು ವ್ಯಾಜ್ಯ
ಮಾಡಬೇಕೇ? ನೀವು ಅವನನ್ನು ರಕ್ಷಿಸಬೇಕೇ? ಅವನಿಗಾಗಿ ವ್ಯಾಜ್ಯಮಾಡುವವರು ಬೆಳಗಾಗುವಷ್ಟರಲ್ಲಿ
ಕೊಲ್ಲಲ್ಪಡಲಿ. ಅವನು ದೇವನಾಗಿದ್ದರೆ ತನ್ನ ಬಲಿಪೀಠವನ್ನು ಕೆಡವಿಬಿಟ್ಟದ್ದಕ್ಕಾಗಿ ತಾನೇ ವ್ಯಾಜ್ಯವಾಡಲಿ,"
ಎಂದನು. 32ಆ ದಿವಸದಲ್ಲಿ ಅವನು, "ಬಾಳನು ತನ್ನ ಬಲಿಪೀಠವನ್ನು ಕೆಡವಿದವನೊಡನೆ ತಾನೇ ವ್ಯಾಜ್ಯ
ಮಾಡಲಿ" ಎಂದು ಹೇಳಿದ್ದರಿಂದ ಗಿದ್ಯೋನನಿಗೆ 'ಯೆರುಬ್ಬಾಳ' ಎಂದು ಹೆಸರಾಯಿತು.
33 ಇಷ್ಟರಲ್ಲಿ ಮಿದ್ಯಾನ್ಯರೂ ಅಮಾಲೇಕ್ಯರೂ ಮೂಡಣದೇಶದವರೂ ಕೂಡಿ ಹೊಳೆದಾಟಿ ಬಂದು
ಇಜ್ರೇಲಿನ ತಗ್ಗಿನಲ್ಲಿ ಪಾಳೆಯಮಾಡಿಕೊಂಡರು. 34ಆಗ ಗಿದ್ಯೋನನು ಸರ್ವೇಶ್ವರಾತ್ಮ ಭರಿತನಾಗಿ ಕೊಂಬನ್ನು
ಊದಲು ಅಬೀಯೆಜೆರನ ಗೋತ್ರದವರು ಬಂದು ಅವನನ್ನು ಹಿಂಬಾಲಿಸಿದರು. 35ಅವನು ಉಳಿದ
ಮನಸ್ಸೆಯವರ ಬಳಿಗೆ ದೂತರನ್ನು ಕಳುಹಿಸಿದ್ದನು. ಅವರೂ ಕೂಡಿಬಂದರು. ಅಶೇರ್, ಜೆಬುಲೂನ್,
ನಫ್ತಾಲಿ ಕುಲಗಳವರ ಬಳಿಗೆ ದೂತರನ್ನು ಕಳುಹಿಸಲು ಅವರೂ ಬಂದು ದಂಡೆಯಾತ್ರೆಗಾಗಿ ಸೇರಿಕೊಂಡರು.
36 ಗಿದ್ಯೋನನು ದೇವರಿಗೆ, "ನೀವು ಹೇಳಿದಂತೆ ಇಸ್ರಯೇಲರನ್ನು ನನ್ನ ಮುಖಾಂತರ
ರಕ್ಷಿಸುವಿರೋ ಇಲ್ಲವೋ ಎಂಬುದನ್ನು ತಿಳಿಯಪಡಿಸಿರಿ. 37ಇಗೋ, ಕಣದಲ್ಲಿ ಕುರಿಯ ತುಪ್ಪಟವನ್ನು
ಇಡುತ್ತೇನೆ; ಅದರಲ್ಲಿ ಮಾತ್ರ ಮಂಜುಬಿದ್ದು ನೆಲವೆಲ್ಲಾ ಒಣಗಿದ್ದರೆ ನೀವು ಹೇಳಿದಂತೆಯೇ ಇಸ್ರಯೇಲರನ್ನು
ನನ್ನ ಮುಖಾಂತರ ರಕ್ಷಿಸುವಿರೆಂದು ತಿಳಿಯುವೆನು," ಎಂದು ವಿಜ್ಞಾಪಿಸಿದನು. 38ಹಾಗೆಯೇ ಆಯಿತು;
ಅವನು ಮರುದಿವಸ ಮುಂಜಾನೆ ಎದ್ದು ತುಪ್ಪಟವನ್ನು ಒತ್ತಿ ಹಿಂಡಲು ಮಂಜಿನ ನೀರು ಒಂದು ಬಟ್ಟಲು
ತುಂಬಾ ಆಯಿತು. 39ಅವನು ಪುನಃ ದೇವರಿಗೆ, "ಸ್ವಾಮಿ, ಸಿಟ್ಟಾಗಬೇಡಿ; ಇನ್ನೊಂದು ಸಾರಿ
ಮಾತಾಡುತ್ತೇನೆ. ಇನ್ನು ಒಂದೇ ಸಾರಿ ಈ ತುಪ್ಪಟದಿಂದ ನಿಮ್ಮನ್ನು ಪರೀಕ್ಷಿಸುವುದಕ್ಕೆ ಅಪ್ಪಣೆಯಾಗಲಿ: ಈ
ತುಪ್ಪಟ ಮಾತ್ರವೇ ಒಣಗಿದ್ದು ನೆಲದ ಮೇಲೆಲ್ಲಾ ಹನಿಬಿದ್ದಿರಲಿ," ಎಂದನು. 40ಆ ರಾತ್ರಿ ದೇವರು ಹಾಗೆಯೇ
ಮಾಡಿದರು; ತುಪ್ಪಟ ಮಾತ್ರ ಒಣಗಿತ್ತು; ನೆಲದ ಮೇಲೆಲ್ಲಾ ಹನಿ ಬಿದ್ದಿತ್ತು.

## ಮಿದ್ಯಾನ್ಯರನ್ನು ಗೆದ್ದ ಗಿದ್ಯೋನ

**7** 'ಯೆರುಬ್ಬಾಳ' ಎನಿಸಿಕೊಂಡ ಗಿದ್ಯೋನನೂ ಅವನ ಸಂಗಡ ಇದ್ದ ಜನರೂ ಬೆಳಿಗ್ಗೆ ಎದ್ದು ಹೊರಟು
ಹೋಗಿ ಹರೋದಿನ ಬುಗ್ಗೆಯ ಬಳಿಯಲ್ಲಿ ಇಳಿದುಕೊಂಡರು. ಇವರಿಗೆ ಉತ್ತರದಿಕ್ಕಿನಲ್ಲಿ ಮೋರೆ ಗುಡ್ಡದ
ಹಿಂದಿನ ತಗ್ಗಿನಲ್ಲಿ ಮಿದ್ಯಾನ್ಯರ ದಂಡಿಳಿದಿತ್ತು.

2 ಸರ್ವೇಶ್ವರ ಗಿದ್ಯೋನನಿಗೆ, "ನಿನ್ನ ಸಂಗಡ ಇರುವ ಜನರು ಹೆಚ್ಚು ಸಂಖ್ಯೆಯಲ್ಲಿದ್ದಾರೆ. ಇವರ
ಕೈಗೆ ಮಿದ್ಯಾನ್ಯರನ್ನು ಒಪ್ಪಿಸುವುದು ನನಗೆ ಸರಿಯಾಗಿ ಕಾಣುವುದಿಲ್ಲ; ಏಕೆಂದರೆ ಹಾಗೆ ಒಪ್ಪಿಸಿಕೊಟ್ಟರೆ ಸ್ವಂತ
ಶಕ್ತಿಯಿಂದಲೇ ನಮಗೆ ರಕ್ಷಣೆ ಲಭಿಸಿತು ಎಂದು ಹೆಚ್ಚಳಪಟ್ಟು ನನ್ನನ್ನು ಅಲಕ್ಷ್ಯ ಮಾಡಬಹುದು. [3]ಆದ್ದರಿಂದ
ಎಲ್ಲಾ ಜನರಿಗೆ ಕೇಳಿಸುವಂತೆ, 'ಭಯಭೀತರೂ ಅಂಜುಬುರುಕರೂ ಈ ಗಿಲ್ಯಾದ್ ಪರ್ವತವನ್ನು ಬಿಟ್ಟು
ಮನೆಗೆ ಹೋಗಲಿ,' ಎಂದು ಪ್ರಕಟಿಸು," ಎಂದರು. ಹಾಗೆ ಮಾಡಲು ಇಪ್ಪತ್ತೆರಡು ಸಾವಿರ ಮಂದಿ
ಹಿಂದಿರುಗಿ ಹೋದರು; ಹತ್ತು ಸಾವಿರ ಮಂದಿ ಉಳಿದರು.

4 ಸರ್ವೇಶ್ವರ ಪುನಃ ಗಿದ್ಯೋನನಿಗೆ, "ನಿನ್ನ ಬಳಿ ಇರುವ ಜನರು ಇನ್ನೂ ಹೆಚ್ಚಾಗಿದ್ದಾರೆ; ನೀನು
ಅವರನ್ನು ಒಂದು ಹಳ್ಳಕ್ಕೆ ಕರೆದುಕೊಂಡು ಹೋಗು; ಅಲ್ಲಿ ಅವರನ್ನು ನಿನಗಾಗಿ ಆರಿಸುವೆನು. ಯಾರು ನಿನ್ನ
ಸಂಗಡ ಹೋಗಬಹುದೆಂದು ಹೇಳುವೆನೋ ಅವರು ಮಾತ್ರ ಹೋಗಲಿ. ಯಾರಿಗೆ ಹೋಗಬಾರದೆಂದು
ಹೇಳುವೆನೋ ಅವರು ಹೋಗದಿರಲಿ," ಎಂದರು. [5]ಗಿದ್ಯೋನನು ಜನರನ್ನು ಹಳ್ಳಕ್ಕೆ ಕರೆದುಕೊಂಡು
ಬಂದಾಗ ಸರ್ವೇಶ್ವರ ಅವನಿಗೆ, "ನಾಯಿಯಂತೆ ನೀರನ್ನು ನಾಲಿಗೆಯಿಂದ ನೆಕ್ಕುವವರನ್ನೂ ಮೊಣಕಾಲೂರಿ
ಕುಡಿಯುವವರನ್ನೂ ಬೇರೆ ಬೇರೆಯಾಗಿ ನಿಲ್ಲಿಸು," ಎಂದು ಹೇಳಿದರು. [6]ಕೈಯಿಂದ ನೀರನ್ನು ಬಾಯಿಗೆ
ತೆಗೆದುಕೊಂಡು ನೆಕ್ಕಿದವರ ಸಂಖ್ಯೆ ಮುನ್ನೂರು. ಇತರ ಜನರು ಮೊಣಕಾಲೂರಿ ಕುಡಿದವರು. [7]ಆಗ
ಸರ್ವೇಶ್ವರ ಗಿದ್ಯೋನನಿಗೆ, "ನೀರನ್ನು ನೆಕ್ಕಿದ ಆ ಮುನ್ನೂರು ಮಂದಿಯಿಂದಲೇ ನಿಮಗೆ
ಜಯವನ್ನುಂಟುಮಾಡಿ ಮಿದ್ಯಾನ್ಯರನ್ನು ನಿನ್ನ ಕೈಗೆ ಒಪ್ಪಿಸಿಕೊಡುವೆನು; ಉಳಿದವರು ತಮ್ಮ ತಮ್ಮ ಸ್ಥಳಗಳಿಗೆ
ಹೋಗಲಿ," ಎಂದು ಆಜ್ಞಾಪಿಸಿದರು. [8]ಗಿದ್ಯೋನನು ಆ ಮುನ್ನೂರು ಜನರನ್ನು ಇಟ್ಟುಕೊಂಡು ಉಳಿದ
ಇಸ್ರಯೇಲರನ್ನು ಅವರವರ ಗುಡಾರಗಳಿಗೆ ಕಳುಹಿಸಿದನು. ಕಳುಹಿಸುವಾಗ ಅವರ ಹತ್ತಿರ ಇದ್ದ
ಆಹಾರವನ್ನೂ ಕೊಂಬುಗಳನ್ನೂ ತನ್ನ ಜನರಿಗಾಗಿ ತೆಗೆದುಕೊಂಡನು. ಮಿದ್ಯಾನ್ಯರ ದಂಡು ಕೆಳಗೆ ತಗ್ಗಿನಲ್ಲಿ
ಇಳಿದುಕೊಂಡಿತ್ತು.

9 ಅದೇ ರಾತ್ರಿ ಸರ್ವೇಶ್ವರ ಗಿದ್ಯೋನ್ಯನಿಗೆ, "ನೀನು ಎದ್ದು ಹೋಗಿ ಶತ್ರುಗಳ ಪಾಳೆಯದ ಮೇಲೆ
ಬೀಳು; ಅದನ್ನು ನಿನಗೆ ಒಪ್ಪಿಸಿ ಕೊಟ್ಟಿದ್ದೇನೆ. [10]ಅವರ ಮೇಲೆ ಬೀಳುವುದಕ್ಕೆ ಹೆದರಿಕೆಯಾದರೆ ಮೊದಲು
ನಿನ್ನ ಸೇವಕನಾದ ಪುರನ ಸಂಗಡ ಅಲ್ಲಿಗೆ ಹೋಗಿ ಅವರು ಮಾತಾಡಿಕೊಳ್ಳುವುದನ್ನು ಆಲಿಸು; [11]ಆಗ
ಅವರ ಮೇಲೆ ಬೀಳುವುದಕ್ಕೆ ನಿನಗೆ ಧೈರ್ಯ ಬರುವುದು," ಎಂದರು. ಗಿದ್ಯೋನನು ಅದರಂತೆಯೇ ತನ್ನ
ಸೇವಕನಾದ ಪುರನ ಸಂಗಡ ಶತ್ರು ಸೈನಿಕರ ಪಾಳೆಯದ ಕಡೇ ಭಾಗಕ್ಕೆ ಹೋದನು. [12]ಮಿದ್ಯಾನ್ಯರೂ
ಅಮಾಲೇಕ್ಯರೂ ಪೂರ್ವದೇಶದವರೂ ಮಿಡಿತೆಗಳಂತೆ ಗುಂಪಾಗಿ ತಗ್ಗಿನಲ್ಲಿ ಇಳಿದುಕೊಂಡಿದ್ದರು. ಅವರ
ಒಂಟೆಗಳು ಸಮುದ್ರತೀರದ ಮರಳಿನಂತೆ ಅಸಂಖ್ಯವಾಗಿದ್ದವು. [13]ಗಿದ್ಯೋನನು ಬಂದಾಗ ಅವರಲ್ಲೊಬ್ಬನು
ತನ್ನ ಜೊತೆಗಾರನಿಗೆ ಒಂದು ಕನಸನ್ನು ತಿಳಿಸುತ್ತಿದ್ದನು. ಅವನು, "ಇಗೋ, ನಾನು ಒಂದು ಕನಸು ಕಂಡೆ;
ಅದರಲ್ಲಿ ಒಂದು ಜವೆ ಗೋದಿಯ ರೊಟ್ಟಿ ಉರುಳುತ್ತಾ ಮಿದ್ಯಾನ್ಯರ ಪಾಳೆಯದೊಳಗೆ ಬಂದು ಒಂದು
ಡೇರೆಗೆ ತಗಲಿ ಅದನ್ನು ಅಡಿಮೇಲು ಮಾಡಿ ಬೀಳಿಸಿಬಿಟ್ಟಿತು," ಎಂದು ಹೇಳಿದನು. ಅವನ ಜೊತೆಗಾರನು,
[14]"ಇದು ಇಸ್ರಯೇಲನಾದ ಯೋವಾಷನ ಮಗ ಗಿದ್ಯೋನನ ಕತ್ತಿಯೇ ಹೊರತು ಮತ್ತೊಂದಲ್ಲ; ದೇವರು
ಮಿದ್ಯಾನ್ಯರನ್ನೂ ಅವರ ಪಾಳೆಯಗಳನ್ನೂ ಅವನ ಕೈಗೆ ಒಪ್ಪಿಸಿರುವರು," ಎಂದನು.

15 ಗಿದ್ಯೋನ್ಯನು ಆ ಕನಸನ್ನೂ ಅದರ ಅರ್ಥವನ್ನೂ ಕೇಳಿದಾಗ ಸರ್ವೇಶ್ವರನಿಗೆ ಅಡ್ಡಬಿದ್ದು
ಇಸ್ರಯೇಲರ ಪಾಳೆಯಕ್ಕೆ ಹಿಂದಿರುಗಿ ಬಂದು, ಅವರಿಗೆ, "ಏಳಿ, ಸರ್ವೇಶ್ವರ ಮಿದ್ಯಾನ್ಯರ ಪಾಳೆಯವನ್ನು
ನಿಮ್ಮ ಕೈಗೆ ಒಪ್ಪಿಸಿದ್ದಾರೆ," ಎಂದನು. [16]ಅಲ್ಲದೆ, ಅವನು ಆ ಮುನ್ನೂರು ಮಂದಿಯನ್ನು ಮೂರು ಗುಂಪು
ಮಾಡಿ ಪ್ರತಿ ಒಬ್ಬನ ಕೈಯಲ್ಲಿ ಕೊಂಬನ್ನೂ ಉರಿಯುವ ಪಂಜಡಗಿರುವ ಬರಿಕೊಡವನ್ನೂ ಕೊಟ್ಟು ಅವರಿಗೆ,

17“ನನ್ನನ್ನೇ ನೋಡುತ್ತಾ ನಾನು ಮಾಡುವ ಹಾಗೆ ಮಾಡಿ. ನಾನು ಪಾಳೆಯದ ಅಂಚಿಗೆ ಬಂದಾಗ ಹೇಗೆ
ಮಾಡುತ್ತೇನೋ ಹಾಗೆ ನೀವು ಮಾಡಬೇಕು. 18ನಾನೂ ನನ್ನ ಸಂಗಡಿಗರೂ ಕೊಂಬುಗಳನ್ನು ಊದುವಾಗ
ನೀವೂ ಪಾಳೆಯದ ಸುತ್ತಲೂ ಕೊಂಬನ್ನು ಊದಿ, ‘ಸರ್ವೇಶ್ವರಗೆ ಜಯ, ಗಿದ್ಯೋನನಿಗೆ ಜಯ’ ಎಂದು
ಕೂಗಿರಿ,” ಎಂದು ಹೇಳಿದನು.
19 ಮಧ್ಯರಾತ್ರಿ ಪ್ರಾರಂಭವಾಗುತ್ತಿದ್ದಂತೆ ಮೊದಲ ಕಾವಲುಗಾರರು ಬದಲಾದ ಕೂಡಲೆ
ಗಿದ್ಯೋನನು ಮತ್ತು ಅವನ ಸಂಗಡ ಇದ್ದ ನೂರುಮಂದಿ (ಶತ್ರುಗಳ) ಪಾಳೆಯದ ಅಂಚಿಗೆ ಬಂದು
ಕೊಂಬುಗಳನ್ನು ಊದಿ, ಕೈಯಲ್ಲಿದ್ದ ಕೊಡಗಳನ್ನು ಒಡೆದುಬಿಟ್ಟರು. 20ಕೂಡಲೆ ಮೂರು ಗುಂಪಿನವರೂ
ಕೊಂಬುಗಳನ್ನು ಊದಿ, ಕೊಡಗಳನ್ನು ಒಡೆದುಬಿಟ್ಟು ಎಡಗೈಯಲ್ಲಿ ಪಂಜುಗಳನ್ನೂ ಬಲಗೈಯಲ್ಲಿ ಊದುವ
ಕೊಂಬುಗಳನ್ನೂ ಹಿಡಿದು, “ಸರ್ವೇಶ್ವರನಿಗೆ ಪರಾಕು” ಎಂದು ಕೂಗಿ 21ಪಾಳೆಯದ ಸುತ್ತಲೂ ತಮ್ಮ ತಮ್ಮ
ಸ್ಥಳದಲ್ಲಿ ನಿಂತರು. ಪಾಳೆಯದವರಾದರೋ ಗಲಿಬಿಲಿಗೊಂಡು ಚೀರುತ್ತಾ ಓಡಿಹೋಗಲು ಆರಂಭಿಸಿದರು.
22ಆ ಮುನ್ನೂರು ಮಂದಿ ಕೊಂಬುಗಳನ್ನು ಊದುತ್ತಿರುವಲ್ಲಿ ಪಾಳೆಯದವರು ಒಬ್ಬರನ್ನೊಬ್ಬರು
ಹತಮಾಡಿಕೊಳ್ಳುವಂತೆ ಸರ್ವೇಶ್ವರ ಮಾಡಿದರು. ಪಾಳೆಯದವರು ಚೇರೆರದ ದಾರಿಯಲ್ಲಿರುವ
ಬೇತ್‍ಷಿಟ್ಟದವರೆಗೂ ಟಬ್ಬಾತಿನ ಬಳಿಯಲ್ಲಿರುವ ಆಬೇಲ್ಮೆಹೋಲಾ ಪ್ರಾಂತ್ಯದವರೆಗೂ ಓಡಿಹೋದರು.
23ಇಸ್ರಯೇಲರಾದ ನಫ್ತಾಲಿ, ಆಶೇರ್ ಕುಲಗಳವರೂ ಮನಸ್ಸೆಕುಲದ ಜನರೆಲ್ಲರೂ ಕೂಡಿ ಬಂದು
ಮಿದ್ಯಾನ್ಯರನ್ನು ಹಿಂದಟ್ಟಿದರು. 24ಇದಲ್ಲದೆ, ಗಿದ್ಯೋನನು ಎಫ್ರಯಿಮ್ ಪರ್ವತ ಪ್ರದೇಶಗಳಿಗೆ ದೂತರನ್ನು
ಅಟ್ಟಿ ಆ ಜನರಿಗೆ, “ನೀವು ಮಿದ್ಯಾನ್ಯರಿಗೆ ವಿರೋಧವಾಗಿ ಹೊರಟು, ಅವರು ಬೇತ್‍ಬಾರದವರೆಗಿರುವ
ಪ್ರವಾಹಗಳನ್ನೂ ಜೋರ್ಡನ್ ನದಿಯನ್ನೂ ದಾಟಿ ಹೋಗದಂತೆ ಅಡ್ಡಗಟ್ಟಿರಿ,” ಎಂದು ಹೇಳಿಕಳಿಸಿದನು.
ಆಗ ಎಫ್ರಯಿಮ್ಯರೆಲ್ಲರೂ ಬೇತ್‍ಬಾರದವರೆಗಿರುವ ಪ್ರವಾಹಗಳಿಗೂ ಜೋರ್ಡನ್ ನದಿಗೂ ಬಂದು ಅವುಗಳ
ಹಾಯಗಡಗಳನ್ನೆಲ್ಲಾ ಹಿಡಿದರು. 25ಇದಲ್ಲದೆ ಅವರು ಮಿದ್ಯಾನ್ಯರ ನಾಯಕರಾದ ಓರೇಬ್, ಜೇಬ್
ಎಂಬವರನ್ನು ಹಿಡಿದು ಓರೇಬನನ್ನು ಓರೇಬನ ಬಂಡೆಯ ಮೇಲೂ ಜೇಬನನ್ನು ಜೇಬನ ದ್ರಾಕ್ಷಿಯ
ಆಲೆಯಲ್ಲೂ ಕೊಂದು ಅವರ ತಲೆಗಳನ್ನು ತೆಗೆದುಕೊಂಡು ಮಿದ್ಯಾನ್ಯರನ್ನು ಹಿಂದಟ್ಟುತ್ತಾ ಜೋರ್ಡನಿನ
ಆಚೆಗೆ ಹೋಗಿ ಅಲ್ಲಿದ್ದ ಗಿದ್ಯೋನನಿಗೆ ಅವುಗಳನ್ನು ಒಪ್ಪಿಸಿದರು.

### ಮಿದ್ಯಾನ್ಯರ ಸಂಪೂರ್ಣ ಸೋಲು

**8** ಅನಂತರ ಎಫ್ರಯಿಮ್ಯರು ಗಿದ್ಯೋನನಿಗೆ, “ನೀನು ಹೀಗೇಕೆ ಮಾಡಿದೆ? ಮಿದ್ಯಾನ್ಯರೊಡನೆ ಯುದ್ಧ
ಮಾಡುವುದಕ್ಕೆ ಹೊರಟಾಗ ನಮ್ಮನ್ನೇಕೆ ಕರೆಯಲಿಲ್ಲ?” ಎಂದು ಉಗ್ರ ವಾಗ್ವಾದ ಮಾಡಿದರು. 2ಆಗ ಅವನು
ಅವರಿಗೆ, “ನೀವು ಮಾಡಿದ ಕಾರ್ಯಕ್ಕೆ ಸರಿಸಮಾನ ಆದದ್ದನ್ನು ನಾನೇನು ಮಾಡಿದೆ? ಅಭೀಯಿಜೆರನವರು
ಸುಗ್ಗಿಯಲ್ಲಿ ಕೂಡಿಸಿದ್ದಕ್ಕಿಂತಲೂ ಎಫ್ರಯಿಮ್ಯರು ಹಕ್ಕಲಾಯ್ದು ಕೂಡಿಸಿದ್ದು ಹೆಚ್ಚಾಗಿದೆಯಲ್ಲವೇ? 3ದೇವರು
ಮಿದ್ಯಾನ್ಯರ ನಾಯಕರಾದ ಓರೇಬ್ ಮತ್ತು ಜೇಬರನ್ನೇ ನಿಮ್ಮ ಕೈಗೆ ಒಪ್ಪಿಸಿಕೊಟ್ಟಿದ್ದಾರಲ್ಲವೆ; ಇದಕ್ಕೆ
ಸರಿಸಮಾನವಾದದ್ದನ್ನು ನಾನೇನು ಮಾಡಿದ್ದೇನೆ?” ಎಂದನು. ಈ ಮಾತುಗಳನ್ನು ಕೇಳಿದ ಮೇಲೆ ಅವರ
ಸಿಟ್ಟಿಳಿಯಿತು.
4 ಗಿದ್ಯೋನನೂ ಅವನ ಸಂಗಡ ಇದ್ದ ಮುನ್ನೂರು ಮಂದಿಯೂ ಬಹಳ ದಣಿದಿದ್ದರು. ಆದರೂ
ಹಿಂದಟ್ಟುತ್ತಾ ಜೋರ್ಡನನ್ನು ದಾಟಿ ಸುಖೋತಿಗೆ ಬಂದರು. 5ಗಿದ್ಯೋನನು ಸುಖೋತಿನವರಿಗೆ,
“ದಯವಿಟ್ಟು ನನ್ನ ಜೊತೆಯಲ್ಲಿ ಬಂದಿರುವವರಿಗೆ ಸ್ವಲ್ಪ ರೊಟ್ಟಿ ಕೊಡಿ. ಅವರು ಬಹಳ ದಣಿದಿದ್ದಾರೆ;
ನಾನು ಮಿದ್ಯಾನ್ಯರ ಅರಸರಾದ ಜೆಬಹ ಮತ್ತು ಚಲ್ಮುನ್ನ ಎಂಬವರನ್ನು ಹಿಂದಟ್ಟುತ್ತಾ ಇದ್ದೇನೆ,” ಎಂದನು.
6ಆದರೆ ಸುಖೋತಿನ ಮುಖಂಡರು ಅವನಿಗೆ, “ನಾವು ನಿನ್ನ ಸೈನಿಕರಿಗೆ ರೊಟ್ಟಿಕೊಡುವುದಕ್ಕೆ ಜೆಬಹ ಮತ್ತು
ಚಲ್ಮುನ್ನ ಎಂಬವರನ್ನು ಕೈಕಟ್ಟಿ ವಶಮಾಡಿಕೊಂಡಿದ್ದೀಯೋ?”, ಎಂದು ತಿರಸ್ಕರಿಸಿದರು. 7ಆಗ ಗಿದ್ಯೋನನು
ಅವರಿಗೆ, “ಒಳ್ಳೆಯದು, ಸರ್ವೇಶ್ವರ ಜೆಬಹ ಮತ್ತು ಚಲ್ಮುನ್ನ ಎಂಬವರನ್ನು ನನ್ನ ಕೈಗೆ ಒಪ್ಪಿಸಿಕೊಟ್ಟ
ತರುವಾಯ ನಾನು ನಿಮ್ಮನ್ನು ಜಾಲಿ ಮುಳ್ಳುಗಳಿಂದಲೂ ಕಾರೆಗಿಡಗಳಿಂದಲೂ ಹೊಡಿಸುವೆನು,” ಎಂದು

ಹೇಳಿದನು. [8]ಅವನು ಅಲ್ಲಿಂದ ಪೆನೂವೇಲಿಗೆ ಬಂದು ಅಲ್ಲಿನ ಜನರನ್ನು ಅದೇ ಪ್ರಕಾರ ಬಿನ್ನವಿಸಲು ಅವರೂ ಸುಖೋತಿನವರಂತೆಯೇ ತಾತ್ಸಾರಮಾಡಿದರು. [9]ಗಿದ್ಯೋನನು ಅವರಿಗೆ, "ನಾನು ಸುರಕ್ಷಿತವಾಗಿ ಹಿಂದಿರುಗಿ ಬಂದಾಗ ಈ ಗೋಪುರವನ್ನು ಕೆಡವಿಬಿಡುವೆನು," ಎಂದನು.

10 ಜೆಬಹ ಮತ್ತು ಚಲ್ಮುನ್ನ ಎಂಬವರು ಸುಮಾರು ಹದಿನೈದು ಸಾವಿರ ಮಂದಿ ಸೈನಿಕರೊಡನೆ ಕರ್ಕೋರಿನಲ್ಲಿ ಇಳಿದುಕೊಂಡಿದ್ದರು. ಪೂರ್ವದೇಶದವರ ಸೈನ್ಯದಲ್ಲಿ ಲಕ್ಷದ ಇಪ್ಪತ್ತು ಸಾವಿರ ಯೋಧರು ಹತರಾಗಿ ಉಳಿದವರು ಇಷ್ಟೇ ಮಂದಿ. [11]ಗಿದ್ಯೋನನು ಕಾಡುಗೊಲ್ಲರ ಪ್ರದೇಶ ಮಾರ್ಗವಾಗಿ ನೋಬಹ, ಯೊಗ್ಬೆಹಾ ಇವುಗಳ ಪೂರ್ವದಿಕ್ಕಿಗೆ ಹೋಗಿ ನಿರ್ಭಯದಿಂದ ಇಳಿದುಕೊಂಡಿದ್ದ ಆ ಪಾಳೆಯದ ಮೇಲೆ ದಾಳಿಮಾಡಿದನು. [12]ಜೆಬಹನೂ ಚಲ್ಮುನ್ನನೂ ಓಡಿ ಹೋಗುವಾಗ ಅವರನ್ನು ಹಿಂದಟ್ಟಿ ಹಿಡಿದು ಅವರ ಸೈನ್ಯವನ್ನು ಚದರಿಸಿಬಿಟ್ಟನು.

13 ಯೋವಾಷನ ಮಗನಾದ ಗಿದ್ಯೋನನು ಯುದ್ಧದಿಂದ ಹೆರೆಸಿನ ಗಟ್ಟದ ಮಾರ್ಗವಾಗಿ ಹಿಂದಿರುಗಿ ಬಂದನು. [14]ಸುಖೋತಿನ ಒಬ್ಬ ಯೌವನಸ್ಥನನ್ನು ಹಿಡಿದು ಆ ಊರಿನ ಮುಖಂಡರೂ ಹಿರಿಯರೂ ಯಾರಾರೆಂದು ವಿಚಾರಿಸಿ ಎಪ್ಪತ್ತೇಳು ಮಂದಿಯ ಹೆಸರುಗಳನ್ನು ಬರೆಸಿಕೊಂಡನು. [15]ಅನಂತರ ಅವನು ಸುಖೋತಿನವರ ಬಳಿಗೆ ಹೋಗಿ ಅವರಿಗೆ, "'ದಣಿದಿರುವ ನಿನ್ನ ಸೈನಿಕರಿಗಾಗಿ ನಾವು ರೊಟ್ಟಿ ಕೊಡುವುದಕ್ಕೆ ಜೆಬಹ ಮತ್ತು ಚಲ್ಮುನ್ನ ಎಂಬವರನ್ನು ಕೈಕಟ್ಟಿ ಸ್ವಾಧೀನ ಮಾಡಿಕೊಂಡಿದ್ದೀಯೋ?,' ಎಂದು ನನ್ನನ್ನು ನಿಂದಿಸಿದಿರಲ್ಲವೆ; [16]ನೋಡಿ, ಅವರು ಇಲ್ಲಿರುತ್ತಾರೆ" ಎಂದು ಊರಿನ ಹಿರಿಯರನ್ನೂ ಮುಖಂಡರನ್ನೂ ಜಾಲಿಮುಳ್ಳು ಹಾಗು ಕಾರೆ ಗಿಡಗಳಿಂದಲೂ ಹೊಡಿಸಿ ಸುಖೋತಿನವರಿಗೆ ಬುದ್ಧಿಕಲಿಸಿದನು. [17]ಮತ್ತು ಪೆನೂವೇಲಿನ ಗೋಪುರವನ್ನು ಕೆಡವಿ ಬಿಟ್ಟು ಆ ಊರಿನ ಜನರನ್ನು ಕೊಂದುಹಾಕಿದನು.

18 ಬಳಿಕ ಗಿದ್ಯೋನನು ಜೆಬಹ ಮತ್ತು ಚಲ್ಮುನ್ನ ಎಂಬವರನ್ನು, "ನೀವು ತಾಬೋರದಲ್ಲಿ ಕೊಂದು ಹಾಕಿದ ವ್ಯಕ್ತಿಗಳು ಹೇಗಿದ್ದರು?" ಎಂದು ಕೇಳಿದಾಗ ಅವರು ಅವನಿಗೆ, "ನಿನ್ನ ಹಾಗೆಯೇ ಇದ್ದರು; ಎಲ್ಲರೂ ರೂಪದಲ್ಲಿ ರಾಜ ಪುತ್ರರಂತಿದ್ದರು," ಎಂದು ಉತ್ತರಕೊಟ್ಟರು. [19]ಆಗ ಅವನು; "ಅವರು ನನ್ನ ತಾಯಿಯ ಮಕ್ಕಳು; ನನ್ನ ಸಹೋದರರು; ಸರ್ವೇಶ್ವರನ ಆಣೆ, ನೀವು ಅವರನ್ನು ಉಳಿಸಿದ್ದರೆ ನಾನು ನಿಮ್ಮನ್ನು ಕೊಲ್ಲುತ್ತಿರಲಿಲ್ಲ" ಎಂದು ಹೇಳಿ [20]ತನ್ನ ಹಿರಿಯ ಮಗನಾದ ಎತೆರನಿಗೆ, "ನೀನೆದ್ದು ಇವರನ್ನು ಕೊಂದುಹಾಕು," ಎಂದನು. ಆದರೆ ಅವನು ಇನ್ನೂ ಹುಡುಗನಾಗಿದ್ದುದರಿಂದ ಭಯಪಟ್ಟು ಕತ್ತಿಯನ್ನು ಹಿರಿಯಲೇ ಇಲ್ಲ. [21]ಆಗ ಜೆಬಹನು ಹಾಗು ಚಲ್ಮುನ್ನನು ಗಿದ್ಯೋನನಿಗೆ, "ನೀನೇ ಎದ್ದು ಬಂದು ನಮ್ಮ ಮೇಲೆ ಬೀಳು; ಪ್ರಾಯಕ್ಕೆ ತಕ್ಕಂತೆ ಪುರುಷನಿಗೆ ಬಲವಿರುತ್ತದೆ ಅಲ್ಲವೆ?" ಎನ್ನಲು ಅವನೆದ್ದು ಜೆಬಹ ಮತ್ತು ಚಲ್ಮುನ್ನ ಎಂಬವರನ್ನು ಕೊಂದುಹಾಕಿ ಅವರ ಒಂಟೆಗಳ ಕೊರಳಲ್ಲಿದ್ದ ಅರ್ಧಚಂದ್ರಾಕಾರದ ಆಭರಣಗಳನ್ನು ತೆಗೆದುಕೊಂಡನು.

22 ತರುವಾಯ ಇಸ್ರಯೇಲರು ಗಿದ್ಯೋನನಿಗೆ, "ನೀನು ನಮ್ಮನ್ನು ಮಿದ್ಯಾನ್ಯರ ಕೈಯಿಂದ ಬಿಡಿಸಿದ್ದೀಯಲ್ಲವೆ? ನೀನೂ ನಿನ್ನ ಮಗನೂ ಮೊಮ್ಮಗನೂ ವಂಶಪಾರಂಪರ್ಯವಾಗಿ ನಮ್ಮ ಮೇಲೆ ಅರಸರಾಗಿರಬೇಕು," ಎಂದರು. [23]ಅವನು ಅವರಿಗೆ, "ನಾನಾಗಲಿ, ನನ್ನ ಮಗನಾಗಲಿ ನಿಮ್ಮನ್ನು ಆಳುವುದಿಲ್ಲ; ಸರ್ವೇಶ್ವರನೇ ನಿಮ್ಮ ಅರಸ. [24]ಆದರೆ ನಿಮ್ಮಲ್ಲಿ ನನ್ನದೊಂದು ಬಿನ್ನಹ: ಪ್ರತಿಯೊಬ್ಬನು ತಾನು ಕೊಳ್ಳೆಹೊಡೆದ ಮುರುವುಗಳನ್ನು ನನಗೆ ಕೊಡಲಿ," ಎಂದನು. ಮಿದ್ಯಾನ್ಯರು ಇಷ್ಮಾಯೇಲ್ಯರಾಗಿದ್ದುದರಿಂದ ಬಂಗಾರದ ಮುರುವುಗಳನ್ನು ಹಾಕಿಕೊಳ್ಳುತ್ತಿದ್ದರು. [25]ಗಿದ್ಯೋನನ ಬಿನ್ನಹಕ್ಕೆ ಇಸ್ರಯೇಲರು, "ನಾವು ಸಂತೋಷದಿಂದ ಕೊಡುತ್ತೇವೆ," ಎಂದು ಹೇಳಿ ಅಲ್ಲಿ ಒಂದು ಬಟ್ಟೆಯನ್ನು ಹಾಸಿ, ಅದರ ಮೇಲೆ ತಾವು ಕೊಳ್ಳೆಯಾಗಿ ತಂದ ಮುರುವುಗಳನ್ನು ಇಟ್ಟರು. [26]ಗಿದ್ಯೋನನಿಗೆ ಮೊದಲೇ ದೊರಕಿದ್ದ ಅರ್ಧಚಂದ್ರಾಕಾರದ ಆಭರಣ, ಕುಂಡಲ, ಮಿದ್ಯಾನ್ ರಾಜರು ಹೊದ್ದುಕೊಂಡಿದ್ದ ರಕ್ತಾಂಬರ, ಅವರ ಒಂಟೆಗಳ ಕಂಠಮಾಲೆ ಇವುಗಳ ಹೊರತಾಗಿ ಅವನು ಇಸ್ರಯೇಲರಿಂದ ಕೇಳಿ ತೆಗೆದುಕೊಂಡ ಮುರುವುಗಳ ಬಂಗಾರವೇ 20 ಕಿಲೋಗ್ರಾಂ ತೂಕವಾಗಿತ್ತು. [27]ಈ ಬಂಗಾರದಿಂದ ಗಿದ್ಯೋನನು ಒಂದು 'ಏಫೋದ'ನ್ನು ಮಾಡಿಸಿ ಅದನ್ನು ತನ್ನ ಊರಾದ ಒಫ್ರದಲ್ಲಿಟ್ಟನು. ಅದನ್ನು ಪೂಜಿಸುತ್ತಿದ್ದುದರಿಂದ ಇಸ್ರಯೇಲರೆಲ್ಲರೂ ದೇವದ್ರೋಹಿಗಳಾದರು; ಅದು

ಗಿದ್ಯೋನನಿಗೂ ಅವನ ಮನೆಯವರಿಗೂ ಒಂದು ಉರುಲು ಆಯಿತು. [28]ಮಿದ್ಯಾನ್ಯರು ಇಸ್ರಯೇಲರ ಮುಂದೆ ಬಹಳವಾಗಿ ತಗ್ಗಿಹೋದರು. ಅವರು ಮರಳಿ ತಲೆಯೆತ್ತಲಾಗಲಿಲ್ಲ. ಗಿದ್ಯೋನನ ಜೀವಮಾನದಲ್ಲಿ ನಾಲ್ವತ್ತು ವರ್ಷಗಳ ಕಾಲಪರ್ಯಂತ ದೇಶದಲ್ಲಿ ಶಾಂತಿಸಮಾಧಾನವಿತ್ತು.

29 ಯೋವಾಷನ ಮಗ 'ಯೆರುಬ್ಬಾಳ'ನು ಹೋಗಿ ತನ್ನ ಮನೆಯಲ್ಲಿ ವಾಸವಾಗಿದ್ದನು. [30]ಗಿದ್ಯೋನನಿಗೆ ಅನೇಕ ಮಂದಿ ಹೆಂಡತಿಯರು ಇದ್ದರು. ಅವನಿಗೆ ಎಪ್ಪತ್ತು ಮಂದಿ ಗಂಡು ಮಕ್ಕಳು ಹುಟ್ಟಿದರು. [31]ಅವನಿಗೆ ಶೆಕೆಮಿನಲ್ಲಿ ಇದ್ದ ತನ್ನ ಉಪಪತ್ನಿಯಲ್ಲಿ ಇನ್ನೊಬ್ಬ ಮಗ ಹುಟ್ಟಿದನು. ಅವನಿಗೆ ಅಬೀಮೆಲೆಕನೆಂದು ಹೆಸರಿಟ್ಟನು. [32]ಯೋವಾಷನ ಮಗನಾದ ಗಿದ್ಯೋನನು ಹಣ್ಣು ಹಣ್ಣು ಮುದುಕನಾಗಿ ಮರಣ ಹೊಂದಲು ಅವನ ಶವವನ್ನು ಅಬೀಯೆಜೆರೀಯರ ಒಫ್ರದಲ್ಲಿದ್ದ ಒಂದು ಸಮಾಧಿಯಲ್ಲಿ ಹೂಣಿಟ್ಟರು. ಆ ಸಮಾಧಿ ಅವನ ತಂದೆ ಆದ ಯೋವಾಷನದಾಗಿತ್ತು. [33]ಗಿದ್ಯೋನನು ಸತ್ತನಂತರ ಇಸ್ರಯೇಲರು ದೇವದ್ರೋಹಿಗಳಾಗಿ ಬಾಳನ ಪ್ರತಿಮೆಗಳನ್ನು ಪೂಜಿಸಿದರು; ಬಾಳ್ ಬೆರೀತನನ್ನು ತಮ್ಮ ದೇವರನ್ನಾಗಿ ಮಾಡಿಕೊಂಡರು. [34]ಸುತ್ತಮುತ್ತಲಿನ ಶತ್ರುಗಳಿಂದ ತಮ್ಮನ್ನು ಬಿಡಿಸಿದ ದೇವರಾದ ಸರ್ವೇಶ್ವರನನ್ನು ಮರೆತುಬಿಟ್ಟರು. [35]ಯೆರುಬ್ಬಾಳನೆಂಬ ಗಿದ್ಯೋನನು ತಮಗೆ ಮಾಡಿದ ಉಪಕಾರಗಳನ್ನು ಸ್ಮರಿಸಲಿಲ್ಲ; ಅವನ ಮನೆಯವರಿಗೆ ದಯೆ ತೋರಿಸಲಿಲ್ಲ.

## ಗಿದ್ಯೋನನ ಮಗ ಅಬೀಮೆಲೆಕನು

**9** 'ಯೆರುಬ್ಬಾಳ'ನ ಮಗ ಅಬೀಮೆಲೆಕನು ಶೆಕೆಮಿಗೆ ಹೋಗಿ ತನ್ನ ಸೋದರ ಮಾವಂದಿರಿಗೂ ತಾಯಿಯ ಬಂಧುಗಳೆಲ್ಲರಿಗೂ, [2]"ನೀವು ದಯವಿಟ್ಟು ಶೆಕೆಮಿನ ಹಿರಿಯರೊಡನೆ ಮಾತಾಡಬೇಕು. ಯೆರುಬ್ಬಾಳನ ಎಪ್ಪತ್ತು ಮಂದಿ ಮಕ್ಕಳು ನಿಮ್ಮನ್ನು ಆಳುವುದು ಒಳ್ಳೆಯದೋ ಅಥವಾ ಒಬ್ಬನೇ ಆಳುವುದು ಮೇಲೋ? ಎಂದು ಅವರನ್ನು ವಿಚಾರಿಸಬೇಕು; ನಾನು ಅವರ ರಕ್ತ ಸಂಬಂಧಿಯಾಗಿದ್ದೇನೆಂಬುದನ್ನು ಜ್ಞಾಪಕಪಡಿಸಬೇಕು" ಎಂದು ಕೇಳಿಕೊಂಡನು. [3]ಅವರು ಶೆಕೆಮಿನ ಹಿರಿಯರ ಬಳಿಗೆ ಹೋಗಿ ಅಬೀಮೆಲೆಕನ ವಿಷಯದಲ್ಲಿ ಹಾಗೆಯೇ ಹೇಳಿದರು. ಅವರು, "ಇವನು ನಮ್ಮ ಸಹೋದರನಾಗಿದ್ದಾನಲ್ಲವೆ" ಎಂದುಕೊಂಡು ಅವನ ಪಕ್ಷವಹಿಸಲು ಒಪ್ಪಿಕೊಂಡರು. [4]ಅದು ಮಾತ್ರವಲ್ಲ, ಬಾಳ್‌ಬೆರೀತಿನ ದೇವಸ್ಥಾನದಿಂದ ಎಪ್ಪತ್ತು ಬೆಳ್ಳಿನಾಣ್ಯಗಳನ್ನು ಅವನಿಗೆ ಕೊಟ್ಟರು. ಅವನು ಈ ಹಣದಿಂದ ಕೆಲವು ಮಂದಿ ಪುಂಡಪೋಕರಿಗಳನ್ನು ಕೂಡಿಸಿ, ಅವರ ನಾಯಕನಾಗಿ ಹೊರಟು, [5]ಒಫ್ರದಲ್ಲಿದ್ದ ತನ್ನ ತಂದೆಯಾದ ಯೆರುಬ್ಬಾಳನ ಮನೆಗೆ ಹೋಗಿ, ಅವನ ಎಪ್ಪತ್ತು ಮಂದಿ ಮಕ್ಕಳನ್ನು ಹಿಡಿದು ಒಂದೇ ಬಂಡೆಯ ಮೇಲೆ ಕೊಲ್ಲಿಸಿದನು. ಆದರೆ ಕಿರಿಯವನಾದ ಯೋತಾಮನು ಅವಿತುಕೊಂಡು ತನ್ನ ಜೀವವನ್ನು ಉಳಿಸಿಕೊಂಡನು. [6]ತರುವಾಯ ಎಲ್ಲಾ ಶೆಕೆಮಿನವರೂ ಹಾಗು ಮಿಲ್ಲೋ ಕೋಟೆಯವರೂ ಶೆಕೆಮಿನ ಬಳಿಯಲ್ಲಿ ಸ್ಮಾರಕ ಸ್ತಂಭವಿರುವ ಓಕ್‌ಮರದ ಹತ್ತಿರ ಕೂಡಿ ಬಂದು ಅಬೀಮೆಲೆಕನನ್ನು ತಮ್ಮ ಅರಸನನ್ನಾಗಿ ಮಾಡಿಕೊಂಡರು.

## ಯೋತಾಮನ ಸಾಮತಿ

7 ಯೋತಾಮನು ಇದನ್ನು ಕೇಳಿ, ಗೆರಿಜ್ಜೀಮ್ ಬೆಟ್ಟದ ತುದಿಯಲ್ಲಿ ನಿಂತು ಗಟ್ಟಿಯಾದ ಧ್ವನಿಯಿಂದ ಹೀಗೆಂದನು: "ಶೆಕೆಮಿನ ಜನರೇ, ನನ್ನ ಮಾತಿಗೆ ಕಿವಿಗೊಡಿ; ಆಗ ದೇವರೂ ನಿಮ್ಮ ಮೊರೆಗೆ ಕಿವಿಗೊಡುವರು:

8 "ಒಮ್ಮೆ ಮರಗಳು ತಮಗೆ ಒಬ್ಬ ಅರಸನನ್ನು ಅಭಿಷೇಕಿಸಬೇಕೆಂದು ಹೊರಟು ಓಲಿವ್ ಮರದ ಬಳಿಗೆ ಬಂದು, 'ನೀನು ನಮಗೆ ಅರಸನಾಗು,' ಎಂದವು. [9]ಅದು ಅವುಗಳಿಗೆ, 'ನನ್ನಲ್ಲಿರುವ ಎಣ್ಣೆಯಿಂದ ದೇವತೆಗಳೂ ಮಾನವರೂ ಘನತೆ ಗೌರವಗಳನ್ನು ಪಡೆಯುತ್ತಾರೆ. ಇದನ್ನು ಬಿಟ್ಟು ಮರಗಳ ಮೇಲೆ ಓಲಾಡುವುದಕ್ಕೆ ಬರಬೇಕೊ?' ಎಂದಿತು.

10 “ಬಳಿಕ ಆ ಮರಗಳು ಅಂಜೂರದ ಗಿಡದ ಬಳಿಗೆ ಹೋಗಿ ಅದಕ್ಕೆ, ‘ನೀನು ಬಂದು ನಮ್ಮ
ಅರಸನಾಗು,’ ಎಂದವು. 11ಅದು, ‘ನಾನು ನನ್ನ ಶ್ರೇಷ್ಠವಾದ ಸಿಹಿಹಣ್ಣು ಕೊಡುವುದನ್ನು ಬಿಟ್ಟು ಮರಗಳ
ಮೇಲೆ ಓಲಾಡುವುದಕ್ಕೆ ಬರಬೇಕೋ?’ ಎಂದಿತು.
12 “ಅನಂತರ ಆ ಮರಗಳು ದ್ರಾಕ್ಷಾಬಳ್ಳಿಯ ಬಳಿಗೆ ಹೋಗಿ, ‘ನೀನು ಬಂದು ನಮ್ಮ ಅರಸನಾಗು,’
ಎಂದವು. 13ಅದಕ್ಕೆ ಆ ಬಳ್ಳಿ, ‘ನಾನು ನನ್ನ ರಸದಿಂದ ದೇವತೆಗಳಿಗೂ ಮಾನವರಿಗೂ ಆನಂದ ತರುವುದನ್ನು
ಬಿಟ್ಟು ಮರಗಳ ಮೇಲೆ ಓಲಾಡುವುದಕ್ಕೆ ಬರಬೇಕೋ?’ ಎಂದಿತು.
14 “ಕಡೆಗೆ ಆ ಮರಗಳು ಮುಳ್ಳು ಪೊದೆಯ ಬಳಿಗೆ ಹೋಗಿ, ‘ನೀನು ಬಂದು ನಮ್ಮ ಅರಸನಾಗು,’
ಎಂದವು. 15ಅದಕ್ಕೆ ಆ ಪೊದೆ, ‘ನೀವು ನಿಜವಾದ ಮನಸ್ಸಿನಿಂದ ನನಗೆ ರಾಜ್ಯಾಭಿಷೇಕ
ಮಾಡಬೇಕೆಂದಿರುವುದಾದರೆ, ಬನ್ನಿ, ಬಂದು ನನ್ನ ನೆರಳಲ್ಲಿ ಆಶ್ರಯಿಸಿಕೊಳ್ಳಿ; ಇಲ್ಲವಾದರೆ ನನ್ನಿಂದ
ಬೆಂಕಿಹೊರಟು ಲೆಬನೋನಿನ ದೇವದಾರುವೃಕ್ಷಗಳನ್ನು ಸುಟ್ಟುಬಿಡುವುದು,’ ಎಂದುಬಿಟ್ಟಿತು.
16 “ನೀವು ಅಬೀಮೆಲೆಕನನ್ನು ಅರಸನನ್ನಾಗಿ ಮಾಡಿದ್ದು ನ್ಯಾಯಸಮ್ಮತವೇ? ಅದು
ಧರ್ಮಕಾರ್ಯವೇ? ಯೆರುಬ್ಬಾಳನು ನಿಮಗೆ ಮಾಡಿದ ಉಪಕಾರಕ್ಕಾಗಿ ನೀವು ಅವನಿಗೂ ಅವನ
ಮನೆಯವರಿಗೂ ಪ್ರತ್ಯುಪಕಾರ ಮಾಡಿದಿರೋ? 17ನನ್ನ ತಂದೆ ತನ್ನ ಪ್ರಾಣಾಶೆಯನ್ನು ತೊರೆದು ಹೋರಾಡಿ
ನಿಮ್ಮನ್ನು ಮಿದ್ಯಾನ್ಯರ ಕೈಯಿಂದ ಬಿಡಿಸಿದನಲ್ಲವೆ? 18ಆದರೆ ನೀವು ಈಗ ನನ್ನ ತಂದೆಯ ಮನೆಗೆ
ವಿರೋಧವಾಗಿ ನಿಂತು ಅವನ ಎಪ್ಪತ್ತು ಮಂದಿ ಮಕ್ಕಳನ್ನು ಒಂದೇ ಬಂಡೆಯ ಮೇಲೆ ವಧಿಸಿದ ಅವನ
ದಾಸಿಯ ಮಗನಾದ ಅಬೀಮೆಲೆಕನನ್ನು ನಿಮ್ಮ ಬಂಧುವೆಂದು ಹೇಳಿ ಶೆಕೆಮಿನ ಅರಸನನ್ನಾಗಿ
ಮಾಡಿಕೊಂಡಿದ್ದೀರಿ. 19ನೀವು ಈಗ ಯೆರುಬ್ಬಾಳನಿಗೂ ಅವನ ಮನೆಯವರಿಗೂ ಮಾಡಿದ್ದು ನ್ಯಾಯವೂ
ಧರ್ಮವೂ ಆಗಿದ್ದರೆ ಅಬೀಮೆಲೆಕನಲ್ಲೇ ಆನಂದಿಸಿರಿ; ಅವನು ನಿಮ್ಮಲ್ಲೇ ಆನಂದಿಸಲಿ. 20ಇಲ್ಲವಾದರೆ,
ಅಬೀಮೆಲೆಕನಿಂದ ಬೆಂಕಿಹೊರಟು ಶೆಕೆಮಿನವರನ್ನೂ ಮಿಲ್ಲೋ ಕೋಟೆಯವರನ್ನೂ ಸುಟ್ಟು ಬಿಡಲಿ’
ಶೆಕೆಮಿನವರಿಂದಲೂ ಮಿಲ್ಲೋ ಕೋಟೆಯವರಿಂದಲೂ ಬೆಂಕಿ ಹೊರಟು ಅಬೀಮೆಲೆಕನನ್ನು ಸುಟ್ಟುಬಿಡಲಿ.”
21ಯೋತಾಮನು ಇಷ್ಟು ಹೇಳಿ ತನ್ನ ಸಹೋದರನಾದ ಅಬೀಮೆಲೆಕನಿಂದ ತಪ್ಪಿಸಿಕೊಂಡು ಬೇರಕ್ಕೆ
ಓಡಿಹೋಗಿ ಅಲ್ಲೇ ವಾಸಮಾಡಿದನು.
22 ಅಬೀಮೆಲೆಕನು ಇಸ್ರಯೇಲರನ್ನು ಮೂರು ವರ್ಷ ಆಳಿದನಂತರ 23ಸರ್ವೇಶ್ವರಸ್ವಾಮಿ
ಅವನಿಗೂ ಶೆಕೆಮಿನ ಹಿರಿಯರಿಗೂ ವೈಮನಸ್ಸು ಹುಟ್ಟುವಂತೆ ದುಷ್ಟ ಆತ್ಮವನ್ನು ಕಳುಹಿಸಿದರು. ಈ
ಶೆಕೆಮಿನವರು ಅಬೀಮೆಲೆಕನಿಗೆ ದ್ರೋಹ ಎಸಗಿದರು. 24ಹೀಗೆ ಯೆರುಬ್ಬಾಳನ ಎಪ್ಪತ್ತು ಮಂದಿ ಮಕ್ಕಳನ್ನು
ಕ್ರೂರತನದಿಂದ ಕೊಂದು ಹಾಕಿದ ರಕ್ತಾಪರಾಧಫಲವು ಅವರ ಸಹೋದರನಾದ ಅಬೀಮೆಲೆಕನ ಮೇಲೂ
ಆ ಕೃತ್ಯದಲ್ಲಿ ಅವನಿಗೆ ಸಹಾಯಕರಾಗಿದ್ದ ಶೆಕೆಮಿನವರ ಮೇಲೂ ಬರುವುದಕ್ಕೆ ಮಾರ್ಗವಾಯಿತು.
25ಶೆಕೆಮಿನವರು ಅಬೀಮೆಲೆಕನಿಗೆ ವಿರೋಧವಾಗಿ ಪರ್ವತಶಿಖರಗಳಲ್ಲಿ ಹೊಂಚುಗಾರರನ್ನಿಟ್ಟರು. ಇವರು ಆ
ದಾರಿಗಳಲ್ಲಿ ಸಂಚರಿಸುವ ಪ್ರಯಾಣಿಕರನ್ನು ಸುಲಿಗೆಮಾಡುತ್ತಿದ್ದರು. ಈ ವರ್ತಮಾನ ಅಬೀಮೆಲೆಕನಿಗೆ
ಮುಟ್ಟಿತು.
26 ಅದೇ ಸಮಯದಲ್ಲಿ ಎಬೆದನ ಮಗನಾದ ಗಾಳನೆಂಬವನು ತನ್ನ ಬಂದುಗಳೊಡನೆ ಶೆಕೆಮಿಗೆ
ಬಂದನು. ಶೆಕೆಮಿನ ಹಿರಿಯರು ಅವನಲ್ಲಿ ಭರವಸೆ ಇಟ್ಟರು. 27ಆ ಊರಿನವರು ಒಂದು ದಿವಸ ತಮ್ಮ
ದ್ರಾಕ್ಷಾಫಲಗಳನ್ನು ಕೊಯ್ದು, ಆಲೆಗಳಲ್ಲಿ ರಸತೆಗೆದು, ತಮ್ಮ ದೇವರ ಗುಡಿಗೆ ಹೋಗಿ, ಹಬ್ಬ ಮಾಡಿ,
ಉಂಡು, ಕುಡಿದು ಅಬೀಮೆಲೆಕನನ್ನು ಶಪಿಸಿದರು. 28ಎಬೇದನ ಮಗನಾದ ಗಾಳನೂ ಅವರ ಸಂಗಡ
ಕೂಡಿಕೊಂಡು, “ಅಬೀಮೆಲೆಕನು ಎಷ್ಟರವನು? ಶೆಕೆಮಿನವರಾದ ನಾವು ಎಷ್ಟರವರು? ನಾವು
ಅಬೀಮೆಲೆಕನಿಗೆ ಏಕೆ ಸೇವೆಮಾಡಬೇಕು? ಅವನು ಯೆರುಬ್ಬಾಳನ ಮಗನಲ್ಲವೇ? ಅವನ ಪುರಾಧಿಕಾರಿ
ಜೆಬುಲನಲ್ಲವೇ? ನಾವು ಅವನಿಗೆ ಏಕೆ ಸೇವೆಮಾಡಬೇಕು? ಶೆಕೆಮನ ತಂದೆಯಾದ ಹಮೋರನ
ವಂಶದವರಿಗೇ ಸೇವೆಮಾಡೋಣ. 29ಈ ಜನರ ಮೇಲೆ ನನಗೆ ಅಧಿಕಾರವಿದ್ದರೆ ಅಬೀಮೆಲೆಕನನ್ನು ಓಡಿಸಿ
ಬಿಡುತ್ತಿದ್ದೆ” ಎಂದು ಹೇಳಿದನು. ಅಷ್ಟು ಮಾತ್ರವಲ್ಲದೆ, “ಎಲಾ, ಅಬೀಮೆಲೆಕನೇ, ಸೈನ್ಯವನ್ನು ತೆಗೆದುಕೊಂಡು
ನನ್ನೊಡನೆ ಯುದ್ಧಕ್ಕೆ ಬಾ,” ಎಂದು ಕೊಚ್ಚಿಕೊಂಡನು.

30 ಪುರಾಧಿಕಾರಿಯಾದ ಜೆಬುಲನು ಎಬೆದನ ಮಗನಾದ ಗಾಳನ ಮಾತುಗಳನ್ನು ಕೇಳಿ
ಕೋಪಗೊಂಡನು. ಯಾರಿಗೂ ತಿಳಿಯದಂತೆ ಅಬೀಮೆಲೆಕನ ಬಳಿಗೆ ದೂತರನ್ನು ಕಳುಹಿಸಿ, [31]"ಇಗೋ,
ಎಬೆದನ ಮಗನಾದ ಗಾಳನೂ ಅವನ ಬಂಧುಗಳೂ ಇಲ್ಲಿಗೆ ಬಂದು ಶೆಕೆಮಿನವರೆಲ್ಲರನ್ನೂ ನಿನಗೆ
ವಿರೋಧವಾಗಿ ಹುರಿದುಬಿಂಸುತ್ತಿದ್ದಾರೆ. [32]ಆದುದರಿಂದ ನೀನು ಈ ರಾತ್ರಿಯಲ್ಲೇ ಸೈನ್ಯವನ್ನು ತೆಗೆದುಕೊಂಡು
ಬಂದು ಹೊಲಗಳಲ್ಲಿ ಹೊಂಚುಹಾಕಿಕೊಂಡಿರು. [33]ಸೂರ್ಯನು ಉದಯಿಸುತ್ತಲೇ ಎದ್ದು ಪಟ್ಟಣದ ಮೇಲೆ
ಬೀಳು; ಅವನೂ ಅವನ ಜೊತೆಯಲ್ಲಿರುವವರೂ ನಿನಗೆ ವಿರೋಧವಾಗಿ ಹೊರಟು ಬಂದಾಗ ನಿನಗೆ
ಅನುಕೂಲ ತೋರಿದ ಹಾಗೆ ಮಾಡು," ಎಂದು ಹೇಳಿಸಿದನು.

34 ಅಬೀಮೆಲೆಕನೂ ಅವನ ಜನರೂ ರಾತ್ರಿಯಲ್ಲೇ ಹೊರಟು ಬಂದು ನಾಲ್ಕು ಗುಂಪಾಗಿ
ಶೆಕೆಮಿನವರನ್ನು ಹೊಂಚಿ ಕಾಯುತ್ತಿದ್ದರು. [35]ಎಬೆದನ ಮಗನಾದ ಗಾಳನು ಹೊರಗೆ ಹೋಗಿ ಊರ
ಬಾಗಿಲಲ್ಲಿ ನಿಂತುಕೊಂಡಾಗ ಅಬೀಮೆಲೆಕನೂ ಅವನ ಜನರೂ ತಾವು ಹೊಂಚಿ ನೋಡುತ್ತಿದ್ದ ಸ್ಥಳದಿಂದ
ಎದ್ದು ಬಂದರು. [36]ಗಾಳನು ಅವರನ್ನು ಕಂಡು ಜೆಬುಲನಿಗೆ, "ಇಗೋ, ಬೆಟ್ಟದ ಮೇಲಿನಿಂದ ಜನರು
ಬರುತ್ತಿದ್ದಾರೆ," ಎಂದು ಹೇಳಲು ಜೆಬುಲನು ಅವನಿಗೆ, "ನೀನು ಬೆಟ್ಟದ ನೆರಳನ್ನು ನೋಡಿ ಜನರೆಂದು
ಭಾವಿಸುತ್ತೀ," ಎಂದನು. ಅವನು ಪುನಃ [37]"ನೋಡು ದೇಶನಾಭಿಗಿರಿಯಿಂದ ಜನರು ಬರುತ್ತಿದ್ದಾರೆ;
ಕಣಿಹೇಳುವವರ ಮರದ ಮಾರ್ಗವಾಗಿ ಇನ್ನೊಂದು ಗುಂಪು ಬರುತ್ತಿದೆ," ಎಂದನು. [38]ಆಗ ಜೆಬುಲನು
ಅವನಿಗೆ, "ಈಗ ನಿನ್ನ ಮಾತೆಲ್ಲಿ? ಅಬೀಮೆಲೆಕನು ಎಷ್ಟರವನು? ನಾವು ಅವನಿಗೆ ಏಕೆ ಸೇವೆಮಾಡಬೇಕು
ಎಂದು ಕೊಚ್ಚಿಕೊಂಡಿಯಲ್ಲವೆ? ಅವರು ನೀನು ತಿರಸ್ಕರಿಸಿದ ಜನರಲ್ಲವೇ? ಹಾಗಾದರೇ ಹೋಗಿ
ಅವರೊಡನೆ ಯುದ್ಧಮಾಡು, ನೋಡೋಣ," ಎಂದು ಹೇಳಿದನು. [39]ಗಾಳನು ಶೆಕೆಮಿನವರ ನಾಯಕನಾಗಿ
ಹೊರಟು ಅಬೀಮೆಲೆಕನೊಡನೆ ಕಾದಾಡಿದನು. [40]ಆದರೆ ಅಬೀಮೆಲೆಕನಿಗೆ ಬೆನ್ನುತೋರಿಸಿ ಓಡಿ
ಹೋಗಬೇಕಾಯಿತು. ಅವನು ಇವನನ್ನು ಹಿಂದಟ್ಟಿದನು. ಊರಬಾಗಿಲಿನವರೆಗೆ ಅನೇಕ ಮಂದಿ ಹತರಾಗಿ
ಬಿದ್ದರು. [41]ಅನಂತರ ಅಬೀಮೆಲೆಕನು ಹೋಗಿ ಅರೂಮದಲ್ಲಿ ವಾಸಿಸಿದನು. ಇತ್ತ ಜೆಬುಲನು ಗಾಳನನ್ನೂ
ಅವನ ಬಂಧುಗಳನ್ನೂ ಶೆಕೆಮಿನಿಂದ ಅಟ್ಟಿಬಿಟ್ಟನು.

42 ಮಾರನೆಯದಿನ ಜನರು ಬೈಲಿಗೆ ಹೊರಟು ಬಂದರು; [43]ಇದು ಅಬೀಮೆಲೆಕನಿಗೆ
ಗೊತ್ತಿದ್ದುದರಿಂದ ಅವನು ತನ್ನ ಜನರನ್ನು ಮೂರು ಗುಂಪುಮಾಡಿ ಅವರನ್ನು ತೆಗೆದುಕೊಂಡು ಬಂದು
ಹೊಲಗಳಲ್ಲಿ ಹೊಂಚುಹಾಕುತ್ತಿದ್ದನು. ಜನರು ಪಟ್ಟಣದಿಂದ ಹೊರಟು ಬರುವುದನ್ನು ಇವನು ಕಾಣುತ್ತಲೆ
ಅಲ್ಲಿಂದ ಎದ್ದು ಅವರ ಮೇಲೆ ದಾಳಿ ಮಾಡಿದನು. [44]ಅಬೀಮೆಲೆಕನೂ ಅವನ ಸಂಗಡ ಇದ್ದ ಗುಂಪಿನವರೂ
ಓಡಿಬಂದು ಊರಬಾಗಿಲಲ್ಲಿ ನಿಂತರು; ಉಳಿದ ಎರಡು ಗುಂಪಿನವರು ಬೈಲಿನಲ್ಲಿದ್ದ ಶೆಕೆಮಿನವರ ಮೇಲೆ
ಬಿದ್ದು ಅವರನ್ನು ಹತಮಾಡಿದರು. [45]ಅಬೀಮೆಲೆಕನು ಆ ದಿನವೆಲ್ಲಾ ಯುದ್ಧಮಾಡಿ ಪಟ್ಟಣವನ್ನು ಸ್ವಾಧೀನ
ಮಾಡಿಕೊಂಡು ಅದರ ಜನರನ್ನೆಲ್ಲಾ ಸದೆಬಡಿದು ಊರನ್ನು ಕೆಡವಿ ಅಲ್ಲಿ ಉಪ್ಪನ್ನು ಎರಚಿಬಿಟ್ಟನು.
[46]ಶೆಕೆಮಿನ ಕೋಟೆಯವರು ಇದನ್ನು ಕೇಳಿ ಏಲ್ ಬೆರೀತ್ ಎಂಬ ದೇವರ ಗುಡಿಯ ನೆಲಮನೆಯಲ್ಲಿ
ಅಡಗಿಕೊಂಡರು. [47]ಕೋಟೆಯವರೆಲ್ಲರೂ ಅಲ್ಲಿ ಅಡಗಿಕೊಂಡಿದ್ದಾರೆಂಬುದು ಅಬೀಮೆಲೆಕನಿಗೆ ಗೊತ್ತಾದಾಗ
ಅವನು ಕೊಡಲಿಯನ್ನು ತೆಗೆದುಕೊಂಡು ತನ್ನ ಜನರೆಲ್ಲರೊಡನೆ ಚಲ್ಮೋನ್ ಗುಡ್ಡವನ್ನೇರಿದನು.
[48]ತನ್ನವರಿಗೆ, "ನಾನು ಮಾಡುವಂತೆಯೇ ನೀವೂ ತೀವ್ರವಾಗಿ ಮಾಡಿರಿ," ಎಂದು ಹೇಳಿ ತಾನು ಒಂದು
ಮರದ ಕೊಂಬೆಯನ್ನು ಕಡಿದು ಹೆಗಲ ಮೇಲೆ ಹೊತ್ತುಕೊಂಡನು. [49]ಅವರೂ ಅದರಂತೆಯೇ ಮಾಡಿದರು.
ಅವನ ಹಿಂದೆ ಹೋಗಿ ಆ ಕೊಂಬೆಗಳನ್ನು ಅವರಿದ್ದ ನೆಲ ಮನೆಯ ಸುತ್ತಲೂ ಹಾಕಿ ಬೆಂಕಿಹೊತ್ತಿಸಿ ಅದನ್ನು
ಸುಟ್ಟುಬಿಟ್ಟರು. ಹೀಗೆ ಶೆಕೆಮ್‍ಕೋಟೆಯವರೆಲ್ಲರೂ ಸತ್ತರು. ಸ್ತ್ರೀಪುರುಷರೆಲ್ಲಾ ಸೇರಿ ಅವರು ಸುಮಾರು
ಸಾವಿರ ಜನರಿದ್ದರು.

50 ಅನಂತರ ಅಬೀಮೆಲೆಕನು ತೇಬೇಚಿಗೆ ಹೋಗಿ, ಮುತ್ತಿಗೆ ಹಾಕಿ ಅದನ್ನು ಹಿಡಿದನು. [51]ಆ
ಊರಿನ ಮಧ್ಯದಲ್ಲಿ ಒಂದು ಭದ್ರವಾದ ಗೋಪುರವಿತ್ತು; ಊರಿನ ಸ್ತ್ರೀಪುರುಷರೆಲ್ಲರೂ ಓಡಿಹೋಗಿ
ಅದರೊಳಗೆ ಹೊಕ್ಕು ಬಾಗಿಲನ್ನು ಮುಚ್ಚಿಕೊಂಡು ಮೇಲೆ ಹತ್ತಿದರು. [52]ಅಬೀಮೆಲೆಕನು ಅಲ್ಲಿಗೆ ಬಂದು
ಯುದ್ಧಮಾಡುತ್ತಾ ಗೋಪುರದ ಬಾಗಿಲಿಗೆ ಬೆಂಕಿ ಹೊತ್ತಿಸಬೇಕೆಂದು ಅದರ ಸಮೀಪಕ್ಕೆ ಹೋದನು. [53]ಒಬ್ಬ

ಸ್ತ್ರೀ ಮೇಲಿನಿಂದ ಒಂದು ಬೀಸುವ ಕಲ್ಲನ್ನು ಬೀಳಿಸಿ ಅವನ ತಲೆಬುರುಡೆಯನ್ನು ಒಡೆದುಬಿಟ್ಟಳು. 54ಅವನು ಕೂಡಲೆ ತನ್ನ ಆಯುಧವಾಹಕನನ್ನು ಕರೆದು ಅವನಿಗೆ, "ಕತ್ತಿಯನ್ನು ಹಿರಿದು ನನ್ನನ್ನು ಕೊಲ್ಲು; ಇಲ್ಲವಾದರೆ ಹೆಂಗಸಿನ ಕೈಯಿಂದ ಸತ್ತನೆಂದು ಹೇಳಾರು," ಎನ್ನಲು ಆ ಪ್ರಾಯಸ್ಥನು ಅವನನ್ನು ತಿವಿದು ಕೊಂದುಹಾಕಿದನು. 55ಅಬೀಮೆಲೆಕನು ಸತ್ತುಹೋದದ್ದನ್ನು ಕಂಡು ಇಸ್ರಯೇಲರು ತಮ್ಮ ತಮ್ಮ ಸ್ಥಳಗಳಿಗೆ ಹಿಂದಿರುಗಿದರು.

56 ಎಪ್ಪತ್ತು ಮಂದಿ ಸಹೋದರರನ್ನು ಕೊಂದುಹಾಕಿ ತನ್ನ ತಂದೆಗೆ ದ್ರೋಹಿಯಾದ ಅಬೀಮೆಲೆಕನಿಗೆ ದೇವರು ಈ ರೀತಿಯಾಗಿ ಮುಯ್ಯಿತೀರಿಸಿದರು. 57ಶೆಕೆಮಿನವರಿಗಾದರೋ ಅವರ ದುಷ್ಟತ್ವವು ಅವರ ತಲೆಯ ಮೇಲೆಯೇ ಬರುವಂತೆ ಮಾಡಿದರು. ಹೀಗೆ ಯೆರುಬ್ಬಾಳನ ಮಗ ಯೋತಾಮನು ಇವರ ಬಗ್ಗೆ ನುಡಿದ ಶಾಪ ನೆರವೇರಿತು.

## ತೋಲಾ ಮತ್ತು ಯಾಯಿರ್

**10** ಅಬೀಮೆಲೆಕನ ತರುವಾಯ ಇಸ್ಸಾಕಾರ್ ಕುಲದ ಪೂವನ ಮಗನೂ ದೋದೋವಿನ ಮೊಮ್ಮಗನೂ ಆಗಿದ್ದ ತೋಲನು ಎದ್ದು ಇಸ್ರಯೇಲರನ್ನು ಕಾಪಾಡಿದನು. ಅವನು ಎಫ್ರಯಿಮ್ ಮಲೆನಾಡಿನ ಶಾಮೀರವೆಂಬ ಊರಲ್ಲಿ ವಾಸವಾಗಿದ್ದನು. 2ಇಪ್ಪತ್ತಮೂರು ವರ್ಷಗಳವರೆಗೆ ಇಸ್ರಯೇಲರನ್ನು ಪಾಲಿಸಿದ ನಂತರ ಸತ್ತು ಸಮಾಧಿಯಾದನು. 3ಅವನ ತರುವಾಯ ಗಿಲ್ಯಾದ್ಯನಾದ ಯಾಯೀರನು ಎದ್ದು ಇಸ್ರಯೇಲರನ್ನು ಇಪ್ಪತ್ತೆರಡು ವರ್ಷಪಾಲಿಸಿದನು. 4ಇವನಿಗೆ ಮೂವತ್ತು ಮಂದಿ ಮಕ್ಕಳಿದ್ದರು. ಇವರಿಗೆ ಮೂವತ್ತು ಸವಾರಿ ಕತ್ತೆಗಳೂ ಗಿಲ್ಯಾದ್ ದೇಶದಲ್ಲಿ ಮೂವತ್ತು ಊರುಗಳೂ ಇದ್ದವು. ಅವುಗಳಿಗೆ ಇಂದಿನವರೆಗೂ ಯಾಯೀರನ ಗ್ರಾಮಗಳೆಂದು ಹೆಸರಿದೆ. 5ಯಾಯೀರನು ಸತ್ತು ಕಾಮೋನಿನಲ್ಲಿ ಸಮಾಧಿಯಾದನು.

## ಅಮ್ಮೋನಿಯರ ಕಾಟ

6 ಇಸ್ರಯೇಲರು ಇನ್ನೊಮ್ಮೆ ಸರ್ವೇಶ್ವರನ ದೃಷ್ಟಿಯಲ್ಲಿ ದ್ರೋಹಿಗಳಾದರು; ಅವರು ಸರ್ವೇಶ್ವರನನ್ನು ಬಿಟ್ಟು ಬಾಳ್, ಅಷ್ಟೋರೆತ್ ಎಂಬ ದೇವತೆಗಳನ್ನು ಮತ್ತು ಅರಾಮ್ಯರು, ಚೀದೋನ್ಯರು, ಮೋವಾಬ್ಯರು, ಅಮ್ಮೋನಿಯರು, ಫಿಲಿಷ್ಟಿಯರು ಇವರ ದೇವತೆಗಳನ್ನೂ ಪೂಜಿಸತೊಡಗಿದರು. ಸರ್ವೇಶ್ವರನನ್ನಾದರೋ ಬಿಟ್ಟೇಬಿಟ್ಟರು. 7ಆದುದರಿಂದ ಸರ್ವೇಶ್ವರ ಇಸ್ರಯೇಲರ ಮೇಲೆ ಕೋಪಗೊಂಡು ಅವರನ್ನು ಫಿಲಿಷ್ಟಿಯರ ಮತ್ತು ಅಮ್ಮೋನಿಯರ ಕೈಗೆ ಒಪ್ಪಿಸಿದರು. 8ಇವರು ಆ ವರ್ಷದಿಂದ ಹದಿನೆಂಟು ವರ್ಷಗಳವರೆಗೆ ಜೋರ್ಡನಿನ ಆಚೆ ಗಿಲ್ಯಾದಿನಲ್ಲಿದ್ದ ಇಸ್ರಯೇಲರನ್ನು ಬಹಳವಾಗಿ ಪೀಡಿಸುತ್ತಾ ಅವರ ಮೇಲೆ ದಬ್ಬಾಳಿಕೆ ನಡೆಸಿದರು. ಈ ನಾಡು ಮೊದಲು ಅಮೋರಿಯರದಾಗಿತ್ತು. 9ಇದಲ್ಲದೆ ಅಮ್ಮೋನಿಯರು ಜೋರ್ಡನ್ ನದಿಯನ್ನು ದಾಟಿ ಯೆಹೂದ, ಬೆನ್ಯಾಮೀನ್, ಎಫ್ರಯಿಮ್ ಕುಲಗಳೊಡನೆ ಯುದ್ಧಮಾಡಿದ್ದರಿಂದ ಇಸ್ರಯೇಲರು ಬಹಳ ಕಷ್ಟಕ್ಕೀಡಾದರು.

10 ಆಗ ಅವರು ಸರ್ವೇಶ್ವರನಿಗೆ, "ನಾವು ನಮ್ಮ ದೇವರಾದ ನಿಮ್ಮನ್ನು ಬಿಟ್ಟು ಬಾಳನ ಪ್ರತಿಮೆಗಳನ್ನು ಪೂಜಿಸಿ ನಿಮಗೆ ವಿರುದ್ಧವಾಗಿ ಪಾಪಮಾಡಿದ್ದೇವೆ," ಎಂದು ಮೊರೆಯಿಟ್ಟರು. 11ಸರ್ವೇಶ್ವರ ಅವರಿಗೆ, "ಈಜಿಪ್ಟ್, ಅಮೋರಿಯ, ಅಮ್ಮೋನಿಯ, ಫಿಲಿಷ್ಟಿಯ, ಚೀದೋನ್ಯ, ಅಮಾಲೇಕ್ಯ, ಮಾವೋನ್ಯ 12ಇವೇ ಮೊದಲಾದ ಜನಾಂಗಗಳು ನಿಮ್ಮನ್ನು ಪೀಡಿಸಿದಾಗ ನೀವು ನನಗೆ ಮೊರೆಯಿಟ್ಟಿರಿ; ನಾನು ಅವುಗಳಿಂದ ನಿಮ್ಮನ್ನು ಬಿಡಿಸಿದೆ. 13ಆದರೂ ನೀವು ಮತ್ತೆ ನನ್ನನ್ನು ಬಿಟ್ಟು ಅನ್ಯದೇವತೆಗಳನ್ನು ಪೂಜಿಸುತ್ತಾ ಬಂದಿರಿ; ಆದುದರಿಂದ ನಾನು ಇನ್ನು ಮುಂದೆ ನಿಮ್ಮನ್ನು ರಕ್ಷಿಸುವುದೇ ಇಲ್ಲ. 14ಹೋಗಿ, ನೀವು ಆರಿಸಿಕೊಂಡ ದೇವತೆಗಳಿಗೆ ಮೊರೆಯಿಡಿ; ಅವು ನಿಮ್ಮ ಈ ಇಕ್ಕಟ್ಟಿನಲ್ಲಿ ಸಹಾಯ ಮಾಡಲಿ," ಎಂದರು. 15ಇಸ್ರಯೇಲರು ಮರಳಿ ಸರ್ವೇಶ್ವರನಿಗೆ, "ಪಾಪ ಮಾಡಿದ್ದೇವೆ; ನಿಮಗೆ ಸರಿ ತೋರಿದಂತೆ ನಮಗೆ ಮಾಡಿ; ಆದರೆ ಈ ಸಾರಿ ಹೇಗೂ ನಮ್ಮನ್ನು ರಕ್ಷಿಸಬೇಕು," ಎಂದು ಮೊರೆಯಿಟ್ಟರು. ಅನ್ಯದೇವತೆಗಳನ್ನು ಹೊರಗೆ

ಹಾಕಿ ಸರ್ವೇಶ್ವರನನ್ನು ಪೂಜಿಸತೊಡಗಿದರು. 16ಆಗ ಇಸ್ರಯೇಲರ ಸಂಕಟದ ನಿಮಿತ್ತ ಸರ್ವೇಶ್ವರ
ಬಹಳವಾಗಿ ನೊಂದುಕೊಂಡರು.

17 ಅಮ್ಮೋನಿಯರು ದಂಡೆತ್ತಿ ಬಂದು ಗಿಲ್ಯಾದಿನಲ್ಲಿ ಇಳಿದುಕೊಂಡರು. ಇಸ್ರಯೇಲರು ಕೂಡಿ
ಮಿಚ್ಪೆಯಲ್ಲಿ ಪಾಳೆಯಮಾಡಿಕೊಂಡರು. 18ಗಿಲ್ಯಾದಿನ ಜನರು ಹಾಗು ಅಧಿಪತಿಗಳು, "ನಮ್ಮಲ್ಲಿ
ಅಮ್ಮೋನಿಯರೊಡನೆ ಯುದ್ಧಕ್ಕೆ ಕೈಹಾಕಬಲ್ಲವನಾರು? ಅಂಥವನನ್ನು ಗಿಲ್ಯಾದಿನವರೆಲ್ಲರ ಮೇಲೆ
ನಾಯಕನನ್ನಾಗಿ ಮಾಡಬಹುದಲ್ಲಾ" ಎಂದು ತಮ್ಮತಮ್ಮೊಳಗೆ ಮಾತಾಡಿಕೊಂಡರು.

### ಅಮ್ಮೋನಿಯರನ್ನು ಸೋಲಿಸಿದ ಯೆಪ್ತಾಹನು

**11** ಗಿಲ್ಯಾದ್ಯನಾದ ಯೆಪ್ತಾಹನು ಒಬ್ಬ ಮಹಾಪರಾಕ್ರಮಿ. ಈತ ಗಿಲ್ಯಾದನಿಗೆ ಒಬ್ಬ ಉಪಪತ್ನಿಯಲ್ಲಿ
ಹುಟ್ಟಿದವನು. 2ಗಿಲ್ಯಾದನಿಗೆ ಹೆಂಡತಿಯಲ್ಲೂ ಮಕ್ಕಳು ಹುಟ್ಟಿದರು. ಇವರು ದೊಡ್ಡವರಾದ ಮೇಲೆ
ಯೆಪ್ತಾಹನಿಗೆ, "ನೀನು ಪರಸ್ತ್ರೀಯಿಂದ ಹುಟ್ಟಿದವನು; ಆದುದರಿಂದ ನಿನಗೆ ನಮ್ಮ ತಂದೆಯ ಮನೆಯಲ್ಲಿ
ಬಾಧ್ಯತೆ ಸಿಕ್ಕಲಾರದು," ಎಂದು ಹೇಳಿ ಅವನನ್ನು ಹೊರಗೆ ಹಾಕಿದರು. 3ಅವನು ತನ್ನ ಸಹೋದರರನ್ನು
ಬಿಟ್ಟು ಟೋಬ್‍ದೇಶಕ್ಕೆ ಹೋದನು. ಅಲ್ಲಿನ ಪುಂಡ ಪೋಕರಿಗಳು ಕೂಡಿ ಅವನನ್ನು ಹಿಂಬಾಲಿಸಿದರು.

4 ಇಸ್ರಯೇಲರಿಗೆ ವಿರೋಧವಾಗಿ ಬಂದ ಅಮ್ಮೋನಿಯರು ಸ್ವಲ್ಪದಿನಗಳಾದ ಮೇಲೆ ಯುದ್ಧವನ್ನು
ಪ್ರಾರಂಭಿಸಿದರು. 5ಆಗ ಗಿಲ್ಯಾದಿನ ಹಿರಿಯರು ಯೆಪ್ತಾಹನನ್ನು ಟೋಬ್ ದೇಶದಿಂದ ಕರೆದುಕೊಂಡು
ಬರುವುದಕ್ಕಾಗಿ ಅಲ್ಲಿಗೆ ಹೋದರು. 6ಅವನಿಗೆ, "ನಾವು ಅಮ್ಮೋನಿಯರೊಡನೆ ಯುದ್ಧಮಾಡುವ ಹಾಗೆ
ನೀನು ಬಂದು ನಮ್ಮ ನಾಯಕನಾಗು," ಎಂದು ಬೇಡಿಕೊಂಡರು. 7ಅವನು ಅವರಿಗೆ, "ನನ್ನನ್ನು ಹಗೆಮಾಡಿ
ನನ್ನ ತಂದೆಯ ಮನೆಯಿಂದ ಅಟ್ಟಿಬಿಟ್ಟವರು ನೀವೇ ಅಲ್ಲವೇ? ನಿಮಗೆ ಕಷ್ಟಬಂದಾಗ ನನ್ನ ಬಳಿಗೆ ಏಕೆ
ಬಂದಿರಿ?" ಎಂದನು. 8ಅವರು, "ಆದುದರಿಂದಲೇ ಈಗ ಪುನಃ ನಿನ್ನ ಬಳಿಗೆ ಬಂದಿದ್ದೇವೆ; ನಮ್ಮ ಸಂಗಡ
ಬಂದು ಅಮ್ಮೋನಿಯರೊಡನೆ ಯುದ್ಧಮಾಡುವಿಯಾದರೆ ಗಿಲ್ಯಾದಿನವರಿಗೆಲ್ಲಾ ನೀನೆ ಶಿರಸ್ಸಾಗಿರುವೆ,"
ಎಂದು ಹೇಳಿದರು. 9ಆಗ ಯೆಪ್ತಾಹನು ಅವರಿಗೆ, "ನೀವು ನನ್ನನ್ನು ಅಮ್ಮೋನಿಯರೊಡನೆ ಯುದ್ಧ
ಮಾಡುವುದಕ್ಕಾಗಿ ಕರೆದುಕೊಂಡು ಹೋಗುವುದಾದರೆ ಸರ್ವೇಶ್ವರ ಅವರನ್ನು ನನ್ನ ಕೈಗೆ ಒಪ್ಪಿಸಿಕೊಟ್ಟರೆ
ನಿಜವಾಗಿ ನೀವು ನನ್ನನ್ನು ಅಧಿಪತಿಯನ್ನಾಗಿ ಮಾಡುವಿರೋ?" ಎಂದು ಕೇಳಿದನು. 10ಅವರು ಅವನಿಗೆ,
"ಹಾಗೆಯೇ ಮಾಡುತ್ತೇವೆ; ಉಭಯತ್ರರ ಮಾತುಗಳಿಗೆ ಸರ್ವೇಶ್ವರನೇ ಸಾಕ್ಷಿ," ಎಂದು ಉತ್ತರಕೊಟ್ಟರು.
11ಆಗ ಯೆಪ್ತಾಹನು ಗಿಲ್ಯಾದಿನ ಹಿರಿಯರ ಸಂಗಡ ಹೋದನು; ಜನರು ಅವನನ್ನು ಅಧಿಪತಿಯನ್ನಾಗಿಯೂ
ನಾಯಕನನ್ನಾಗಿಯೂ ನೇಮಿಸಿದರು. ಯೆಪ್ತಾಹನು ತನ್ನ ವಿಷಯಗಳನ್ನೆಲ್ಲಾ ಮಿಚ್ಪೆಯಲ್ಲಿ ಸರ್ವೇಶ್ವರನ
ಮುಂದೆ ಅರಿಕೆ ಮಾಡಿದನು.

12 ಯೆಪ್ತಾಹನು ಅಮ್ಮೋನಿಯರ ಅರಸನ ಬಳಿಗೆ ದೂತರನ್ನು ಕಳುಹಿಸಿ, "ನನಗೂ ನಿನಗೂ
ಏನಿದೆ? ನೀನು ನನ್ನ ದೇಶಕ್ಕೆ ವಿರೋಧವಾಗಿ ಯುದ್ಧ ಮಾಡುವುದಕ್ಕೇನು ಕಾರಣ?" ಎಂದು ಕೇಳಿದನು.
13ಆ ಅರಸನು ದೂತರಿಗೆ, "ಇಸ್ರಯೇಲರು ಈಜಿಪ್ಟಿನಿಂದ ಬಂದಾಗ ಅರ್ನೋನಿನಿಂದ ಯಬ್ಬೋಕ್,
ಜೋರ್ಡನ್ ನದಿಗಳವರೆಗೂ ಇದ್ದ ನನ್ನ ದೇಶವನ್ನು ಕಸಿದುಕೊಂಡರಲ್ಲವೆ? ನೀನು ಈಗ ಅದನ್ನು
ಸಮಾಧಾನದಿಂದ ಹಿಂದಕ್ಕೆ ಕೊಡು," ಎಂದು ಹೇಳಿ ಕಳುಹಿಸಿದನು. 14ಯೆಪ್ತಾಹನು ಇನ್ನೊಂದು ಸಾರಿ
ಅಮ್ಮೋನಿಯರ ಅರಸನ ಬಳಿಗೆ ದೂತರನ್ನು ಕಳುಹಿಸಿ, ಅವನಿಗೆ, 15"ಯೆಪ್ತಾಹನಾದ ನನ್ನ ಮಾತನ್ನು ಕೇಳು;
ಇಸ್ರಯೇಲರು ಮೋವಾಬ್ಯರ ಮತ್ತು ಅಮ್ಮೋನಿಯರ ದೇಶವನ್ನು ತೆಗೆದುಕೊಳ್ಳಲೇ ಇಲ್ಲ. 16ಅವರು ಈಜಿಪ್ಟರ
ನಾಡನ್ನು ಬಿಟ್ಟ ನಂತರ ಮರುಭೂಮಿಯಲ್ಲಿ ಸಂಚರಿಸಿ ಕೆಂಪುಸಮುದ್ರಕ್ಕೂ ಅನಂತರ ಕಾದೇಶಿಗೂ
ಬಂದರು. 17ಅವರು ಅಲ್ಲಿಂದ ಎದೋಮ್ಯರ ಅರಸನ ಬಳಿಗೆ ದೂತರನ್ನು ಕಳುಹಿಸಿ, 'ನಿನ್ನ ದೇಶವನ್ನು
ದಾಟಿಹೋಗುವುದಕ್ಕೆ ಅಪ್ಪಣೆಯಾಗಬೇಕು,' ಎಂದು ಬೇಡಿಕೊಳ್ಳಲು ಅವನು ಒಪ್ಪಿಕೊಳ್ಳಲಿಲ್ಲ. ತರುವಾಯ
ಮೋವಾಬ್ಯರ ಅರಸನ ಬಳಿಗೆ ದೂತರನ್ನು ಕಳುಹಿಸಲು ಅವನು ಒಪ್ಪಿಕೊಳ್ಳಲಿಲ್ಲ; ಆದುದರಿಂದ ಅವರು
ಕಾದೇಶಿನಲ್ಲಿಯೇ ನಿಂತರು. 18ಅನಂತರ ಅವರು ಮರುಭೂಮಿಯಲ್ಲಿ ಪ್ರಯಾಣ ಮಾಡಿ ಎದೋಮ್,

ಮೋವಾಬ್ ದೇಶಗಳನ್ನು ಸುತ್ತಿಕೊಂಡು ಮೋವಾಬ್ ದೇಶದ ಪೂರ್ವ ದಿಕ್ಕಿಗೆ ಬಂದು ಅದರ
ಮೇರೆಯಾಗಿರುವ ಅರ್ನೋನ್ ನದಿಯ ಆಚೆಯಲ್ಲಿ ಇಳಿದುಕೊಂಡರು; ಮೋವಾಬ್ಯರ ಮೇರೆಯೊಳಗೆ
ಕಾಲು ಇಡಲಿಲ್ಲ. 19ಬಳಿಕ ಹೆಷ್ಬೋನನ್ನು ರಾಜಧಾನಿ ಮಾಡಿಕೊಂಡಿದ್ದ ಅಮೋರಿಯರ ಅರಸನಾದ
ಸೀಹೋನನ ಬಳಿಗೆ ಅವರು ದೂತರನ್ನು ಕಳುಹಿಸಿ, "ನಿನ್ನ ದೇಶವನ್ನು ದಾಟಿ ನಮ್ಮ ಸ್ಥಳಕ್ಕೆ ಹೋಗುವುದಕ್ಕೆ
ಅಪ್ಪಣೆ ಕೊಡು," ಎಂದು ಅವನನ್ನು ಬೇಡಿಕೊಂಡರು. 20ಆದರೆ ಸೀಹೋನನು ಅವರನ್ನು ನಂಬದೆ ತನ್ನ
ಸೀಮೆಯನ್ನು ದಾಟಿ ಹೋಗುವುದಕ್ಕೆ ಅಪ್ಪಣೆಕೊಡದೆ ತನ್ನ ಜನರನ್ನು ಕೂಡಿಸಿಕೊಂಡು ಯಹಚಕ್ಕೆ ಬಂದು
ಅವರೊಡನೆ ಯುದ್ಧ ಮಾಡಿದನು. 21ಇಸ್ರಯೇಲರ ದೇವರಾದ ಸರ್ವೇಶ್ವರ ಸೀಹೋನನನ್ನೂ ಅವನ
ಜನರೆಲ್ಲರನ್ನೂ ಇಸ್ರಯೇಲರ ಕೈಗೆ ಒಪ್ಪಿಸಿದ್ದರಿಂದ ಅವರು ಈ ದೇಶದ ನಿವಾಸಿಗಳಾದ ಅಮೋರಿಯರನ್ನು
ಹೊಡೆದು ಅವರ ದೇಶವನ್ನೆಲ್ಲಾ ಸ್ವಾಧೀನಪಡಿಸಿಕೊಂಡರು. 22ಹೀಗೆ ಇಸ್ರಯೇಲರು ಅರ್ನೋನಿನಿಂದ
ಯಬ್ಬೋಕಿನವರೆಗೂ ಮರುಭೂಮಿಯಿಂದ ಜೋರ್ಡನಿನವರೆಗೂ ಇದ್ದ ಅಮೋರಿಯರ ಪ್ರಾಂತ್ಯವನ್ನೆಲ್ಲಾ
ವಶಮಾಡಿಕೊಂಡರು.

23 "ಇಸ್ರಯೇಲರ ದೇವರಾದ ಸರ್ವೇಶ್ವರ ಈ ದೇಶವನ್ನು ಅಮೋರಿಯರಿಂದ ತೆಗೆದು ತನ್ನ
ಪ್ರಜೆಗಳಾದ ಇಸ್ರಯೇಲರಿಗೆ ಕೊಟ್ಟ ಮೇಲೆ ನೀನು ಅದನ್ನು ತೆಗೆದುಕೊಳ್ಳುವುದು ಹೇಗೆ? 24ನಿನ್ನ ದೇವನಾದ
ಕೆಮೋಷನು ನಿನಗೆ ಕೊಡುವ ದೇಶಗಳನ್ನು ನೀನು ಸ್ವತಂತ್ರಿಸಿಕೊಳ್ಳುವುದಿಲ್ಲವೇ? ಹಾಗೆಯೇ ನಮ್ಮ
ದೇವರಾದ ಸರ್ವೇಶ್ವರ ನಮಗೆ ಒಪ್ಪಿಸಿಕೊಡುವುದನ್ನು ನಾವು ಸ್ವತಂತ್ರಿಸಿಕೊಳ್ಳುವುದು ನ್ಯಾಯವಾಗಿದೆ.
25ಚಿಪ್ಪೋರನ ಮಗನೂ ಮೋವಾಬ್ಯರ ಅರಸನೂ ಆದ ಬಾಲಾಕನಿಗಿಂತ ನೀನು ಹೆಚ್ಚಿನವನೇ? ಅವನು
ಇಸ್ರಯೇಲರೊಡನೆ ಎಂದಾದರೂ ವಿವಾದಮಾಡಿದನೇ? ಅಥವಾ ಅವರಿಗೆ ವಿರೋಧವಾಗಿ ಯುದ್ಧಕ್ಕೆ
ಬಂದನೇ? 26ಇಸ್ರಯೇಲರು ಮುನ್ನೂರು ವರ್ಷಗಳಿಂದ ಹೆಷ್ಬೋನ್, ಅರೋಯೇರ್ ಎಂಬ
ಪಟ್ಟಣಗಳಲ್ಲೂ ಅವುಗಳ ಗ್ರಾಮಗಳಲ್ಲೂ ಅರ್ನೋನ್ ತೀರದ ಎಲ್ಲಾ ಪಟ್ಟಣಗಳಲ್ಲೂ ವಾಸಿಸುತ್ತಿದ್ದಾರಲ್ಲವೆ?
ಇಷ್ಟು ದಿವಸಗಳವರೆಗೆ ನೀನು ಅದನ್ನು ಬಿಡಿಸಿಕೊಳ್ಳದೆ ಇದ್ದದ್ದೇಕೆ? 27ನಾನು ನಿನಗೆ ಯಾವ
ಅನ್ಯಾಯವನ್ನೂ ಮಾಡಲಿಲ್ಲ. ನೀನು ಈಗ ನನಗೆ ವಿರೋಧವಾಗಿ ಯುದ್ಧಕ್ಕೆ ಬಂದದ್ದರಿಂದ ನೀನೇ
ಅನ್ಯಾಯ ಮಾಡಿದ ಹಾಗಾಯಿತು. ನ್ಯಾಯಸ್ಥಾಪಕರಾದ ಸರ್ವೇಶ್ವರಸ್ವಾಮಿಯೇ ಈ ಹೊತ್ತು
ಇಸ್ರಯೇಲರಿಗೂ ಅಮ್ಮೋನಿಯರಿಗೂ ಮಧ್ಯೆ ನ್ಯಾಯ ತೀರಿಸಲಿ," ಎಂದು ಹೇಳಿಸಿದನು. 28ಆದರೆ
ಯೆಪ್ತಾಹನು ಹೇಳಿಕಳುಹಿಸಿದ ಮಾತುಗಳಿಗೆ ಅಮ್ಮೋನಿಯರ ಅರಸನು ಕಿವಿಗೊಡಲಿಲ್ಲ.

29 ಆಗ ಸರ್ವೇಶ್ವರನ ಆತ್ಮ ಯೆಪ್ತಾಹನ ಮೇಲೆ ಬಂದಿತು. ಅವನು ಗಿಲ್ಯಾದ್‍ಪ್ರಾಂತ್ಯ, ಮನಸ್ಸೆಯ
ನಾಡು, ಇವುಗಳಲ್ಲಿ ಸಂಚರಿಸಿ ಮತ್ತೆ ಗಿಲ್ಯಾದಿನ ಮಿಚ್ಪೆಗೆ ಬಂದು ಅಲ್ಲಿಂದ ಅಮ್ಮೋನಿಯರ ಮೇಲೆ ಯುದ್ಧಕ್ಕೆ
ಹೋದನು. 30ಇದಲ್ಲದೆ ಅವನು ಸರ್ವೇಶ್ವರಸ್ವಾಮಿಗೆ, "ತಾವು ಅಮ್ಮೋನಿಯರನ್ನು ನನ್ನ ಕೈಗೆ
ಒಪ್ಪಿಸುವುದಾದರೆ 31ನಾನು ಸುರಕ್ಷಿತವಾಗಿ ಹಿಂದಿರುಗುವಾಗ ನನ್ನ ಮನೆಯ ಬಾಗಿಲಿನಿಂದ ನನ್ನನ್ನು
ಎದುರುಗೊಳ್ಳಲು ಮೊದಲು ಬರುವಂಥ ಪ್ರಾಣಿ ತಮಗೆ ಮೀಸಲು ಎಂದೂ ಅದನ್ನು ತಮಗೆ
ದಹನಬಲಿದಾನ ಮಾಡುವೆನು" ಎಂದೂ ಹರಕೆಮಾಡಿದನು. 32ಯೆಪ್ತಾಹನು ನದಿಯನ್ನು ದಾಟಿ
ಅಮ್ಮೋನಿಯರಿಗೆ ವಿರುದ್ಧ ಯುದ್ಧಕ್ಕೆ ಹೋಗಲು ಅವರನ್ನು ಸರ್ವೇಶ್ವರ ಅವನ ಕೈಗೆ ಒಪ್ಪಿಸಿದರು. 33ಅವನು
ಅವರನ್ನು ಸೋಲಿಸಿ ಅರೋಯೇರಿನಿಂದ ಮಿನ್ನೀತಿನ ದಾರಿಯವರೆಗೂ ಅಬೇಲ್ ಕೆರಾಮೀಮಿನವರೆಗೂ
ಇಪ್ಪತ್ತು ಪಟ್ಟಣಗಳನ್ನು ಹಾಳು ಮಾಡಿದನು. ಹೀಗೆ ದೊಡ್ಡ ಜಯವಾಗಿ, ಅಮ್ಮೋನಿಯರು ಇಸ್ರಯೇಲರಿಗೆ
ಶರಣಾದರು.

## ಯೆಪ್ತಾಹನ ಮಗಳು

34 ಯೆಪ್ತಾಯನ ಮಿಚ್ಪೆಯಲ್ಲಿದ್ದ ತನ್ನ ಮನೆಯನ್ನು ಸಮೀಪಿಸಿದಾಗ ಅವನ ಮಗಳು ದಮ್ಮಡಿ
ಬಡಿಯುತ್ತಾ ನಾಟ್ಯವಾಡುತ್ತಾ ಅವನನ್ನು ಎದುರುಗೊಳ್ಳುವುದಕ್ಕಾಗಿ ಬಂದಳು. ಆಕೆ ಅವನ ಒಬ್ಬಳೇ ಮಗಳು.
ಆಕೆಯ ಹೊರತು ಅವನಿಗೆ ಬೇರೆ ಗಂಡುಹೆಣ್ಣು ಮಕ್ಕಳೇ ಇರಲಿಲ್ಲ. 35ಆಕೆಯನ್ನು ಕಾಣುತ್ತಲೆ ಅವನು
ದುಃಖತಾಳಲು ಆಗದೆ ಬಟ್ಟೆಯನ್ನು ಹರಿದುಕೊಂಡು, "ಅಯ್ಯೋ ನನ್ನ ಮಗಳೇ, ನೀನು ನನ್ನನ್ನು ಎಂಥಾ

ಯಾತನೆಗೆ ಈಡುಮಾಡಿದೆ; ನನಗೆ ಮಹಾ ಸಂಕಟವನ್ನುಂಟುಮಾಡಿದೆ! ನಾನು ಬಾಯಾರೆ ಸರ್ವೇಶ್ವರನಿಗೆ
ಹರಕೆಮಾಡಿದ್ದೇನೆ; ಅದಕ್ಕೆ ಹಿಂದೆಗೆಯಲಾಗದು," ಎಂದು ಕೂಗಿಕೊಂಡನು. 36ಆಕೆ ಅವನಿಗೆ, "ಅಪ್ಪಾ,
ನೀನು ಬಾಯಾರೆ ಸರ್ವೇಶ್ವರನಿಗೆ ಹರಕೆ ಮಾಡಿದ ಮೇಲೆ ಅವರು ನಿನ್ನ ಶತ್ರುಗಳಾದ ಅಮ್ಮೋನಿಯರಿಗೆ
ಮುಯ್ಯಿತೀರಿಸಿದ್ದಾರೆ. ಆದ್ದರಿಂದ ನಿನ್ನ ಬಾಯಿಂದ ಬಂದದ್ದನ್ನೇ ನೆರವೇರಿಸು," ಎಂದಳು. 37ಆಕೆ ಮನಃ
ತನ್ನ ತಂದೆಗೆ, "ನನ್ನ ಬಿನ್ನಹವನ್ನು ಆಲಿಸು; ಎರಡು ತಿಂಗಳುಗಳವರೆಗೆ ನನ್ನನ್ನು ಬಿಡು. ನಾನು ನನ್ನ
ಗೆಳತಿಯರೊಡನೆ ಗುಡ್ಡ ಪ್ರದೇಶಗಳಿಗೆ ಹೋಗಿ ನನ್ನ ಕನ್ಯಾವಸ್ಥೆಗಾಗಿ ಗೋಳಾಡುವೆನು," ಎಂದಳು. ಅವನು,
"ಎರಡು ತಿಂಗಳ ತನಕ ಹೋಗಿ ಬಾ," ಎಂದು ಹೇಳಿ ಕಳುಹಿಸಿದನು. 38ಆಕೆ ಸಖಿಯರ ಸಹಿತ ಗುಡ್ಡ
ಪ್ರದೇಶಗಳಿಗೆ ಹೋಗಿ ತನ್ನ ಕನ್ಯಾವಸ್ಥೆಗಾಗಿ ಗೋಳಾಡಿದಳು. 39ಎರಡು ತಿಂಗಳು ಕಳೆದ ನಂತರ ಆಕೆ ಮರಳಿ
ತಂದೆಯ ಹತ್ತಿರ ಬಂದಳು. ಅವನು ತನ್ನ ಹರಕೆಯನ್ನು ತೀರಿಸಿದನು. ಆಕೆ ಕನ್ಯೆಯಾಗಿಯೇ ಸತ್ತಳು.
40ಇಸ್ರಯೇಲರ ಹೆಣ್ಣು ಮಕ್ಕಳು ಪ್ರತಿ ವರ್ಷ ನಾಲ್ಕುದಿವಸ ಗಿಲ್ಯಾದ್ಯನಾದ ಯೆಪ್ತಾಹನ ಮಗಳ
ಸ್ಮರಣೆಮಾಡುತ್ತಾರೆ. ಅವರಲ್ಲಿ ಇದೊಂದು ಪದ್ಧತಿ.

## ಯೆಪ್ತಾಹನು ಮತ್ತು ಎಫ್ರಯಿಮ್ಯರು

**12** ಎಫ್ರಯಿಮ್ಯರು ಒಟ್ಟುಗೂಡಿ ಜೋರ್ಡನನ್ನು ದಾಟಿ ಉತ್ತರದಿಕ್ಕಿಗೆ ಯೆಪ್ತಾಹನಿದ್ದಲ್ಲಿಗೆ ಹೋದರು.
ಅವನಿಗೆ, "ನೀನು ಅಮ್ಮೋನಿಯರ ಸಂಗಡ ಯುದ್ಧಕ್ಕೆ ಹೋಗುವಾಗ ನಮ್ಮನ್ನು ಏಕೆ ಕರೆಯಲಿಲ್ಲ? ಈಗ
ನಾವು ನಿನ್ನನ್ನೂ ನಿನ್ನ ಮನೆಯನ್ನೂ ಸುಟ್ಟು ಬಿಡುತ್ತೇವೆ," ಎಂದರು. 2ಅದಕ್ಕೆ ಅವನು, "ನನಗೂ ನನ್ನ
ಜನರಿಗೂ ಅಮ್ಮೋನಿಯರೊಡನೆ ವ್ಯಾಜ್ಯವಿದ್ದಾಗ ನಾನು ನಿಮ್ಮನ್ನು ಕರೆದೆ; ಆದರೆ ನೀವು ಬಂದು ನನ್ನನ್ನು
ಅವರ ಕೈಯಿಂದ ಬಿಡಿಸಲಿಲ್ಲ. 3ನೀವು ಸಹಾಯ ಮಾಡುವುದಿಲ್ಲ ಎಂದು ತಿಳಿದು ಪ್ರಾಣವನ್ನು ಕೈಯಲ್ಲಿ
ಹಿಡಿದು ಅಮ್ಮೋನಿಯರೊಡನೆ ಯುದ್ಧಕ್ಕೆ ಹೋದೆ; ಸರ್ವೇಶ್ವರ ಅವರನ್ನು ನನ್ನ ಕೈಗೆ ಒಪ್ಪಿಸಿದರು.
ಹೀಗಿರಲು, ನೀವು ಈಗ ಬಂದು ನನ್ನೊಡನೆ ಕಲಹಮಾಡುವುದೇಕೆ?" ಎಂದು ಉತ್ತರಕೊಟ್ಟನು. 4ಬಳಿಕ
ಗಿಲ್ಯಾದಿನವರೆಲ್ಲರನ್ನು ಕೂಡಿಸಿ, ಎಫ್ರಯಿಮರಿಗೆ ವಿರುದ್ಧ ಯುದ್ಧಕ್ಕೆ ನಿಂತನು. "ಗಿಲ್ಯಾದ್ಯರಾದ ನೀವು ನಮ್ಮ
ಮತ್ತು ಮನಸ್ಸೆಯವರ ಮಧ್ಯದಲ್ಲಿದ್ದು ಸ್ವಕುಲವನ್ನು ಬಿಟ್ಟು ಇಲ್ಲಿಗೆ ಓಡಿ ಬಂದಿರಿ" ಎಂದು ಎಫ್ರಯಿಮ್ಯರು
ಹೇಳಿದ್ದರಿಂದ ಗಿಲ್ಯಾದ್ಯರು ಕೋಪಗೊಂಡು ಅವರನ್ನು ಪೂರ್ಣವಾಗಿ ಸೋಲಿಸಿಬಿಟ್ಟರು. 5ಇದಲ್ಲದೆ, ಅವರು
ತಪ್ಪಿಸಿಕೊಂಡು ಹೋಗದಂತೆ ಎಫ್ರಯಿಮಿಗೆ ಹೋಗುವ ಜೋರ್ಡನಿನ ಹಾಯಗಡಗಳನ್ನೆಲ್ಲಾ ಹಿಡಿದರು.
ತಪ್ಪಿಸಿಕೊಂಡ ಎಫ್ರಯಿಮ್ಯರಲ್ಲಿ ಒಬ್ಬನು ಅಲ್ಲಿಗೆ ಬಂದು ನನ್ನನ್ನು ದಾಟಗೊಡಿರಿ ಎಂದು ಅವರನ್ನು
ಕೇಳಿದಾಗ ಅವರು, "ನೀನು ಎಫ್ರಯಿಮನೋ?" ಎಂದು ಕೇಳುತ್ತಿದ್ದರು. 6ಅವನು "ಇಲ್ಲ" ಎಂದರೆ ಅವನಿಗೆ,
"ನೀನು 'ಷಿಬ್ಬೋಲೆತ್' ಅನ್ನು" ಎಂದು ಹೇಳುತ್ತಿದ್ದರು. ಹಾಗೆ ಉಚ್ಚರಸಲಿಕ್ಕೆ ಬಾರದೆ ಅವನು "ಸಿಬ್ಬೋಲೆತ್"
ಅನ್ನುತ್ತಿದ್ದನು. ಕೂಡಲೇ ಅವರು ಅವನನ್ನು ಹಿಡಿದು ಜೋರ್ಡನಿನ ಹಾಯಗಡಗಳ ಬಳಿಯಲ್ಲೇ
ಕೊಂದುಹಾಕುತ್ತಿದ್ದರು. ಹೀಗೆ ಆ ಕಾಲದಲ್ಲಿ ಎಫ್ರಯಿಮರಲ್ಲಿ ನಾಲ್ವತ್ತೆರಡು ಸಾವಿರ ಜನರು ನಾಶವಾದರು.
7 ಗಿಲ್ಯಾದ್ಯನಾದ ಯೆಪ್ತಾಹನು ಇಸ್ರಯೇಲರನ್ನು ಆರು ವರ್ಷ ಪಾಲಿಸಿದನಂತರ ಸತ್ತನು. ಅವನ
ಶವವನ್ನು ಗಿಲ್ಯಾದಿನ ಪಟ್ಟಣಗಳ ಒಂದರಲ್ಲಿ ಸಮಾಧಿಮಾಡಿದರು.

## ಇಬಾನ್, ಎಲೋನ್ ಮತ್ತು ಅಬ್ದೋನ್

8 ಯೆಪ್ತಾಹನ ತರುವಾಯ ಬೆತ್ಲೆಹೇಮಿನವನಾದ ಇಬ್ಚಾನನು ಇಸ್ರಯೇಲರ ನ್ಯಾಯಸ್ಥಾಪಕನಾದ.
9ಅವನಿಗೆ ಮೂವತ್ತು ಮಂದಿ ಗಂಡು ಮಕ್ಕಳೂ ಮೂವತ್ತು ಮಂದಿ ಹೆಣ್ಣು ಮಕ್ಕಳೂ ಇದ್ದರು. ತನ್ನ ಹೆಣ್ಣು
ಮಕ್ಕಳನ್ನು ಬೇರೆಯವರಿಗೆ ಕೊಟ್ಟು ಗಂಡುಮಕ್ಕಳಿಗಾಗಿ ಹೊರಗಿನ ಮೂವತ್ತು ಮಂದಿ ಕನ್ಯೆಯರನ್ನು
ತಂದನು. 10ಇವನು ಇಸ್ರಯೇಲರನ್ನು ಏಳು ವರ್ಷ ಪಾಲಿಸಿದನಂತರ ಮೃತನಾದನು. ಅವನ ಶವವನ್ನು
ಬೆತ್ಲೆಹೇಮಿನಲ್ಲಿ ಸಮಾಧಿಮಾಡಿದರು.

11 ಇವನ ತರುವಾಯ ಜೆಬುಲೂನ್ಯನಾದ ಏಲೋನನು ಇಸ್ರಯೇಲರ ಪಾಲಕನಾಗಿ ಹತ್ತು
ವರ್ಷಗಳವರೆಗೆ ಅವರನ್ನು ಪಾಲಿಸಿದನಂತರ ಮರಣ ಹೊಂದಿದನು. 12ಅವನ ಶವವನ್ನು ಜೆಬುಲೂನ್
ದೇಶದ ಅಯ್ಯಾಲೋನಿನಲ್ಲಿ ಸಮಾಧಿಮಾಡಿದರು.
13 ಇವನ ತರುವಾಯ ಪಿರಾತೋನಿನವನೂ ಹಿಲ್ಲೇಲನ ಮಗನೂ ಆದ ಅಬ್ದೋನನು
ಇಸ್ರಯೇಲರ ಪಾಲಕನಾದನು. 14ಇವನಿಗೆ ನಾಲ್ವತ್ತು ಮಂದಿ ಮಕ್ಕಳೂ ಮೂವತ್ತು ಮಂದಿ ಮೊಮ್ಮಕ್ಕಳೂ
ಇದ್ದರು. ಇವರೆಲ್ಲರಿಗೆ ಸವಾರಿ ಮಾಡುವುದಕ್ಕಾಗಿ ಎಪ್ಪತ್ತು ಹೇಸರಕತ್ತೆಗಳಿದ್ದವು. ಪಿರಾತೋನಿನವನೂ
ಹಿಲ್ಲೇಲನ ಮಗನೂ ಆದ ಅಬ್ದೋನನು ಇಸ್ರಯೇಲರನ್ನು ಎಂಟು ವರ್ಷ ಪಾಲಿಸಿದ ನಂತರ ಮರಣ
ಹೊಂದಿದನು. 15ಅವನ ಶವವನ್ನು ಎಫ್ರಯಿಮ್ ದೇಶದಲ್ಲಿ ಅಮಾಲೇಕ್ಯರ ಬೆಟ್ಟದ ಮೇಲಿರುವ
ಪಿರಾತೋನಿನಲ್ಲಿ ಸಮಾಧಿಮಾಡಿದರು.

### ಸಂಸೋನನ ಜನನ

**13** ಇಸ್ರಯೇಲರು ಮತ್ತೊಮ್ಮೆ ಸರ್ವೇಶ್ವರಸ್ವಾಮಿಯ ದೃಷ್ಟಿಯಲ್ಲಿ ದ್ರೋಹಿಗಳಾದರು. ಆದುದರಿಂದ
ಅವರನ್ನು ನಾಲ್ವತ್ತು ವರ್ಷಗಳ ತನಕ ಫಿಲಿಷ್ಟಿಯರ ಕೈಗೆ ಒಪ್ಪಿಸಲಾಯಿತು.
2 ಚೊರ್ಗಾ ಎಂಬ ಊರಲ್ಲಿ ದಾನ್ ಕುಲದ ಮಾನೋಹ ಎಂಬ ಒಬ್ಬ ಮನುಷ್ಯನಿದ್ದನು. ಅವನ
ಹೆಂಡತಿ ಬಂಜೆಯಾಗಿದ್ದುದರಿಂದ ಅವನಿಗೆ ಮಕ್ಕಳಿರಲಿಲ್ಲ. 3ಒಂದಾನೊಂದು ದಿನ ಸರ್ವೇಶ್ವರನ ದೂತ
ಆಕೆಗೆ ಪ್ರತ್ಯಕ್ಷನಾಗಿ, “ಇಗೋ, ಬಂಜೆಯಾಗಿ ಮಕ್ಕಳಿಲ್ಲದಿರುವ ನೀನು ಗರ್ಭ ವತಿಯಾಗಿ ಒಬ್ಬ ಮಗನನ್ನು
ಹೆರುವೆ. 4ಈ ಕಾರಣ ಜಾಗರೂಕತೆಯಿಂದಿರು; ದ್ರಾಕ್ಷಾರಸವನ್ನಾಗಲಿ, ಬೇರೆ ಯಾವ ಮದ್ಯವನ್ನಾಗಲಿ
ಕುಡಿಯದಿರು; ಯಾವ ನಿಷಿದ್ಧ ಪದಾರ್ಥವನ್ನೂ ಊಟಮಾಡದಿರು; 5ನೀನು ಗರ್ಭವತಿಯಾಗಿ ಹೆರುವ
ಮಗನ ತಲೆಯ ಮೇಲೆ ಕ್ಷೌರದ ಕತ್ತಿಯನ್ನು ಉಪಯೋಗಿಸಲೇ ಬಾರದು. ಅವನು ಹುಟ್ಟಿನಿಂದ ದೇವರಿಗೆ
ಪ್ರತಿಷ್ಠಿತನಾಗುವನು. ಅವನು ಇಸ್ರಯೇಲರನ್ನು ಫಿಲಿಷ್ಟಿಯರ ಕೈಯಿಂದ ಬಿಡಿಸುವುದಕ್ಕೆ ಪ್ರಾರಂಭಿಸುವನು,”
ಎಂದನು. 6ತರುವಾಯ ಆ ಸ್ತ್ರೀ ತನ್ನ ಗಂಡನ ಬಳಿಗೆ ಹೋಗಿ, “ಒಬ್ಬ ದೇವಪುರುಷ ನನ್ನ ಹತ್ತಿರ
ಬಂದಿದ್ದನು. ಅವನ ರೂಪ ದೇವದೂತನ ರೂಪದಂತೆ ಘನಗಂಭೀರವಾಗಿತ್ತು. ‘ಎಲ್ಲಿಂದ ಬಂದಿರಿ?’ ಎಂದು
ನಾನು ಅವನನ್ನು ಕೇಳಲಿಲ್ಲ; ಅವನೂ ತನ್ನ ಹೆಸರನ್ನು ತಿಳಿಸಲಿಲ್ಲ. 7ಆದರೆ ಆತ ನನಗೆ, ‘ನೀನು
ಗರ್ಭವತಿಯಾಗಿ ಒಬ್ಬ ಮಗನನ್ನು ಹೆರುವೆ; ಆದ್ದರಿಂದ ನೀನು ದ್ರಾಕ್ಷಾರಸವನ್ನಾಗಲಿ, ಬೇರೆ ಯಾವ
ಮದ್ಯವನ್ನಾಗಲಿ ಕುಡಿಯದಿರು. ಯಾವ ನಿಷಿದ್ಧಾಹಾರವನ್ನೂ ಮುಟ್ಟಬೇಡ; ಆ ಮಗು ಹುಟ್ಟಿದಂದಿನಿಂದ
ಸಾಯುವವರೆಗೆ ಪ್ರತಿಷ್ಠಿತ ನಾಗಿರುವನು,’ ಎಂದು ಹೇಳಿದನು,” ಎಂದಳು.
8 ಮಾನೋಹನು ಇದನ್ನು ಕೇಳಿ ಸರ್ವೇಶ್ವರನಿಗೆ, “ಸ್ವಾಮಿ, ದಯವಿರಲಿ; ನೀವು ಕಳುಹಿಸಿದ
ದೇವಪುರುಷ ಇನ್ನೊಂದು ಸಾರಿ ನಮ್ಮ ಬಳಿಗೆ ಬಂದು ಹುಟ್ಟಲಿರುವ ಮಗುವಿಗಾಗಿ ಮಾಡಬೇಕಾದುದ್ದನ್ನು
ನಮಗೆ ಬೋಧಿಸಲಿ,” ಎಂದು ಬೇಡಿಕೊಳ್ಳಲು ದೇವರು ಅವನ ಮೊರೆಯನ್ನು ಕೇಳಿದರು. 9ಆ ಮಹಿಳೆ
ಹೊಲದಲ್ಲಿ ಕುಳಿತಿರುವಾಗ ದೇವದೂತನು ತಿರುಗಿ ಬಂದನು. ಆಕೆಯ ಗಂಡ ಮಾನೋಹನು ಅಲ್ಲಿರಲಿಲ್ಲ.
10ಆದುದರಿಂದ ಆಕೆ ಬೇಗನೆ ಗಂಡನ ಬಳಿಗೆ ಹೋಗಿ, “ಮೊನ್ನೆ ನನಗೆ ಪ್ರತ್ಯಕ್ಷನಾದ ಪುರುಷ ತಿರುಗಿ
ಬಂದಿದ್ದಾನೆ” ಎಂದು ತಿಳಿಸಿದಳು. 11ಅವನೆದ್ದು ಹೆಂಡತಿಯೊಡನೆ ಬಂದು ಆ ಪುರುಷನಿಗೆ, “ಮೊನ್ನೆ
ಈಕೆಯೊಡನೆ ಮಾತಾಡಿದವರು ನೀವೋ” ಎಂದು ಕೇಳಲು ಅವನು, 12“ಹೌದು ನಾನೇ,” ಎಂದನು. ಆಗ
ಮಾನೋಹನು, “ನೀವು ಹೇಳಿದ್ದು ನೆರವೇರಿದಾಗ ನಾವು ಆ ಮಗುವಿಗಾಗಿ ಮಾಡತಕ್ಕದ್ದೇನು? ಅವನನ್ನು
ಹೇಗೆ ನಡಿಸತಕ್ಕದ್ದು?” ಎಂದು ಕೇಳಿದನು. 13ಸರ್ವೇಶ್ವರನ ದೂತನು ಮಾನೋಹನಿಗೆ, “ನಾನು
ಹೇಳಿದ್ದನ್ನೆಲ್ಲಾ ಈಕೆ ಜಾಗರೂಕತೆಯಿಂದ ಕೈಗೊಳ್ಳಲಿ; 14ದ್ರಾಕ್ಷಾಫಲವನ್ನು ತಿನ್ನದಿರಲಿ; ದ್ರಾಕ್ಷಾರಸವನ್ನಾಗಲಿ,
ಬೇರೆ ಯಾವ ಮದ್ಯವನ್ನಾಗಲಿ ಕುಡಿಯದಿರಲಿ; ನಿಷಿದ್ಧಾಹಾರವನ್ನು ಮುಟ್ಟದಿರಲಿ; ಹೀಗೆ ನಾನು
ಆಜ್ಞಾಪಿಸಿದ್ದನ್ನೆಲ್ಲಾ ಕೈಗೊಳ್ಳಲಿ,” ಎಂದನು. 15ಮತ್ತೆ ಮಾನೋಹನು ಸರ್ವೇಶ್ವರನ ದೂತನನ್ನು, “ನಾವು
ನಿಮಗಾಗಿ ಒಂದು ಹೋತಮರಿಯನ್ನು ಅಡಿಗೆ ಮಾಡಿ ತರುವವರೆಗೆ ದಯವಿಟ್ಟು ಇಲ್ಲೇ ನಿಲ್ಲಬೇಕು ಎಂದು

ಬೇಡಿಕೊಂಡನು. ಅವನು, 16“ನೀನು ನನ್ನನ್ನು ನಿಲ್ಲಿಸಿಕೊಂಡರೂ ನಾನು ನಿನ್ನ ಆಹಾರವನ್ನು
ಊಟಮಾಡುವುದಿಲ್ಲ; ಬಲಿದಾನ ಮಾಡಬೇಕೆಂದು ನಿನಗೆ ಮನಸ್ಸಿದ್ದರೆ ಅದನ್ನು ಸರ್ವೇಶ್ವರನಿಗೆ
ಸಮರ್ಪಿಸು,” ಎಂದನು. ಅವನು ಸರ್ವೇಶ್ವರನ ದೂತನೆಂಬುದು ಮಾನೋಹನಿಗೆ ಗೊತ್ತಿರಲಿಲ್ಲ.
17ಆದುದರಿಂದ ಅವನು ಆ ದೂತನನ್ನು, “ನೀವು ಹೇಳಿದ್ದು ನೆರವೇರಿದಾಗ ನಿಮ್ಮನ್ನು ಸನ್ಮಾನಿಸ
ಬೇಕೆಂದಿರುತ್ತೇವೆ, ನಿಮ್ಮ ಹೆಸರೇನು?” ಎಂದು ಕೇಳಿದನು. 18ಸರ್ವೇಶ್ವರನ ದೂತನು, “ನನ್ನ ಹೆಸರನ್ನು
ಕೇಳುವುದೇಕೆ? ಅದು ಆಶ್ಚರ್ಯಕರವಾದದ್ದು” ಎಂದನು. 19ಮಾನೋಹನು ಹೋತಮರಿಯನ್ನೂ ಧಾನ್ಯ
ದ್ರವ್ಯವನ್ನೂ ತಂದು ಬಂಡೆಯ ಮೇಲಿಟ್ಟು ಸರ್ವೇಶ್ವರನಿಗೆ ಸಮರ್ಪಿಸಿದನು. ಮಾನೋಹನು ಮತ್ತು ಅವನ
ಹೆಂಡತಿ ನೋಡುತ್ತಿರುವಾಗಲೇ ಸರ್ವೇಶ್ವರನ ದೂತನು ಒಂದು ಆಶ್ಚರ್ಯಕಾರ್ಯ ಮಾಡಿದನು.
20ಅದೇನೆಂದರೆ ಬಲಿಪೀಠದಿಂದ ಆಕಾಶಕ್ಕೆ ಹೋಗುತ್ತಿದ್ದ ಅಗ್ನಿಜ್ವಾಲೆಯೊಳಗೆ ಅವನು ಮೇಲಕ್ಕೇರಿ
ಹೋದನು. ಅವರು ಇದನ್ನು ನೋಡುತ್ತಲೆ ನೆಲದ ಮೇಲೆ ಬೋರಲಾಗಿ ಬಿದ್ದರು. 21ಸರ್ವೇಶ್ವರನ ದೂತನು
ಮಾನೋಹನಿಗೂ ಅವನ ಹೆಂಡತಿಗೂ ಪುನಃ ಕಾಣಿಸಲಿಲ್ಲ. 22ಆಗ ಮಾನೋಹನು ಆತ ಸರ್ವೇಶ್ವರನ
ದೂತನೆಂದು ತಿಳಿದು ತನ್ನ ಹೆಂಡತಿಗೆ, “ನಾವು ಸಾಯಬೇಕು. 23ದೇವರನ್ನು ಕಣ್ಣಾರೆ ಕಂಡೆವಲ್ಲಾ!”
ಎಂದನು. ಆಕೆ ಅವನಿಗೆ, “ಸರ್ವೇಶ್ವರ ನಮ್ಮನ್ನು ಕೊಲ್ಲಬೇಕೆಂದಿದ್ದರೆ ಅವರು ನಮ್ಮ ಕೈಯಿಂದ ಬಲಿಯನ್ನೂ
ನೈವೇದ್ಯವನ್ನೂ ಸ್ವೀಕರಿಸುತ್ತಿರಲಿಲ್ಲ. ಈಗ ಇವುಗಳನ್ನೆಲ್ಲಾ ನಮಗೆ ತೋರಿಸುತ್ತಿರಲಿಲ್ಲ; ಹೇಳುತ್ತಿರಲಿಲ್ಲ,”
ಎಂದಳು.

24 ಆ ಮಹಿಳೆ ಒಬ್ಬ ಮಗನನ್ನು ಹೆತ್ತು ಅವನಿಗೆ ‘ಸಂಸೋನ’ ಎಂದು ಹೆಸರಿಟ್ಟಳು. ಹುಡುಗ
ಬೆಳೆದು ದೊಡ್ಡವನಾದ. ಸರ್ವೇಶ್ವರನ ಆಶೀರ್ವಾದ ಅವನ ಮೇಲಿತ್ತು. 25ಇದಲ್ಲದೆ, ಅವನು ಚೊರ್ಗಕ್ಕೂ
ಎಷ್ಟಾವೋಲಿಗೂ ಮಧ್ಯದಲ್ಲಿರುವ ದಾನ್ ಕುಲದ ಪಾಳೆಯದಲ್ಲಿದ್ದಾಗ ಸರ್ವೇಶ್ವರನ ಆತ್ಮ ಅವನನ್ನು
ಚೇತನಗೊಳಿಸತೊಡಗಿತು.

### ಸಂಸೋನನ ವಿವಾಹ ಮತ್ತು ಒಗಟು

**14** ಸಂಸೋನನು ತಿಮ್ನಾ ಊರಿಗೆ ಇಳಿದು ಹೋಗಿ ಅಲ್ಲಿನ ಫಿಲಿಷ್ಟಿಯರ ಹೆಣ್ಣುಗಳಲ್ಲಿ ಒಬ್ಬಳನ್ನು
ನೋಡಿದನು. 2ತಂದೆ ತಾಯಿಗಳ ಬಳಿಗೆ ಬಂದು ಅವರಿಗೆ, “ನಾನು ತಿಮ್ನಾ ಊರಲ್ಲಿ ಒಬ್ಬ ಫಿಲಿಷ್ಟಿಯ
ಹೆಣ್ಣನ್ನು ನೋಡಿ ಇದ್ದೇನೆ; ಆಕೆಯನ್ನು ನನಗೆ ಮದುವೆ ಮಾಡಿಕೊಡಿ,” ಎಂದು ಹೇಳಿದನು. 3ಆಗ ಅವರು
ಅವನಿಗೆ, “ಸುನ್ನತಿಯಿಲ್ಲದ ಫಿಲಿಷ್ಟಿಯರ ಹೆಣ್ಣನ್ನು ವರಿಸಬೇಕೆಂದಿರುವೆಯಾ? ನಿನ್ನ ಬಂಧುಗಳಲ್ಲಿ ಅದೂ
ನಮ್ಮ ಎಲ್ಲಾ ಜನರಲ್ಲಿ ನಿನಗೆ ಹೆಣ್ಣು ಸಿಕ್ಕುವುದಿಲ್ಲವೇ?” ಎಂದು ಪ್ರತಿಭಟಿಸಿದರು. ಅವನು, “ನನಗಾಗಿ
ಆಕೆಯನ್ನೇ ತನ್ನಿ. ಆಕೆಯನ್ನೇ ಮೆಚ್ಚಿಕೊಂಡಿದ್ದೇನೆ,” ಎಂದನು. 4ಫಿಲಿಷ್ಟಿಯರ ದಂಡನೆಗೆ ಕಾರಣವನ್ನು
ಹುಡುಕುತ್ತಿದ್ದ ಸರ್ವೇಶ್ವರನ ಪ್ರೇರಣೆಯಿಂದಲೇ ಇದೆಲ್ಲ ಸಂಭವಿಸಿತೆಂದು ಅವನ ತಂದೆತಾಯಿಗಳಿಗೆ
ಗೊತ್ತಾಗಲಿಲ್ಲ. ಆ ಕಾಲದಲ್ಲಿ ಫಿಲಿಷ್ಟಿಯರು ಇಸ್ರಯೇಲರ ಮೇಲೆ ದೊರೆತನ ನಡೆಸುತ್ತಿದ್ದರು.

5 ಸಂಸೋನನು ತನ್ನ ತಂದೆತಾಯಿಗಳ ಸಮೇತ ತಿಮ್ನಾ ಊರಿಗೆ ಹೊರಟು ಅಲ್ಲಿನ ದ್ರಾಕ್ಷಿ
ತೋಟಗಳ ಬಳಿಗೆ ಬಂದನು. ಅಲ್ಲಿ ಒಂದು ಪ್ರಾಯದ ಸಿಂಹ ಗರ್ಜಿಸುತ್ತಾ ಅವನೆದುರಿಗೆ ಬಂದಿತು.
6ಸರ್ವೇಶ್ವರನ ಆತ್ಮ ಅವನ ಮೇಲೆ ಫಕ್ಕನೆ ಇಳಿದು ಬಂದಿತು. ಆಗ ಅವನು ಕೈಯಲ್ಲಿ ಏನೂ ಇಲ್ಲದಿದ್ದರೂ
ಆ ಸಿಂಹವನ್ನು ಹೋತ ಮರಿಯನ್ನೋ ಎಂಬಂತೆ ಸೀಳಿಬಿಟ್ಟನು. ಈ ಸಂಗತಿಯನ್ನು ತಂದೆತಾಯಿಗಳಿಗೆ
ತಿಳಿಸಲಿಲ್ಲ. 7ಅನಂತರ ಅವನು ಊರೊಳಗೆ ಹೋಗಿ ಆ ಮಹಿಳೆಯನ್ನು ಮಾತಾಡಿಸಿ ಆಕೆಯನ್ನು
ಮೆಚ್ಚಿಕೊಂಡನು. 8ಕೆಲವು ದಿವಸಗಳಾದ ಮೇಲೆ ಅವನು ಆಕೆಯನ್ನು ವರಿಸುವುದಕ್ಕಾಗಿ ಮತ್ತೆ ಆ ಊರಿಗೆ
ಹೋಗುತ್ತಿದ್ದಾಗ, ದಾರಿ ಬಿಟ್ಟು, ಸಿಂಹದ ಹೆಣವನ್ನು ನೋಡುವುದಕ್ಕೆ ಹೋದನು. ಅದರ ಒಡಲಲ್ಲಿ
ಜೇನುಹುಳುಗಳನ್ನೂ ಜೇನನ್ನೂ ಕಂಡು 9ಆ ಜೇನನ್ನು ಕೈಯಲ್ಲಿ ತೆಗೆದುಕೊಂಡು ತಿನ್ನುತ್ತಾ ಹೋದನು;
ತನ್ನ ತಂದೆತಾಯಿಗಳಿಗೂ ಕೊಟ್ಟನು; ಅವರೂ ತಿಂದರು. ಆದರೆ ಅದು ತನಗೆ ಸಿಂಹದ ಒಡಲಲ್ಲಿ
ಸಿಕ್ಕಿತೆಂಬುದನ್ನು ಅವರಿಗೆ ತಿಳಿಸಲಿಲ್ಲ.

10 ಸಂಸೋನನ ತಂದೆ ಹೆಣ್ಣಿನ ಮನೆಗೆ ಬಂದ ಮೇಲೆ ಸಂಸೋನನು ಯೌವನಸ್ಥರ ಪದ್ಧತಿಯ
ಪ್ರಕಾರ ಅಲ್ಲಿ ಔತಣವನ್ನು ಸಿದ್ಧಮಾಡಿಸಿದನು. 11ಫಿಲಿಷ್ಟಿಯನು ಅವನನ್ನು ನೋಡಿದಾಗ ತಮ್ಮ ಮಧ್ಯದಿಂದ
ಮೂವತ್ತು ಮಂದಿ 'ಆಪ್ತರನ್ನು' ಆರಿಸಿ ಅವನ ಜೊತೆಯಲ್ಲಿ ಇರಿಸಿದರು. 12ಸಂಸೋನನು ಇವರಿಗೆ, "ನಾನು
ನಿಮಗೆ ಒಂದು ಒಗಟನ್ನು ಹೇಳುತ್ತೇನೆ; ನೀವು ಔತಣದ ಏಳು ದಿನಗಳಲ್ಲಿಯೇ ಅದನ್ನು ಬಿಡಿಸಿ ಅದರ
ಅರ್ಥವನ್ನು ಹೇಳಿದರೆ ನಿಮಗೆ ಮೂವತ್ತು ದುಪ್ಪಟಿಗಳನ್ನೂ ಮೂವತ್ತು ವಿಶೇಷ ವಸ್ತ್ರಗಳನ್ನೂ ಕೊಡುತ್ತೇನೆ.
13ನಿಮ್ಮಿಂದ ಆಗದೆ ಹೋದರೆ ನೀವು ನನಗೆ ಮೂವತ್ತು ದುಪ್ಪಟಿಗಳನ್ನೂ ಮೂವತ್ತು ವಿಶೇಷ ವಸ್ತ್ರಗಳನ್ನೂ
ಕೊಡಬೇಕು" ಎನ್ನಲು ಅವರು ಅವನಿಗೆ, "ನಿನ್ನ ಒಗಟನ್ನು ಹೇಳು, ಕೇಳೋಣ," ಎಂದು ಹೇಳಿದರು. 14ಆಗ
ಅವನು,

"ತಿಂದುಬಿಡುವಂಥದರಿಂದ ತಿನ್ನತಕ್ಕದ್ದು
ದೊರಕಿತು;
ಕ್ರೂರವಾದದ್ದರಿಂದ ಮಧುರವಾದದ್ದು
ಸಿಕ್ಕಿತು"

ಎಂದು ಹೇಳಿದನು. ಮೂರು ದಿನಗಳಾದರೂ ಅವರು ಅದನ್ನು ಬಿಡಿಸಲಾರದೆ ಹೋದರು. 15ಅವರು
ಏಳನೆಯ ದಿನದಲ್ಲಿ ಸಂಸೋನನ ಹೆಂಡತಿಗೆ, "ನಿನ್ನ ಗಂಡನನ್ನು ಮರಳುಗೊಳಿಸಿ ಅವನಿಂದ ಒಗಟಿನ
ಅರ್ಥವನ್ನು ತಿಳಿದುಕೋ; ಇಲ್ಲವಾದರೆ ನಾವು ನಿನ್ನನ್ನೂ ನಿನ್ನ ತಂದೆಯ ಮನೆಯವರನ್ನೂ ಬೆಂಕಿಯಿಂದ
ಸುಟ್ಟುಬಿಡುತ್ತೇವೆ; ನಮಗಿರುವುದಲ್ಲವನ್ನೂ ಕಸಿದುಕೊಳ್ಳುವುದಕ್ಕೆ ನಮ್ಮನ್ನು ಇಲ್ಲಿಗೆ ಕರಿಸಿದಿರೋ?" ಎಂದರು.
16ಆಕೆ ಸಂಸೋನನ ಮುಂದೆ ಅಳುತ್ತಾ, "ನೀವು ನನ್ನನ್ನು ಪ್ರೀತಿಸುವುದಿಲ್ಲ, ದ್ವೇಷಿಸುತ್ತೀರಷ್ಟೇ; ನನ್ನ ಜನರಿಗೆ
ಒಗಟನ್ನು ಹೇಳಿದ್ದೀರಿ, ಅದರ ಅರ್ಥವನ್ನು ನನಗೆ ತಿಳಿಸಲಿಲ್ಲವಲ್ಲಾ" ಎಂದು ಪೀಡಿಸಿದಳು. ಅವನು ಆಕೆಗೆ,
"ಇದನ್ನು ನನ್ನ ತಂದೆತಾಯಿಗಳಿಗೂ ಹೇಳಲಿಲ್ಲ; ನಿನಗೆ ಹೇಳುವೆನೋ?" ಎಂದು ಉತ್ತರಕೊಟ್ಟನು. 17ಆಕೆ
ಔತಣದ ಏಳು ದಿನಗಳಲ್ಲೂ ಅವನ ಮುಂದೆ ಅಳುತ್ತಿದ್ದಳು. ಏಳನೆಯ ದಿನ ಆಕೆ ಬಹಳವಾಗಿ
ಪೀಡಿಸಿದ್ದರಿಂದ ಅವನು ಹೇಳೇಬಿಟ್ಟನು. ಆಕೆ ಒಗಟಿನ ಅರ್ಥವನ್ನು ತನ್ನ ಜನರಿಗೆ ತಿಳಿಸಿದಳು. 18ಅವರು
ಏಳನೆಯ ದಿನ ಸೂರ್ಯಾಸ್ತಮಾನಕ್ಕೆ ಮೊದಲೇ ಅವನಿಗೆ,

"ಜೇನಿಗಿಂತ ಸಿಹಿಯಾದದ್ದು ಯಾವುದು?
ಸಿಂಹಕ್ಕಿಂತ ಕ್ರೂರವಾದದ್ದು ಯಾವುದು?"

ಎಂದು ಹೇಳಿದರು. ಅವನು.

"ನೀವು ನನ್ನ ಕಡಸಿನಿಂದ ಉಳದಿದ್ದರೆ
ಒಗಟನ್ನು ಬಿಡಿಸಲು ನಿಮ್ಮಿಂದಾಗುತ್ತಿರ
ಲಿಲ್ಲ,"

ಎಂದನು. 19ಸರ್ವೇಶ್ವರನ ಆತ್ಮ ಫಕ್ಕನೆ ಅವನ ಮೇಲೆ ಬಂದಿತು. ಅವನು ಅಷ್ಕೆಲೋನಿಗೆ ಹೋಗಿ ಅಲ್ಲಿನ
ಮೂವತ್ತು ಮಂದಿಯನ್ನು ಹೊಡೆದು ಅವರ ವಸ್ತ್ರಗಳನ್ನು ಸುಲಿದುಕೊಂಡು ಒಗಟನ್ನು ಬಿಡಿಸಿದವರಿಗೆ
ತಂದುಕೊಟ್ಟನು. ಬಳಿಕ ಕೋಪಗೊಂಡು ತನ್ನ ತಂದೆಯ ಮನೆಗೆ ಹೋದನು. 20ಇತ್ತ ಸಂಸೋನನ
ಹೆಂಡತಿಯನ್ನು ಅವನ ಆಪ್ತರೊಬ್ಬನಿಗೆ ಮದುವೆ ಮಾಡಿಕೊಟ್ಟರು.

### ಸಂಸೋನನಿಂದ ಫಿಲಿಷ್ಟಿಯರ ಬೆಳೆ ಹಾಳು

**15** ಕೆಲವು ದಿನಗಳಾದ ಮೇಲೆ ಗೋದಿಯ ಸುಗ್ಗಿಯಲ್ಲಿ ಸಂಸೋನನು ಒಂದು ಹೋತಮರಿಯನ್ನು
ತೆಗೆದುಕೊಂಡು ತನ್ನ ಹೆಂಡತಿಯನ್ನು ನೋಡುವುದಕ್ಕೆ ಹೋದನು. ಆಕೆಯ ತಂದೆ ಬಳಿಗೆ ಬಂದನು; "ನನ್ನ
ಹೆಂಡತಿಯ ಒಳಗಿನ ಕೋಣೆಗೆ ಹೋಗಬಿಡು," ಎಂದನು. ಅವನು, "ಹೋಗಕೂಡದು. 2ನೀನು ನಿಜವಾಗಿ
ಆಕೆಯನ್ನು ದ್ವೇಷಮಾಡುತ್ತೀಯೆಂದು ನಿನ್ನ ಆಪ್ತರೊಬ್ಬನಿಗೆ ಮದುವೆಮಾಡಿಕೊಟ್ಟೆ. ಆಕೆಯ ತಂಗಿ ಆಕೆಗಿಂತ
ಸುಂದರಿಯಾಗಿದ್ದಾಳೆ; ಈಕೆ ನಿನಗೆ ಇರಲಿ," ಎಂದನು. 3ಆಗ ಸಂಸೋನನು, "ಈ ಸಾರಿ ಫಿಲಿಷ್ಟಿಯರಿಗೆ

ನಷ್ಟ ಉಂಟುಮಾಡಿದರೆ ತಪ್ಪು ನನ್ನದಲ್ಲ” ಎಂದುಕೊಂಡು ಹೋಗಿ 4ಮುನ್ನೂರು ನರಿಗಳನ್ನು ಹಿಡಿದನು.
ಒಂದರ ಬಾಲಕ್ಕೆ ಇನ್ನೊಂದರ ಬಾಲವನ್ನು ಸೇರಿಸಿ ಕಟ್ಟಿದನು. ಹೀಗೆ ಎರಡೆರಡು ಬಾಲಗಳ ನಡುವೆ
ಒಂದೊಂದು ಪಂಜನ್ನು ಸಿಕ್ಕಿಸಿ ಪಂಜುಗಳಿಗೆ ಬೆಂಕಿಹೊತ್ತಿಸಿ 5ಆ ನರಿಗಳನ್ನು ‘ಫಿಲಿಷ್ಟಿಯರ ಬೆಳೆತುಂಬಿದ
ಹೊಲಗಳಿಗೆ ಬಿಟ್ಟು ಅವರ ತೆನೆಗೂಡುಗಳನ್ನೂ ಇನ್ನೂ ಕೊಯ್ಯದೆ ಇದ್ದ ಪೈರುಗಳನ್ನೂ ಸುಟ್ಟುಬಿಟ್ಟನು.
ಎಣ್ಣೆಯ ಮರಗಳ ತೋಟಗಳು ಸಹ ಸುಟ್ಟು ಹೋದವು. 6ಫಿಲಿಷ್ಟಿಯರು ಇದನ್ನು ಮಾಡಿದವರಾರೆಂದು
ವಿಚಾರಿಸುವಲ್ಲಿ ತಿಮ್ನಾ ಊರಿನವನ ಅಳಿಯನಾದ ಸಂಸೋನನೆಂದು ಗೊತ್ತಾಯಿತು. ಅವನ ಮಾವ ಅವನ
ಹೆಂಡತಿಯನ್ನು ಬೇರೊಬ್ಬನಿಗೆ ಕೊಟ್ಟುಬಿಟ್ಟದ್ದೇ ಇದಕ್ಕೆ ಕಾರಣವೆಂದು ಅವರು ತಿಳಿದು, ಅಲ್ಲಿಗೆ ಬಂದು
ಆಕೆಯನ್ನೂ ಆಕೆಯ ತಂದೆಯನ್ನೂ ಸುಟ್ಟುಬಿಟ್ಟರು. 7ಸಂಸೋನನು ಅವರಿಗೆ, “ನೀವು ಹೀಗೆ ಮಾಡಿದ್ದರಿಂದ
ನಾನು ನಿಮಗೆ ಮುಯ್ಯಿ ತೀರಿಸದೆ ಬಿಡುವುದಿಲ್ಲ,” ಎಂದು ಹೇಳಿ 8ಅವರ ತೊಡೆ ಸೊಂಟಗಳನ್ನು ಮುರಿದು,
ಅವರನ್ನು ಸಂಹರಿಸಿಬಿಟ್ಟನು. ಅನಂತರ ಹೋಗಿ ಏಟಾಮ್ ಗಿರಿಯ ಗುಹೆಯಲ್ಲಿ ವಾಸಮಾಡಿದನು.

**ಫಿಲಿಷ್ಟಿಯರ ಸೋಲು**

9 ಆಗ ಫಿಲಿಷ್ಟಿಯರು ಹೊರಟು ಯೆಹೂದಾ ಪ್ರಾಂತ್ಯದ ಲೆಹೀ ಎಂಬಲ್ಲಿಗೆ ಹೋಗಿ ಪಾಳೆಯ
ಮಾಡಿಕೊಂಡು ಯುದ್ಧಕ್ಕೆ ನಿಂತರು. 10“ನೀವು ನಮಗೆ ವಿರೋಧವಾಗಿ ಯುದ್ಧಕ್ಕೆ ಬಂದದ್ದೇಕೆ?” ಎಂದು
ಯೆಹೂದ್ಯರು ಅವರನ್ನು ಕೇಳಿದರು. ಅವರು, “ಸಂಸೋನನನ್ನು ಹಿಡಿದು, ಬಂಧಿಸಿ, ಅವನು ನಮಗೆ
ಮಾಡಿದಂತೆಯೇ ಅವನಿಗೂ ಮಾಡಬೇಕೆಂದು ಬಂದೆವು,” ಎಂದು ಉತ್ತರ ಕೊಟ್ಟರು. 11ಮೂರು ಸಾವಿರ
ಮಂದಿ ಯೆಹೂದ್ಯರು ಏಟಾಮ್‍ಗಿರಿಗೆ ಹೋಗಿ ಸಂಸೋನನಿಗೆ, “ಫಿಲಿಷ್ಟಿಯರು ನಮ್ಮ ಮೇಲೆ ದೊರೆತನ
ಮಾಡುತ್ತಿದ್ದಾರೆಂಬುದು ನಿನಗೆ ಗೊತ್ತಿಲ್ಲವೇ? ಹೀಗೆ ಏಕೆ ಮಾಡಿದೆ” ಎಂದು ಕೇಳಲು ಅವನು, “ಅವರು
ನನಗೆ ಮಾಡಿದಂತೆಯೇ ನಾನು ಅವರಿಗೆ ಮಾಡಿದ್ದೇನೆ,” ಎಂದನು. 12ಅವರು, “ನಾವು ನಿನ್ನನ್ನು ಕಟ್ಟಿ
ಫಿಲಿಷ್ಟಿಯರ ಕೈಗೆ ಒಪ್ಪಿಸಬೇಕೆಂದು ಬಂದಿದ್ದೇವೆ,” ಎನ್ನಲು ಸಂಸೋನನು, “ಹಾಗಾದರೆ ನೀವು ನನ್ನನ್ನು
ಕೊಲ್ಲುವುದಿಲ್ಲವೆಂದು ಆಣೆಮಾಡಿ” ಎಂದನು. 13ಅದಕ್ಕೆ ಅವರು, “ನಾವು ಸತ್ಯವಾಗಿ ನಿನ್ನನ್ನು ಕೊಲ್ಲುವುದಿಲ್ಲ;
ನಿನ್ನನ್ನು ಕಟ್ಟಿ ಫಿಲಿಷ್ಟಿಯರ ಕೈಗೆ ಒಪ್ಪಿಸುತ್ತೇವೆ,” ಎಂದು ಹೇಳಿ ಅವನನ್ನು ಎರಡು ಹೊಸ ಹಗ್ಗಗಳಿಂದ
ಕಟ್ಟಿ ಗಿರಿಯಿಂದ ತಂದರು.

14 ಸಂಸೋನನು ಲೆಹೀಯ ಸಮೀಪಕ್ಕೆ ಬರಲು ಫಿಲಿಷ್ಟಿಯರು ಅವನನ್ನು ಕಂಡು ಆರ್ಭಟಿಸಿದರು.
ಸರ್ವೇಶ್ವರನ ಆತ್ಮ ಅವನ ಮೇಲೆ ಬಂದುದರಿಂದ ಅವನ ರಟ್ಟೆಗಳಿಗೆ ಸುತ್ತಲೂ ಕಟ್ಟಿದ್ದ ಹಗ್ಗಗಳು ಸುಟ್ಟ
ಸೆಣಬಿನ ಹಾಗಾದವು; ಕೈಗೆ ಹಾಕಿದ ಬೇಡಿಗಳು ಕಳಚಿ ಬಿದ್ದವು. 15ಅಲ್ಲೇ ಒಂದು ಕತ್ತೆಯ ದವಡೆ ಎಲುಬು
ಬಿದ್ದಿತ್ತು. ಅದು ಇನ್ನೂ ಹಸಿ ಇತ್ತು. ಅವನು ಅದನ್ನು ತೆಗೆದುಕೊಂಡು ಅದರಿಂದ ಸಾವಿರ ಜನರನ್ನು
ಹತ್ತಿಸಿಬಿಟ್ಟು,

16 “ಕತ್ತೆಯ ದವಡೆ ಎಲುಬಿನಿಂದ
ಸಾವಿರ ಜನರನ್ನು ವಧಿಸಿದೆ;
ಕತ್ತೆಯ ದವಡೆ ಎಲುಬಿನಿಂದ
ಹೆಣಗಳನ್ನು ರಾಶಿರಾಶಿಯಾಗಿ ಬೀಳಿಸಿದೆ” ಎಂದು ಹೇಳಿ 17ತನ್ನ ಕೈಯಲ್ಲಿದ್ದ ಎಲುಬನ್ನು
ಬಿಸಾಡಿದನು. ಆ ಸ್ಥಳಕ್ಕೆ ‘ರಾಮತ್ ಲೆಹೀ’ ಎಂದು ಹೆಸರಾಯಿತು.

18 ಇದರಿಂದಾಗಿ ಸಂಸೋನನಿಗೆ ಬಹಳ ದಾಹವಾಯಿತು. ಅವನು ಸರ್ವೇಶ್ವರನಿಗೆ, “ನೀವು ನಿಮ್ಮ
ದಾಸನ ಮುಖಾಂತರ ಇಂಥ ಮಹಾ ಜಯವನ್ನು ದಯಪಾಲಿಸಿದಿರಿ. ಆದರೆ ಈಗ ನಾನು ದಾಹದಿಂದ
ಸತ್ತು ಸುನ್ನತಿಯಿಲ್ಲದವರ ಕೈಯಲ್ಲಿ ಬೀಳಬೇಕೇ?” ಎಂದು ಮೊರೆಯಿಟ್ಟನು. 19ದೇವರು ಲೆಹೀಯಲ್ಲಿ
ಒರಳಬಂಡೆಯನ್ನು ಸೀಳಿ ಅದರೊಳಗಿಂದ ನೀರು ಬರುವಂತೆ ಮಾಡಿದರು. ಅವನು ಕುಡಿದು ಪುನಃ
ಚೇತನಗೊಂಡನು. ಆದುದರಿಂದ ಅದಕ್ಕೆ ‘ಏನ್ ಹಕ್ಕೋರೇ’ ಎಂದು ಹೆಸರಾಯಿತು; ಅದು ಇಂದಿನವರೆಗೂ
ಲೆಹೀಯಲ್ಲಿದೆ. 20ಫಿಲಿಷ್ಟಿಯರ ಕಾಲದಲ್ಲಿ ಸಂಸೋನನು ಇಸ್ರಯೇಲರನ್ನು ಇಪ್ಪತ್ತು ವರ್ಷಗಳವರೆಗೆ
ಪಾಲಿಸಿದನು.

## ಗಾಜಾ ಎಂಬಲ್ಲಿ ಸಂಸೋನನ ಶಕ್ತಿ ಪ್ರದರ್ಶನ

**16** ತರುವಾಯ ಸಂಸೋನನು ಗಾಜಾಕ್ಕೆ ಹೋದಾಗ ಅಲ್ಲಿ ಒಬ್ಬ ವೇಶ್ಯೆಯನ್ನು ಕಂಡು ಅವಳ ಬಳಿಗೆ ಹೋದನು. [2]ಸಂಸೋನನು ಬಂದಿರುವುದು ಗಾಜದವರಿಗೆ ಗೊತ್ತಾಯಿತು? ಅವರು ಬಂದು ಅವನನ್ನು ಸುತ್ತಿಕೊಂಡರು. ಸೂರ್ಯೋದಯವಾಗುತ್ತಲೇ ಅವನನ್ನು ಕೊಂದು ಹಾಕಬೇಕೆಂದುಕೊಂಡು ರಾತ್ರಿಯೆಲ್ಲಾ ಊರಬಾಗಿಲಲ್ಲೇ ಹೊಂಚುಹಾಕುತ್ತಾ ಸುಮ್ಮನಿದ್ದರು. [3]ಸಂಸೋನನು ಮಲಗಿ ಮಧ್ಯರಾತ್ರಿಯಲ್ಲೆದ್ದು ಊರಬಾಗಿಲುಗಳನ್ನೂ ಕದಗಳನ್ನೂ ಅದರ ಎರಡು ನಿಲುವು ಪಟ್ಟಿಗಳನ್ನೂ ಅಗುಳಿಗಳನ್ನೂ ಕಿತ್ತು ಹೆಗಲ ಮೇಲೆ ಹೊತ್ತುಕೊಂಡು ಹೋಗಿ ಹೆಬ್ರೋನಿನ ಎದುರಿಗಿರುವ ಬೆಟ್ಟದ ತುದಿಯ ಮೇಲೆ ಇಟ್ಟನು.

## ಸಂಸೋನನು ಮತ್ತು ದೆಲೀಲ

4 ಅನಂತರ ಸಂಸೋನನು ಸೋರೇಕ್ ತಗ್ಗಿನಲ್ಲಿ ವಾಸವಾಗಿದ್ದ ದೆಲೀಲಾ ಎಂಬ ಮಹಿಳೆಯಿಂದ ಮೋಹಿತನಾದನು. [5]ಫಿಲಿಷ್ಟಿಯರ ಮುಖಂಡರು ಅವಳ ಬಳಿಗೆ ಹೋಗಿ ಅವಳಿಗೆ, "ನೀನು ಅವನನ್ನು ಮರುಳುಗೊಳಿಸಿ ಅವನ ಮಹಾಶಕ್ತಿಯ ಮೂಲ ಯಾವುದೆಂಬುದನ್ನು ತಿಳಿದುಕೋ; ನಾವು ಅವನನ್ನು ಗೆದ್ದು, ಕಟ್ಟಿ, ಅಡಗಿಸುವ ವಿಧಾನವನ್ನೂ ಗೊತ್ತುಮಾಡಿಕೊಂಡು ನಮಗೆ ತಿಳಿಸು. ನಮ್ಮಲ್ಲಿ ಪ್ರತಿಯೊಬ್ಬನೂ ನಿನಗೆ ಸಾವಿರದ ನೂರು ಬೆಳ್ಳಿ ನಾಣ್ಯಗಳನ್ನು ಕೊಡುವೆವು," ಎಂದು ಹೇಳಿದರು. [6]ದೆಲೀಲಳು ಸಂಸೋನನಿಗೆ, "ನಿಮ್ಮ ಇಂಥ ಮಹಾಶಕ್ತಿ ಹೇಗೆ ಬಂತು? ನಿಮ್ಮನ್ನು ಕಟ್ಟಿ ಅಡಗಿಸುವುದು ಹೇಗೆ ಎಂಬುದನ್ನು ದಯವಿಟ್ಟು ನನಗೆ ತಿಳಿಸಿ," ಎಂದಳು. [7]ಅವನು, "ಕರುಳಿನ ಏಳು ಹಸಿ ತಂತಿಗಳಿಂದ ನನ್ನನ್ನು ಕಟ್ಟಿದರೆ ನಾನು ಬಲಹೀನನಾಗಿ ಬೇರೆ ಮನುಷ್ಯನಂತಾಗುವೆನು," ಎಂದು ಹೇಳಿದನು. [8]ಫಿಲಿಷ್ಟಿಯರ ಮುಖಂಡರು ಅಂಥ ಏಳು ಹಸಿ ತಂತಿಗಳನ್ನು ಅವಳಿಗೆ ತಂದುಕೊಟ್ಟರು. [9]ಅವಳು ಒಳಗಿನ ಕೋಣೆಯಲ್ಲಿ ಹೊಂಚುಗಾರರನ್ನಿಟ್ಟು ಅವುಗಳಿಂದ ಅವನನ್ನು ಕಟ್ಟಿ, "ಸಂಸೋನರೇ, ನಿಮ್ಮ ಮೇಲೆ ಫಿಲಿಷ್ಟಿಯರು ಬಂದರು," ಎಂದು ಕೂಗಿದಳು. ಅವನು ಬೆಂಕಿತಗಲಿದ ಸೆಣಬಿನ ದಾರವನ್ನೋ ಎಂಬಂತೆ ಆ ತಂತಿಗಳನ್ನು ಹರಿದು ಬಿಟ್ಟನು. ಹೀಗೆ ಅವನ ಶಕ್ತಿಯ ರಹಸ್ಯ ತಿಳಿಯದೆ ಹೋಯಿತು.

10 ದೆಲೀಲಳು ಮತ್ತೊಮ್ಮೆ ಸಂಸೋನನಿಗೆ, "ನೀವು ನನ್ನನ್ನು ವಂಚಿಸಿದಿರಿ; ಸುಳ್ಳಾಡದೆ ನಿಮ್ಮನ್ನು ಯಾವುದರಿಂದ ಕಟ್ಟಬಹುದೆಂಬುದನ್ನು ದಯವಿಟ್ಟು ನನಗೆ ತಿಳಿಸಿ," ಎಂದಳು. [11]ಅವನು ಅವಳಿಗೆ, "ಯಾವುದಕ್ಕೂ ಉಪಯೋಗಿಸದ ಹೊಸ ಹಗ್ಗಗಳಿಂದ ನನ್ನನ್ನು ಕಟ್ಟಿದರೆ ನಾನು ಬಲಹೀನನಾಗಿ ಬೇರೆ ಮನುಷ್ಯನಂತಾಗುವೆನು," ಎಂದನು. [12]ಅವಳು ಒಳಗಿನ ಕೋಣೆಯಲ್ಲಿ ಹೊಂಚುಗಾರರನ್ನಿರಿಸಿ ಹೊಸ ಹಗ್ಗಗಳನ್ನು ತೆಗೆದುಕೊಂಡು ಅವುಗಳಿಂದ ಅವನನ್ನು ಕಟ್ಟಿ, "ಸಂಸೋನರೇ, ಫಿಲಿಷ್ಟಿಯರು ಬಂದಿದ್ದಾರೆ" ಎಂದು ಕೂಗಲು ಅವನೆದ್ದು ತೋಳುಗಳಿಗೆ ಕಟ್ಟಿದ್ದ ಹಗ್ಗಗಳನ್ನು ದಾರವನ್ನೋ ಎಂಬಂತೆ ಹರಿದುಬಿಟ್ಟನು.

13 ಆಗ ದೆಲೀಲಳು ಸಂಸೋನನಿಗೆ, "ನೀವು ತಿರುಗಿ ನನ್ನನ್ನು ವಂಚಿಸಿದಿರಿ, ಸುಳ್ಳಾಡಿದಿರಿ; ನಿಮ್ಮನ್ನು ಯಾವುದರಿಂದ ಕಟ್ಟಬಹುದೆಂದು ತಿಳಿಸಿ," ಎನ್ನಲು ಅವನು, "ನನ್ನ ತಲೆಗೂದಲಿನ ಏಳು ಜಡೆಗಳನ್ನು ಮಗ್ಗದಲ್ಲಿ ನೇಯ್ದರೆ ಸಾಕು," ಎಂದು ಹೇಳಿದನು. [14]ಅವಳು ಅವನ ತಲೆಗೂದಲಿನ ಏಳು ಜಡೆಗಳನ್ನು ಗೂಟಕ್ಕೆ ಭದ್ರಮಾಡಿ, "ಸಂಸೋನರೇ, ಫಿಲಿಷ್ಟಿಯರು ಬಂದಿದ್ದಾರೆ" ಎಂದು ಕೂಗಿದಳು. ಅವನು ನಿದ್ರೆಯಿಂದ ಎಚ್ಚೆತ್ತು ಮಗ್ಗವನ್ನೂ ಮಗ್ಗದ ಗೂಟವನ್ನೂ ಕಿತ್ತುಕೊಂಡು ಹೋದನು.

15 ಆಕೆ ಇನ್ನೊಮ್ಮೆ ಅವನಿಗೆ, "ನಿನ್ನನ್ನು ಪ್ರೀತಿಸುತ್ತೇನೆ" ಎಂದು ನೀವು ನನಗೆ ಹೇಗೆ ಹೇಳಬಹುದು? ನಿಮ್ಮ ಮನಸ್ಸು ನನ್ನ ಮೇಲೆ ಇಲ್ಲವೇ ಇಲ್ಲ; ಮೂರು ಸಾರಿ ವಂಚಿಸಿದಿರಿ. ನಿಮಗೆ ಇಂಥ ಮಹಾಶಕ್ತಿ ಯಾವುದರಿಂದ ಬಂದಿತೆಂಬುದನ್ನು ನನಗೆ ತಿಳಿಸಲಿಲ್ಲ" ಎಂದಳು. [16]ಇದಲ್ಲದೆ, ಅವಳು ಅವನನ್ನು ದಿನದಿನವೂ ಮಾತಿನಿಂದ ಪೀಡಿಸುತ್ತಿದ್ದುದರಿಂದ ಅವನಿಗೆ ಸಾಯುವುದೇ ಒಳ್ಳೆಯದೆನ್ನುವಷ್ಟು ಬೇಸರ ಆಯಿತು. [17]ಕೊನೆಗೆ ಅವನು, "ಕ್ಷೌರಕತ್ತಿ ನನ್ನ ತಲೆಯ ಮೇಲೆ ಬಂದದ್ದಿಲ್ಲ; ನಾನು ಮಾತೃಗರ್ಭ ಬಿಟ್ಟಂದಿನಿಂದಲೇ ದೇವರಿಗೆ ಪ್ರತಿಷ್ಠಿತನಾದವನು. ನನ್ನ ತಲೆಯನ್ನು ಕ್ಷೌರಮಾಡಿದರೆ ನನ್ನ ಶಕ್ತಿ

ಹೋಗುವುದು; ಮತ್ತು ನಾನು ಬಲಹೀನನಾಗಿ ಬೇರೆ ಮನುಷ್ಯನಂತಾಗುವೆನು," ಎಂದು ತನ್ನ ಗುಟ್ಟನ್ನೆಲ್ಲಾ ಆಕೆಯ ಮುಂದೆ ಬಿಚ್ಚಿ ಹೇಳಿದನು. [18]ಅವನು ಇದ್ದದ್ದನ್ನು ಇದ್ದ ಹಾಗೆಯೇ ಹೇಳಿದನೆಂದು ದೆಲೀಲಳು ತಿಳಿದು ಫಿಲಿಷ್ಟಿಯ ಮುಖಂಡರ ಬಳಿಗೆ ದೂತರನ್ನು ಕಳುಹಿಸಿ ಅವರಿಗೆ, "ಇದೊಂದು ಸಾರಿ ಬನ್ನಿ; ಅವರು ನನಗೆ ತಮ್ಮ ಹೃದಯವನ್ನೆಲ್ಲಾ ಬಿಚ್ಚಿದ್ದಾರೆ," ಎಂದು ಹೇಳಿ ಕರೆಸಿದಳು. ಅವರು ಹಣವನ್ನು ತೆಗೆದುಕೊಂಡು ಆಕೆಯ ಬಳಿಗೆ ಬಂದರು. [19]ಆಕೆ ಸಂಸೋನನನ್ನು ತನ್ನ ತೊಡೆಯ ಮೇಲೆ ಮಲಗಿಸಿಕೊಂಡು ಅವನಿಗೆ ನಿದ್ರೆಹತ್ತಿದಾಗ ಒಬ್ಬ ಮನುಷ್ಯನಿಂದ ಅವನ ತಲೆಯ ಏಳು ಜಡೆಗಳನ್ನು ಬೋಳಿಸಿ ಅವನನ್ನು ದುರ್ಬಲಪಡಿಸಿದಳು. [20]ಅವನ ಶಕ್ತಿ ಇಂಗಿಹೋಯಿತು. ಆಗ ಅವಳು, "ಸಂಸೋನರೇ, ಫಿಲಿಷ್ಟಿಯರು ಬಂದಿದ್ದಾರೆ" ಎಂದು ಕೂಗಿದಳು. ಅವನು ಎಚ್ಚೆತ್ತು, "ಮುಂಚಿನಂತೆಯೇ ಈಗಲೂ ಕೊಸರಿಕೊಂಡು ಹೋಗುವೆನು" ಎಂದುಕೊಂಡನು. ಆದರೆ ಸರ್ವೇಶ್ವರ ತನ್ನನ್ನು ಬಿಟ್ಟು ಹೋಗಿ ಇದ್ದಾರೆಂಬುದು ಅವನಿಗೆ ತಿಳಿಯಲಿಲ್ಲ. [21]ಫಿಲಿಷ್ಟಿಯರು ಅವನನ್ನು ಹಿಡಿದು, ಕಣ್ಣುಗಳನ್ನು ಕಿತ್ತು, ಗಾಜಾಕ್ಕೆ ಒಯ್ದು, ಕಬ್ಬಿಣದ ಬೇಡಿಗಳನ್ನು ಹಾಕಿ, ಸೆರೆಮನೆಯಲ್ಲಿ ಬೀಸುವುದಕ್ಕೆ ಹಚ್ಚಿದರು. [22]ಅಷ್ಟರಲ್ಲಿ ಅವನ ತಲೆಗೂದಲುಗಳು ಬೆಳೆಯ ತೊಡಗಿದವು.

### ಸಂಸೋನನ ಮರಣ

23 ಶತ್ರುವಾದ ಸಂಸೋನನನ್ನು ತಮ್ಮ ಕೈಗೆ ಒಪ್ಪಿಸಿದ ತಮ್ಮ ದೇವರಾದ ದಾಗೋನನಿಗೆ ಮಹಾಬಲಿಯನ್ನು ಸಮರ್ಪಿಸಿ ಸಂತೋಷಪಡಬೇಕೆಂದು ಫಿಲಿಷ್ಟಿಯರ ಮುಖಂಡರು ಕೂಡಿ ಬಂದರು. [24]ಜನರು ಸಂಸೋನನನ್ನು ನೋಡಿ:

'ನಮ್ಮ ದೇಶವನ್ನು ಹಾಳುಮಾಡಿದ,
ನಮ್ಮಲ್ಲಿ ಅನೇಕರನ್ನು ಕೊಂದುಹಾಕಿದ,
ಈ ಶತ್ರುವನ್ನು ನಮ್ಮ ದೇವರೇ
ನಮ್ಮ ಕೈಗೊಪ್ಪಿಸಿದ,'

ಎಂದು ಗಾನ ಮಾಡಿದರು. [25]ಅವರು ಆನಂದ ಲಹರಿಯಲ್ಲಿದ್ದಾಗ, "ನಮ್ಮ ಮನೋರಂಜನೆಗಾಗಿ ಸಂಸೋನನನ್ನು ಕರೆದುಕೊಂಡು ಬನ್ನಿ," ಎಂದರು. ಅದರಂತೆಯೇ ಸಂಸೋನನನ್ನು ಸೆರೆಮನೆಯಿಂದ ಕರೆದುಕೊಂಡು ಬಂದರು. ಅವನು ಎರಡು ಸ್ತಂಭಗಳ ನಡುವೆ ನಿಂತು ಅವರೆಲ್ಲರ ಮನರಂಜಿಸಬೇಕಾಯಿತು. [26]ಆಗ ಸಂಸೋನನು ತನ್ನನ್ನು ಕೈ ಹಿಡಿದು ನಡೆಸುತ್ತಿದ್ದ ಹುಡುಗನಿಗೆ, "ನನ್ನ ಕೈಗಳನ್ನು ಬಿಡು; ನಾನು ಕೈಯಾಡಿಸಿ ಮನೆಗೆ ಆಧಾರವಾಗಿರುವ ಸ್ತಂಭಗಳನ್ನು ಹುಡುಕಿ ಅವುಗಳಿಗೆ ಸ್ವಲ್ಪ ಒರಗಿಕೊಳ್ಳುತ್ತೇನೆ," ಎಂದನು. [27]ಆ ಮನೆ ಸ್ತ್ರೀಪುರುಷರಿಂದ ಕಿಕ್ಕಿರಿದಿತ್ತು. ಫಿಲಿಷ್ಟಿಯರ ಅಧಿಪತಿಗಳೆಲ್ಲರೂ ಅಲ್ಲಿದ್ದರು. ಸಂಸೋನನು ತೋರಿಸುತ್ತಿದ್ದ ಮನೋರಂಜನಾ ಕಾರ್ಯಗಳನ್ನು ನೋಡುವುದಕ್ಕಾಗಿ ಬಂದವರಲ್ಲಿ ಸುಮಾರು ಮೂರುಸಾವಿರ ಮಂದಿ ಸ್ತ್ರೀಪುರುಷರು ಮಾಳಿಗೆಯ ಮೇಲಿದ್ದರು. [28]ಆಗ ಸಂಸೋನನು ಸರ್ವೇಶ್ವರನಿಗೆ, "ಪ್ರಭು ಸರ್ವೇಶ್ವರಾ, ಫಿಲಿಷ್ಟಿಯರು ಕಿತ್ತು ಹಾಕಿದ ನನ್ನ ಎರಡು ಕಣ್ಣುಗಳಲ್ಲಿ ಒಂದಕ್ಕಾದರು ನಾನು ಅವರಿಗೆ ಮುಯ್ಯಿ ತೀರಿಸುವ ಹಾಗೆ ನನ್ನನ್ನು ಈ ಸಾರಿ ಬಲಪಡಿಸಿರಿ," ಎಂದು ಮೊರೆಯಿಟ್ಟನು. [29]ಆ ಮನೆಯ ಆಧಾರ ಸ್ತಂಭಗಳಲ್ಲಿ ಒಂದನ್ನು ಬಲಗೈಯಿಂದಲೂ ಇನ್ನೊಂದನ್ನು ಎಡಗೈಯಿಂದಲೂ ಹಿಡಿದು ಅವುಗಳನ್ನು ಒತ್ತಿ, [30]"ನಾನು ಫಿಲಿಷ್ಟಿಯರ ಸಂಗಡ ಸಾಯುವೆನು," ಎಂದು ಹೇಳಿ ಬಲವಾಗಿ ಬಾಗಿಕೊಂಡನು. ಆ ಮನೆಯು ಅಧಿಪತಿಗಳ ಮೇಲೂ ಅಲ್ಲಿ ಬಂದಿದ್ದ ಎಲ್ಲಾ ಜನರ ಮೇಲೂ ಬಿದ್ದಿತು. ಅವನು ಜೀವದಿಂದಿದ್ದಾಗ ಕೊಂದುಹಾಕಿದವರಿಗಿಂತ ಸಾಯುವಾಗ ಕೊಂದವರ ಸಂಖ್ಯೆಯೇ ಹೆಚ್ಚಿತ್ತು.

31 ಅವನ ಬಂಧುಗಳೂ ತಂದೆಯ ಮನೆಯವರೆಲ್ಲರೂ ಬಂದು ಅವನ ಶವವನ್ನು ಎತ್ತಿಕೊಂಡು ಹೋಗಿ ಚೊರ್ಗಕ್ಕೂ ಎಷ್ಟಾವೋಲಿಗೂ ಮಧ್ಯದಲ್ಲಿದ್ದ ಅವನ ತಂದೆ ಮಾನೋಹನ ಸಮಾಧಿಯಲ್ಲಿ ಸ್ಥಾಪನೆಮಾಡಿದರು. ಅವನು ಇಸ್ರಯೇಲರನ್ನು ಇಪ್ಪತ್ತು ವರ್ಷ ಪಾಲಿಸಿದನು.

## ನ್ಯಾಯಸ್ಥಾಪಕರ ಕಾಲದಲ್ಲಿ ನಡೆದ ಎರಡು ವಿಶೇಷ ಘಟನೆಗಳು

**17** ಎಫ್ರಯಿಮ್ ಬೆಟ್ಟದ ಪ್ರಾಂತ್ಯದಲ್ಲಿ ಮೀಕ ಎಂಬ ಒಬ್ಬ ಮನುಷ್ಯನು ಇದ್ದನು. 2ಅವನು ಒಂದು ದಿನ
ತನ್ನ ತಾಯಿಗೆ, "ಅಮ್ಮಾ, ಕಳವಾಗಿದ್ದ ನಿನ್ನ ಸಾವಿರದ ನೂರು ಬೆಳ್ಳಿ ನಾಣ್ಯಗಳಿಗಾಗಿ ನೀನು ನನಗೆ
ಕೇಳಿಸುವಂತೆ ಶಪಿಸಿದೆಯಲ್ಲವೆ? ಇಗೋ, ಆ ನಾಣ್ಯಗಳು ನನ್ನ ಹತ್ತಿರವೇ ಇವೆ; ನಾನೇ
ತೆಗೆದುಕೊಂಡಿದ್ದೇನೆ," ಎಂದು ಹೇಳಿದನು. ಆಕೆ, "ನನ್ನ ಮಗನೇ, ಸರ್ವೇಶ್ವರಸ್ವಾಮಿ ನಿನ್ನನ್ನು
ಆಶೀರ್ವದಿಸಲಿ!" ಎಂದಳು. 3ಅವನು ಆ ಸಾವಿರದ ನೂರು ಬೆಳ್ಳಿ ನಾಣ್ಯಗಳನ್ನು ತನ್ನ ತಾಯಿಗೆ ಹಿಂದಕ್ಕೆ
ಕೊಟ್ಟನು. ಆಕೆ, "ನನ್ನ ಮಗನಿಗೆ ಹಿತವಾಗಲೆಂದು ಈ ಹಣವನ್ನು ಸರ್ವೇಶ್ವರನಿಗೆ ಹರಕೆಮಾಡಿದ್ದೇನೆ.
ಇದರಿಂದ ಒಂದು ಎರಕದ ವಿಗ್ರಹವನ್ನು ಮಾಡಿಸಿ ನಿನ್ನ ವಶಕ್ಕೆ ಕೊಡುತ್ತೇನೆ," ಎಂದು ಹೇಳಿ 4ಮಗನು
ಹಿಂದಕ್ಕೆ ಕೊಟ್ಟ ನಾಣ್ಯಗಳಲ್ಲಿ ಇನ್ನೂರು ನಾಣ್ಯಗಳನ್ನು ತೆಗೆದು ಅಕ್ಕಸಾಲಿಗನಿಗೆ ಕೊಟ್ಟಳು. ಅವನು
ಅವುಗಳಿಂದ ಕೆತ್ತನೆಯ ಮತ್ತು ಎರಕದ ವಿಗ್ರಹಗಳನ್ನು ಮಾಡಿಕೊಟ್ಟನು. ಮೀಕನು ಅದನ್ನು ತನ್ನ
ಮನೆಯಲ್ಲೇ ಇಟ್ಟುಕೊಂಡನು.

5 ಈ ಮೀಕನು 'ಏಫೋದ'ನ್ನೂ ವಿಗ್ರಹಗಳನ್ನೂ ಮಾಡಿಸಿ ಅವುಗಳನ್ನು ತಾನು ಕಟ್ಟಿಸಿದ
ದೇವಸ್ಥಾನದಲ್ಲಿಟ್ಟು ತನ್ನ ಕುಮಾರರಲ್ಲೊಬ್ಬನನ್ನು ಅರ್ಚಕ ಸೇವೆಗೆ ಪ್ರತಿಷ್ಠಿಸಿದನು. 6ಆ ಕಾಲದಲ್ಲಿ
ಇಸ್ರಯೇಲರಲ್ಲಿ ಅರಸನಿರಲಿಲ್ಲ. ಪ್ರತಿಯೊಬ್ಬನು ಮನಸ್ಸಿಗೆ ಬಂದಹಾಗೆ ನಡೆಯುತ್ತಾ ಇದ್ದನು.

7 ಯೆಹೂದದ ಬೆತ್ಲೆಹೇಮಿನವನೂ ಯೆಹೂದ ಕುಲದವನೂ ಆಗಿದ್ದ ಒಬ್ಬ ಯೌವನಸ್ಥನಾದ
ಲೇವಿ, 8ಜೀವನಕ್ಕೆ ಅನುಕೂಲವಾದ ಬೇರೆಲ್ಲಾದರು ವಾಸಿಸಬೇಕೆಂದು ಸ್ವಂತ ಊರನ್ನು ಬಿಟ್ಟು
ಪ್ರಯಾಣಮಾಡುತ್ತಾ ಎಫ್ರಯಿಮ್ ಬೆಟ್ಟದ ಸೀಮೆಯಲ್ಲಿದ್ದ ಮೀಕನ ಮನೆಗೆ ಬಂದನು. 9"ನೀನು ಎಲ್ಲಿಂದ
ಬಂದೆ?' ಎಂದು ಮೀಕನು ಅವನನ್ನು ಕೇಳಿದನು. ಅವನು, "ನಾನು ಯೆಹೂದದ ಬೆತ್ಲೆಹೇಮಿನವನಾದ
ಲೇವಿಯನು; ಜೀವನಕ್ಕೆ ಅನುಕೂಲವಾದ ಬೇರೆಲ್ಲಾದರು ವಾಸಿಸಬೇಕೆಂದು ಹೊರಟಿದ್ದೇನೆ" ಎಂದು
ಉತ್ತರಕೊಟ್ಟನು. 10ಮೀಕನು ಅವನಿಗೆ, "ನೀನು ನಮ್ಮಲ್ಲಿರು; ನಮಗೆ ತಂದೆಯೂ ಯಾಜಕನೂ ಆಗಿರು.
ನಿನಗೆ ವರ್ಷಕ್ಕೆ ಹತ್ತು ಬೆಳ್ಳಿ ನಾಣ್ಯಗಳನ್ನು, ಉಡಿಗೆತೊಡಿಗೆಯನ್ನು ಹಾಗು ಆಹಾರವನ್ನು ಕೊಡುತ್ತೇನೆ,"
ಎನ್ನಲು 11ಆ ಲೇವಿ ಒಪ್ಪಿಕೊಂಡು ಅಲ್ಲೇ ವಾಸಮಾಡಿದನು. ಹೀಗೆ ಆ ಯೌವನಸ್ಥನು ಅವನ ಮಕ್ಕಳಲ್ಲಿ
ಒಬ್ಬನಂತಾದನು. 12ಮೀಕನು ಯೌವನಸ್ಥನಾದ ಆ ಲೇವಿಯನನ್ನು ಯಾಜಕ ಸೇವೆಗಾಗಿ ಪ್ರತಿಷ್ಠಿಸಿ ತನ್ನ
ಮನೆಯಲ್ಲೇ ಇಟ್ಟುಕೊಂಡನು. "ಒಬ್ಬ ಲೇವಿ ನನ್ನ ಮನೆಯಲ್ಲಿ ಯಾಜಕನಾಗಿರುವುದರಿಂದ ಸರ್ವೇಶ್ವರ
ನನ್ನನ್ನು ಆಶೀರ್ವದಿಸುವರೆಂದು ಬಲ್ಲೆ," ಎಂದುಕೊಂಡನು.

## ಮೀಕ ಮತ್ತು ದಾನ್ ಕುಲದವರು

**18** ಆ ಕಾಲದಲ್ಲಿ ಇಸ್ರಯೇಲರಿಗೆ ಅರಸನಿರಲಿಲ್ಲ. ದಾನ್‌ಕುಲದವರಿಗೆ ಆವರೆಗೂ ಇಸ್ರಯೇಲರಲ್ಲಿ
ಆಸ್ತಿಪಾಸ್ತಿ ಸಿಕ್ಕದೆ ಇದ್ದುದ್ದರಿಂದ ಅವರು ತಮಗಾಗಿ ವಾಸಸ್ಥಳವನ್ನು ಹುಡುಕುತ್ತಿದ್ದರು. 2ಚೊರ್ಗಾ,
ಎಷ್ಟಾವೋಲ್ ಎಂಬ ಊರುಗಳಿಂದ ತಮ್ಮ ಕುಲದಲ್ಲಿ ಐದು ಮಂದಿ ಪರಾಕ್ರಮಶಾಲಿಗಳಾದ
ಗೂಢಚಾರರನ್ನು ಆರಿಸಿ ಅವರಿಗೆ, "ನೀವು ಹೋಗಿ (ಲಯಿಷ್) ದೇಶವನ್ನು ಸಂಚರಿಸಿ ನೋಡಿ ಬನ್ನಿ"
ಎಂದು ಆಜ್ಞಾಪಿಸಿ ಕಳುಹಿಸಿದರು. ಇವರು ಪ್ರಯಾಣ ಮಾಡುತ್ತಾ ಎಫ್ರಯಿಮ್ ಬೆಟ್ಟದ ಸೀಮೆಯಲ್ಲಿ ಇದ್ದ
ಮೀಕನ ಮನೆಗೆ ಬಂದು ಇಳಿದುಕೊಂಡರು. 3ಇವರು ಮೀಕನ ಮನೆಯ ಹತ್ತಿರದಲ್ಲಿ ಆ ಯೌವನಸ್ಥನಾದ
ಲೇವಿಯನು ಮಾತಾಡುವುದನ್ನು ಕೇಳಿ ಗುರುತು ಹಿಡಿದು ಅವನ ಬಳಿಗೆ ಹೋಗಿ, "ನಿನ್ನನ್ನು ಇಲ್ಲಿಗೆ
ಕರೆತಂದವರಾರು? ಇಲ್ಲಿ ಏನು ಕೆಲಸ ಮಾಡುತ್ತಿರುವೆ? ಏನು ಸಂಬಳ ಸಿಕ್ಕುತ್ತಿದೆ?" ಎಂದು ಅವನನ್ನು
ವಿಚಾರಿಸಿದರು. ಅವನು, 4ಮೀಕನು ತನಗೆ ಇಂಥಿಂಥವುಗಳನ್ನು ಸಂಬಳವಾಗಿ ಕೊಡುತ್ತಾನೆಂದೂ ತಾನು
ಅವನ ಯಾಜಕನಾಗಿದ್ದೇನೆಂದೂ ಹೇಳಿದನು. 5ಆಗ ಅವರು, "ದಯವಿಟ್ಟು ನಮ್ಮ ಪ್ರಯಾಣ ಸಫಲ
ಆಗುವುದೋ ಇಲ್ಲವೋ ಎಂಬುದನ್ನು ದೇವರ ಸನ್ನಿಧಿಯಲ್ಲಿ ವಿಚಾರಿಸು," ಎಂದು ಬೇಡಿಕೊಂಡರು.
6ಅವನು, "ಸಮಾಧಾನದಿಂದ ಹೋಗಿ, ಸರ್ವೇಶ್ವರ ನಿಮ್ಮ ಪ್ರಯಾಣವನ್ನು ಆಶೀರ್ವದಿಸುವರು," ಎಂದನು.

7 ಆ ಐದು ಮಂದಿ ಹೊರಟು ಲಯಿಷಿಗೆ ಬಂದರು. ಇಲ್ಲಿನ ಜನರು ನಿರ್ಭೀತರಾಗಿ
ಚೀದೋನ್ಯರಂತೆ ಸುಖಸಮಾಧಾನಗಳಿಂದ ಜೀವಿಸುತ್ತಾರೆ; ಇವರನ್ನು ಅಡಗಿಸುವ ಅಧಿಕಾರಿಗಳು
ದೇಶದಲ್ಲಿಲ್ಲ. ಇವರು ಚೀದೋನ್ಯರಿಗೆ ದೂರವಾಗಿದ್ದು ಯಾರೊಡನೆಯೂ ಬಳಕೆಯಿಲ್ಲದವರು ಎಂಬುದನ್ನು
ತಿಳಿದುಕೊಂಡು ಹಿಂದಿರುಗಿ 8ಚೊರ್ಗಾ, ಎಷ್ತಾವೋಲ್ ಎಂಬ ಊರುಗಳಲ್ಲಿ ಇರುವ ತಮ್ಮ ಬಂಧುಗಳ
ಬಳಿಗೆ ಬಂದರು. ಆ ಬಂಧುಗಳು, "ನೀವು ಯಾವ ವರ್ತಮಾನ ತಂದಿದ್ದೀರಿ?" ಎಂದು ಅವರನ್ನು ಕೇಳಲು
9ಅವರು, "ಏಳಿ, ಅವರಿಗೆ ವಿರುದ್ಧ ಯುದ್ಧಕ್ಕೆ ಹೋಗೋಣ. ನಾವು ಆ ದೇಶವನ್ನು ನೋಡಿದೆವು; ಅದು
ಬಹು ಉತ್ತಮ ದೇಶ. ನೀವು ಸುಮ್ಮನೆ ಕುಳಿತುಕೊಳ್ಳುವುದೇಕೆ? ತಡಮಾಡದೆ ಹೊರಡಿ; ಆ ದೇಶವನ್ನು
ನಮ್ಮದಾಗಿಸಿಕೊಳ್ಳೋಣ. 10ನೀವು ಅಲ್ಲಿಗೆ ಹೋಗುವುದಾದರೆ ಅಲ್ಲಿನ ಜನರು ನಿರ್ಭಯದಿಂದ
ಜೀವಿಸುವವರೆಂದೂ ಅವರ ದೇಶ ಬಹು ವಿಸ್ತಾರವಾಗಿದೆಯೆಂದೂ ತಿಳಿದುಕೊಳ್ಳುವಿರಿ. ದೇವರು ಅದನ್ನು
ನಿಮ್ಮ ಕೈಗೆ ಒಪ್ಪಿಸಿದ್ದಾರೆ. ಅದರಲ್ಲಿ ದೊರಕದಿರುವ ಪದಾರ್ಥಗಳು ಲೋಕದಲ್ಲೇ ಇಲ್ಲ," ಎಂದರು.
11 ಆಗ ಚೊರ್ಗಾ, ಎಷ್ತಾವೋಲ್ ಊರುಗಳಿಂದ ಆರುನೂರು ಮಂದಿ ದಾನ್‌ಕುಲದವರು
ಯುದ್ಧಸನ್ನದ್ಧರಾಗಿ ಹೊರಟರು. 12ಗುಡ್ಡಹತ್ತಿ ಯೆಹೂದದ ಕಿರ್ಯತ್ಯಾರೀಮಿನ ಬಳಿಯಲ್ಲಿ
ಇಳಿದುಕೊಂಡರು. ಆದುದರಿಂದ ಆ ಸ್ಥಳಕ್ಕೆ ಇಂದಿನವರೆಗೂ 'ದಾನ್ಯರ ಪಾಳೆಯ' ಎಂಬ ಹೆಸರಿದೆ; ಅದು
ಕಿರ್ಯತ್ಯಾರೀಮಿನ ಪಶ್ಚಿಮದಲ್ಲಿದೆ. 13ಅವರು ಅಲ್ಲಿಂದ ಮುಂದಕ್ಕೆ ಪ್ರಯಾಣ ಮಾಡಿ ಎಫ್ರಯಿಮ್
ಪರ್ವತಪ್ರದೇಶದಲ್ಲಿದ್ದ ಮೀಕನ ಮನೆಯ ಹತ್ತಿರಕ್ಕೆ ಬಂದರು. 14ಲಯಿಷ್ ದೇಶವನ್ನು ಸಂಚರಿಸಿ
ನೋಡುವುದಕ್ಕೆ ಹೋಗಿದ್ದ ಐದು ಮಂದಿ ತಮ್ಮ ಬಂಧುಗಳಿಗೆ, "ಈ ಗ್ರಾಮದಲ್ಲಿ ಒಂದು 'ಏಫೋದು',
ದೇವತಾಪ್ರತಿಮೆಗಳು, ಕೆತ್ತನೆಯ ಮತ್ತು ಎರಕದ ವಿಗ್ರಹಗಳು ಇರುತ್ತವೆ ಎಂಬುದು ನಿಮಗೆ ಗೊತ್ತುಂಟೇ?
15ಈ ವಿಷಯದಲ್ಲಿ ಏನು ಮಾಡಬೇಕೆಂಬುದನ್ನು ಆಲೋಚಿಸಿರಿ," ಎಂದು ಹೇಳಿ ಅಲ್ಲಿಂದ ಮೀಕನ
ಮನೆಯಲ್ಲಿದ್ದ ಆ ಯೌವನಸ್ಥನಾದ ಲೇವಿಯನ ಬಳಿಗೆ ಬಂದರು. ಅವನ ಯೋಗಕ್ಷೇಮವನ್ನು
ವಿಚಾರಿಸತೊಡಗಿದರು. 16ಇಷ್ಟರಲ್ಲಿ ಯುದ್ಧಸನ್ನದ್ಧರಾದ ಆರು ನೂರು ಮಂದಿ ದಾನ್ಯರು ಬಂದು ಬಾಗಿಲಲ್ಲಿ
ನಿಂತರು. 17ಯಾಜಕನೂ ಬಂದು ಇವರೊಡನೆ ಬಾಗಿಲಲ್ಲಿ ನಿಂತಿದ್ದಾಗ ಆ ಐದು ಮಂದಿ ಮನೆಯನ್ನು
ಹೊಕ್ಕು ಕೆತ್ತನೆಯ ಮತ್ತು ಎರಕದ ವಿಗ್ರಹಗಳನ್ನೂ 'ಏಫೋದ'ನ್ನೂ ದೇವತಾ ಪ್ರತಿಮೆಗಳನ್ನೂ
ತೆಗೆದುಕೊಂಡರು. 18ಅವುಗಳನ್ನು ಅವರು ಮೀಕನ ಮನೆಯನ್ನು ಹೊಕ್ಕು ತೆಗೆದುಕೊಂಡು ಬರುವಾಗ
ಯಾಜಕನು ಕಂಡು ಅವರಿಗೆ, "ನೀವು ಮಾಡಿದ್ದೇನು?" ಎಂದನು. 19ಅವರು ಅವನಿಗೆ, "ಬಾಯಿಮುಚ್ಚಿ
ಸುಮ್ಮನಿರಿ, ನಮ್ಮ ಜೊತೆಯಲ್ಲಿ ಬಂದು ನಮಗೆ ತಂದೆಯೂ ಯಾಜಕನೂ ಆಗಿರು. ಒಂದೇ ಒಂದು ಮನೆಗೆ
ಯಾಜಕನಾಗಿರುವುದು ಉತ್ತಮವೋ ಅಥವಾ ಇಸ್ರಯೇಲರ ಒಂದು ಕುಲಕ್ಕೂ ಗೋತ್ರಕ್ಕೂ
ಯಾಜಕನಾಗಿರುವುದು ಉತ್ತಮವೋ?" ಎಂದರು. 20ಯಾಜಕನು ಈ ಮಾತನ್ನು ಕೇಳಿ ಸಂತೋಷಪಟ್ಟು
ಏಫೋದನ್ನೂ ದೇವತಾಪ್ರತಿಮೆಗಳನ್ನೂ ಕೆತ್ತನೆಯ ವಿಗ್ರಹವನ್ನೂ ತೆಗೆದುಕೊಂಡು ಅವರೊಡನೆ ಬಂದನು.
21ತರುವಾಯ ಅವರು ತಮ್ಮ ಮಡದಿ ಮಕ್ಕಳನ್ನೂ ಕುರಿದನ ಮೊದಲಾದ ಸೊತ್ತನ್ನೂ ಮುಂದಾಗಿ ಕಳುಹಿಸಿ
ತಾವೂ ಹಿಂದಿನಿಂದ ಹೊರಟರು.
22 ಅವರು ಮೀಕನ ಮನೆಗೆ ದೂರವಾದ ಮೇಲೆ ಮೀಕನೂ ಅವನ ನೆರೆಹೊರೆಯವರೆಲ್ಲರೂ
ದಾನರನ್ನು ಹಿಂದಟ್ಟಿದರು. 23ಅವರ ಸಮೀಪಕ್ಕೆ ಹೋಗಿ ಅವರನ್ನು ಕೂಗಿದರು. ದಾನ್ಯರು ಹಿಂದಿರುಗಿ
ನೋಡಿ ಮೀಕನಿಗೆ, "ನಿನಗೇನಾಯಿತು? ಗುಂಪುಕೂಡಿಸಿಕೊಂಡು ಬಂದದ್ದೇಕೆ?" ಎಂದು ಕೇಳಿದರು.
24ಅವನು, "ನೀವು ಯಾಜಕನನ್ನೂ ನಾನು ಮಾಡಿಸಿಕೊಂಡ ದೇವರುಗಳನ್ನೂ ಅಪಹರಿಸಿಕೊಂಡಿದ್ದೀರಿ,
ನನಗೆ ಇನ್ನೇನಿದೆ; ಹೀಗಿರಲಾಗಿ ನಿನಗೇನಾಯಿತೆಂದು ನೀವೇ ನನ್ನನ್ನು ಕೇಳುವುದು ಹೇಗೆ?" ಎಂದನು.
25ದಾನ್ಯರು ಅವನಿಗೆ, "ನಮ್ಮಲ್ಲಿ ಕೆಲವರು ಸಿಟ್ಟಿನವರು. ಅವರು ನಿಮ್ಮ ಮೇಲೆ ಬಿದ್ದರೆ ನೀನೂ ನಿನ್ನ
ಮನೆಯವರೂ ಪ್ರಾಣನಷ್ಟ ಪಡೆವಿರಿ. ಆದುದರಿಂದ ಬಾಯಿಮುಚ್ಚಿಕೊಂಡು ಹೋಗಿ," ಎಂದು ಹೇಳಿ
ಮುಂದೆ ನಡೆದರು. 26ಅವರು ತನಗಿಂಥ ಬಲಿಷ್ಠರೆಂದು ಮೀಕನು ತಿಳಿದು ಹಿಂದಿರುಗಿ ಮನೆಗೆ ಹೋದನು.
27 ದಾನ್ಯರು ಮೀಕನು ಮಾಡಿಸಿದ್ದ ವಿಗ್ರಹಗಳನ್ನೂ ಅವನ ಯಾಜಕನನ್ನೂ ಅಪಹರಿಸಿಕೊಂಡು,
ಲಯಿಷಿಗೆ ಹೋಗಿ, ಅಲ್ಲಿ ಸುಖದಿಂದಲೂ ನಿರ್ಭಯದಿಂದಲೂ ವಾಸವಾಗಿದ್ದ ಅಲ್ಲಿನ ಜನರ ಮೇಲೆ ಬಿದ್ದು

ಅವರನ್ನು ಕತ್ತಿಯಿಂದ ಸಂಹರಿಸಿ ಅವರ ಪಟ್ಟಣವನ್ನು ಸುಟ್ಟುಬಿಟ್ಟರು. [28]ಆ ಪಟ್ಟಣ ಚೀದೋನಿಗೆ ದೂರವಾಗಿದ್ದರಿಂದಲೂ ಸಮೀಪದಲ್ಲಿ ಪರಿಚಯಸ್ಥರಾರೂ ಇಲ್ಲದ್ದರಿಂದಲೂ ಅವರಿಗೆ ಸಹಾಯ ದೊರಕಲಿಲ್ಲ. ಬೇತ್‌ರೆಹೋಬಿನ ತಗ್ಗಿನಲ್ಲಿದ್ದ ಈ ಪಟ್ಟಣವನ್ನು ದಾನ್ಯರು ತಿರುಗಿ ಕಟ್ಟಿಸಿ ಅದರಲ್ಲಿ ವಾಸಿಸಿದರು. [29]ಮುಂಚೆ ಲಯಿಷ್ ಎಂಬ ಹೆಸರಿದ್ದ ಆ ಪಟ್ಟಣಕ್ಕೆ ಈಗ 'ದಾನ್' ಎಂದು ಹೆಸರಿಟ್ಟರು. ದಾನ್ ಎಂಬುದು ಇವರ ಮೂಲ ಪುರುಷನೂ ಇಸ್ರಯೇಲನ ಮಗನೂ ಆದವನ ಹೆಸರು.

30 ಇದಲ್ಲದೆ ದಾನ್ಯರು ಆ ವಿಗ್ರಹವನ್ನು ತಮ್ಮ ಪಟ್ಟಣದಲ್ಲಿಟ್ಟರು. ಇಸ್ರಯೇಲರು ಸೆರೆಗೆ ಹೋಗುವವರೆಗೆ ಮೋಶೆಯ ಮೊಮ್ಮಗನೂ ಗೇರ್ಷೋಮನ ಮಗನೂ ಆದ ಯೆಹೋನಾತಾನನೂ ಅವನ ವಂಶದವರೂ ದಾನ್ಯರಿಗೆ ಯಾಜಕರಾಗಿದ್ದರು. [31]ಶಿಲೋವಿನಲ್ಲಿ ದೇವಸ್ಥಾನವಿದ್ದ ಕಾಲದಲ್ಲೆಲ್ಲಾ ದಾನ್ಯರಲ್ಲಿ ಮೀಕನು ಮಾಡಿಸಿದ ವಿಗ್ರಹವಿತ್ತು.

### ಗಿಬೆಯದವರ ಪೈಶಾಚಿಕಕೃತ್ಯ

**19** ಆ ಕಾಲದಲ್ಲಿ ಇಸ್ರಯೇಲರಿಗೆ ಅರಸನಿರಲಿಲ್ಲ. ಎಫ್ರಯಿಮ್ ಪರ್ವತ ಪ್ರದೇಶದ ಒಂದು ಮೂಲೆಯಲ್ಲಿ ಯಾರೋ ಒಬ್ಬ ಲೇವಿಯನು ಪ್ರವಾಸಿಯಾಗಿದ್ದನು. ಯೆಹೂದದ ಬೆತ್ಲೆಹೇಮಿನವಳಾದ ಒಬ್ಬ ಸ್ತ್ರೀ ಅವನಿಗೆ ಉಪಪತ್ನಿಯಾಗಿದ್ದಳು.
[2]ಈಕೆ ಇವನನ್ನು ಬಿಟ್ಟು ವೇಶ್ಯೆಯಾಗಿ ಯೆಹೂದದ ಬೆತ್ಲೆಹೇಮಿನಲ್ಲಿದ್ದ ತನ್ನ
ತೌರುಮನೆಗೆ ಹೋಗಿ ಅಲ್ಲಿ ನಾಲ್ಕು ತಿಂಗಳು ಇದ್ದಳು. [3]ಅನಂತರ ಆಕೆಯ ಗಂಡನಾದ ಆ ಲೇವಿಯನು
ಆಕೆಯನ್ನು ಪ್ರೀತಿಯಿಂದ ಮಾತಾಡಿಸಿ ಮತ್ತೆ ಮನೆಗೆ ಕರೆದು ತರಬೇಕೆಂದು ಒಬ್ಬ ಸೇವಕನನ್ನೂ ಎರಡು
ಕತ್ತೆಗಳನ್ನೂ ತೆಗೆದುಕೊಂಡು ಅಲ್ಲಿಗೆ ಹೋದನು. ಆಕೆ ಅವನನ್ನು ತನ್ನ ತೌರುಮನೆಯಲ್ಲಿ ಸೇರಿಸಿಕೊಂಡಳು.
ಆಕೆಯ ತಂದೆಯೂ ಅವನನ್ನು ನೋಡಿ ಸಂತೋಷ ಪಟ್ಟನು. [4]ಆ ಸ್ತ್ರೀ ಹಾಗು ಅವನ ಮಾವ ಅವನನ್ನು
ಮೂರು ದಿವಸ ಅಲ್ಲೇ ನಿಲ್ಲಿಸಿಕೊಂಡರು. ಅವನೂ ಅವನ ಸೇವಕನೂ ಅನ್ನಪಾನಗಳನ್ನು ತೆಗೆದುಕೊಳ್ಳುತ್ತಾ
ಅಲ್ಲಿದ್ದರು. [5]ಅವರು ನಾಲ್ಕನೆಯ ದಿನ ಬೆಳಿಗ್ಗೆ ಎದ್ದು ಹೋಗುವುದಕ್ಕೆ ಸಿದ್ಧರಾದರು. ಆ ಸ್ತ್ರೀಯ ತಂದೆ
ಅಳಿಯನಿಗೆ, "ಮೊದಲು ಸ್ವಲ್ಪ ಊಟಮಾಡಿ ಚೇತರಿಸಿಕೊ, ಆಮೇಲೆ ಹೋಗಬಹುದು," ಎಂದು
ಹೇಳಿದನು. [6]ಅವರಿಬ್ಬರೂ ಕುಳಿತು ಅನ್ನಪಾನಗಳನ್ನು ತೆಗೆದುಕೊಂಡರು. ಊಟವಾದ ಮೇಲೆ ಆ ಸ್ತ್ರೀಯ
ತಂದೆ ಪುನಃ ಅವನಿಗೆ, "ದಯವಿಟ್ಟು ಈ ರಾತ್ರಿ ಇಲ್ಲೇ ಇದ್ದು ಸಂತೋಷಪಡು," ಎಂದು ಹೇಳಿದರೂ
ಅವನು ಹೊರಡಲು ಸಿದ್ಧನಾದನು. [7]ಆದರೆ ಅವನ ಮಾವ ಬಹಳ ಬಲಾತ್ಕಾರ ಮಾಡಿದ್ದರಿಂದ ಆ ರಾತ್ರಿ
ಅಲ್ಲೇ ತಂಗಿದನು. [8]ಅವನು ಐದನೆಯ ದಿನ ಬೆಳಿಗ್ಗೆ ಎದ್ದು ಹೋಗುವುದಕ್ಕೆ ಸಿದ್ಧರಾಗಲು ಆ ಸ್ತ್ರೀಯ ತಂದೆ,
"ದಯವಿಟ್ಟು ಇಳಿಹೊತ್ತಿನವರೆಗೆ ಇಲ್ಲೇ ಇದ್ದು ವಿಶ್ರಮಿಸಿಕೋ," ಎಂದು ಅವನನ್ನು ಬೇಡಿಕೊಳ್ಳಲು ಅವನು
ಮತ್ತೆ ಊಟಕ್ಕೆ ನಿಂತನು. [9]ಅನಂತರ ಅವನು, ಅವನ ಉಪಪತ್ನಿ ಹಾಗು ಸೇವಕನು ಹೋಗುವುದಕ್ಕೆ
ಸಿದ್ಧರಾಗಲು ಆ ಸ್ತ್ರೀಯ ತಂದೆ ಅಳಿಯನಿಗೆ, "ಹೊತ್ತುಮೀರಿತು; ಸಂಜೆ ಆಯಿತು. ದಯವಿಟ್ಟು ಈದಿನ
ರಾತ್ರಿ ಇಲ್ಲೇ ಇರು; ನೋಡು, ಸಂಜೆಯಾಗಿಹೋಯಿತು. ಈ ರಾತ್ರಿ ಇಲ್ಲಿದ್ದು ನಮ್ಮೊಡನೆ ಸಂತೋಷಪಡು;
ನಾಳೆ ಬೆಳಿಗ್ಗೆ ಎದ್ದು ನಿನ್ನ ಮನೆಗೆ ಹೋಗಬಹುದು" ಎಂದು ಬೇಡಿಕೊಂಡನು. [10]ಆದರೆ ಆ ಮನುಷ್ಯ
ಒಪ್ಪದೆ ತನ್ನ ಎರಡು ಕತ್ತೆಗಳಿಗೆ ತಡಿಹಾಕಿಸಿ ಉಪಪತ್ನಿಯನ್ನು ಕರೆದುಕೊಂಡು ಹೊರಟನು. [11]ಅವರು
ಯೆಬೂಸಿಯರ ಊರಾದ ಜೆರುಸಲೇಮಿನ ಸಮೀಪಕ್ಕೆ ಬಂದಾಗ ಹೊತ್ತು ಮುಳುಗುವ ಕಾಲವಾದುದರಿಂದ
ಸೇವಕನು ದಣಿಗೆ, "ದಯವಿಟ್ಟು ಬನ್ನಿ, ನಾವು ಯೆಬೂಸಿಯರ ಈ ಪಟ್ಟಣಕ್ಕೆ ಹೋಗಿ ಅಲ್ಲಿ ರಾತ್ರಿಯನ್ನು
ಕಳೆಯೋಣ," ಎಂದನು. [12]ಆಗ ಆ ದಣಿ, "ನಾವು ಇಸ್ರಯೇಲರಲ್ಲದ ಅನ್ಯರ ಪಟ್ಟಣದಲ್ಲಿ ತಂಗಬಾರದು;
ಗಿಬೆಯಕ್ಕೆ ಹೋಗೋಣ," ಎಂದನು. [13]ಅವನು ಮತ್ತೆ ತನ್ನ ಆಳಿಗೆ, "ನಾವು ಬೇಗನೆ ಹೋಗಿ ಮುಂದಿರುವ
ಗಿಬೆಯದಲ್ಲಾಗಲಿ, ದಾಮದಲ್ಲಾಗಲಿ ತಂಗೋಣ ಬಾ," ಎಂದನು. [14]ಹೀಗೆ ಅವರು ಮುಂದೆ ಸಾಗಿ
ಬೆನ್ಯಾಮೀನ್ಯರ ಗಿಬೆಯ ಊರಿನ ಸಮೀಪಕ್ಕೆ ಬಂದಾಗ ಸೂರ್ಯನು ಮುಳುಗಿದ್ದನು. [15]ಆದುದರಿಂದ
ಅವರು ತಂಗುವುದಕ್ಕಾಗಿ ಗಿಬೆಯಕ್ಕೆ ಹೋಗಿ, ಯಾರೂ ಮನೆಯಲ್ಲಿ ಸೇರಿಸಿಕೊಳ್ಳದೆ ಹೋದುದರಿಂದ ಸಂತೆ ಬೀದಿಯಲ್ಲೇ ಕುಳಿತುಕೊಂಡರು.

16 ಅಷ್ಟರಲ್ಲಿ ಎಫ್ರಯಿಮ್ ಪರ್ವತಪ್ರದೇಶಕ್ಕೆ ಸೇರಿದವನು ಹಾಗು ಬೆನ್ಯಾಮೀನ್ಯರ ಊರಾದ
ಗಿಬೆಯದಲ್ಲಿ ವಾಸಿಸುವವನು ಆಗಿದ್ದ ಯಾರೋ ಒಬ್ಬ ಮುದುಕ ಸಾಯಂಕಾಲವಾದ್ದರಿಂದ ಕೆಲಸವನ್ನು
ಬಿಟ್ಟು ಹೊಲದಿಂದ ಮನೆಗೆ ಬರುತ್ತಿದ್ದನು. 17ಈ ಮುದುಕ, ಬೀದಿಯಲ್ಲಿ ಕುಳಿತಿದ್ದ ಆ ದಾರಿಗನನ್ನು ಕಂಡು,
“ಎಲ್ಲಿಂದ ಬಂದೆ? ಎಲ್ಲಿಗೆ ಹೋಗುತ್ತಿರುವೆ?” ಎಂದು ಕೇಳಿದನು. 18ಅವನು ಆ ಮುದುಕನಿಗೆ, “ನಾವು
ಯೆಹೂದದ ಬೆತ್ಲೆಹೇಮಿನಿಂದ ಎಫ್ರಯಿಮ್ ಪರ್ವತಪ್ರದೇಶದ ಒಂದು ಮೂಲೆಯಲ್ಲಿರುವ ನಮ್ಮ
ವಾಸಸ್ಥಳಕ್ಕೆ ಹೋಗುತ್ತಿದ್ದೇವೆ. ನಾನು ಅಲ್ಲಿಂದ ಯೆಹೂದದ ಬೆತ್ಲೆಹೇಮಿಗೆ ಹೋಗಿದ್ದೆ; ಈಗ ಮರಳಿ
ಸರ್ವೇಶ್ವರನ ಮಂದಿರಕ್ಕೆ ಹೋಗುತ್ತಿದ್ದೇನೆ. ಇಲ್ಲಿ ಯಾರೂ ನಮ್ಮನ್ನು ತಮ್ಮ ಮನೆಗೆ ಕರೆದುಕೊಂಡು
ಹೋಗಲಿಲ್ಲ. 19ನಮ್ಮ ಕತ್ತೆಗಳಿಗೆ ಹುಲ್ಲೂ ಕಾಳೂ ಇವೆ. ನನಗೂ ನಿನ್ನ ಸೇವಕಿಗೂ ನಿನ್ನ ಸೇವಕನ ಸಂಗಡ
ಬಂದಿರುವ ಈ ಪ್ರಾಯಸ್ಥನಿಗೂ ಸಾಕಾಗುವಷ್ಟು ರೊಟ್ಟಿಯೂ ದ್ರಾಕ್ಷಾರಸವೂ ಇರುತ್ತವೆ; ನಮಗೆ ಹೆಚ್ಚು
ಏನೂ ಬೇಕಾಗಿರುವುದಿಲ್ಲ,” ಎಂದು ಹೇಳಿದನು. 20ಆಗ ಆ ಮುದುಕ, “ನಿನಗೆ ಶುಭವಾಗಲಿ; ನಿನಗೆ
ಏನಾದರೂ ಕಡಿಮೆಯಾದರೆ ಅದನ್ನು ನೋಡಿಕೊಳ್ಳುತ್ತೇನೆ; 21ಈ ಬೀದಿಯಲ್ಲಿ ರಾತ್ರಿಯನ್ನು ಕಳೆಯಬೇಡ;
ನನ್ನ ಮನೆಗೆ ಬಾ,” ಎಂದು ಹೇಳಿ ಅವನನ್ನು ಕರೆದುಕೊಂಡು ಹೋಗಿ ಅವನ ಕತ್ತೆಗಳಿಗೆ ಮೇವುಕೊಟ್ಟನು.
ಅವರು ತಮ್ಮ ಕೈಕಾಲುಗಳನ್ನು ತೊಳೆದುಕೊಂಡು ಅಲ್ಲಿ ಅನ್ನಪಾನಗಳನ್ನು ತೆಗೆದುಕೊಂಡರು.
22 ಅವರು ಭೋಜನದಿಂದ ತೃಪ್ತಿಪಡುವಷ್ಟರಲ್ಲಿ ಆ ಊರಲ್ಲಿದ್ದ ನೀಚ ಜನರು ಬಂದು, ಆ
ಮನೆಯನ್ನು ಸುತ್ತಿಕೊಂಡು, ಕದಗಳನ್ನು ಬಡಿದು, ಮನೆಯ ಯಜಮಾನನಾದ ಮುದುಕನಿಗೆ, “ನಿನ್ನ ಮನೆಗೆ
ಬಂದಿರುವಂಥ ಮನುಷ್ಯನನ್ನು ಹೊರಗೆ ತೆಗೆದುಕೊಂಡು ಬಾ; ಅವನೊಡನೆ ನಮಗೆ ಸಂಗಮವಾಗಬೇಕು,”
ಎಂದು ಕೂಗಿದರು. 23ಆಗ ಆ ಮುದುಕ ಹೊರಗೆ ಹೋಗಿ ಅವರಿಗೆ, “ಸಹೋದರರೇ, ಇಂಥ
ದುಷ್ಟತನವನ್ನು ನಡೆಸಬೇಡಿ; ಅವನು ಆಶ್ರಯಕ್ಕಾಗಿ ನನ್ನ ಮನೆಗೆ ಬಂದಿದ್ದಾನೆ; ನೀವು ಇಂಥ ಹುಚ್ಚುತನ
ಮಾಡಬೇಡಿ. 24ಇನ್ನೂ ಮದುವೆಯಾಗದಂಥ ನನ್ನ ಮಗಳನ್ನೂ ಅವನ ಉಪಪತ್ನಿಯನ್ನೂ ಹೊರಗೆ
ತರುತ್ತೇನೆ. ಅವರನ್ನು ಭಂಗಪಡಿಸಿರಿ; ನಿಮ್ಮ ಮನಸ್ಸಿಗೆ ಬಂದ ಹಾಗೆ ಮಾಡಿ; ಈ ಮನುಷ್ಯನಿಗೆ ಮಾತ್ರ
ಅಂಥ ದುಷ್ಕೃತ್ಯವನ್ನು ಮಾಡಬೇಡಿ,” ಎಂದನು. 25ಆದರೆ ಅವರು ಆ ಮುದುಕನಿಗೆ ಕಿವಿಗೊಡಲೊಲ್ಲದೆ
ಹೋದರು. ಆದುದರಿಂದ ಆ ಲೇವಿಯನು ತನ್ನ ಉಪಪತ್ನಿಯನ್ನು ಹೊರಗೆ ಅವರ ಮಧ್ಯಕ್ಕೆ
ಕಳುಹಿಸಿಬಿಟ್ಟನು. ಅವರು ಆಕೆಯನ್ನು ಕೆಡಿಸಿ ರಾತ್ರಿಯೆಲ್ಲಾ ಬಹುಕ್ರೂರತನದಿಂದ ನಡಿಸಿ, ಕೋಳಿ ಕೂಗುವ
ಹೊತ್ತಾಗಲು ಬಿಟ್ಟುಹೋದರು. 26ಆ ಸ್ತ್ರೀ ಸೂರ್ಯೋದಯಕ್ಕೆ ಮುಂಚೆಯೇ ಬಂದು ತನ್ನ ಯಜಮಾನನು
ತಂಗಿದ್ದ ಮನೆಯ ಬಾಗಿಲಲ್ಲಿ ಬಿದ್ದಳು; ಬೆಳಗಾದರೂ ಏಳಲೇ ಇಲ್ಲ. 27ಆಕೆಯ ಪತಿ ಬೆಳಿಗ್ಗೆ ಎದ್ದು
ಹೊರಡುವುದಕ್ಕೆ ಸಿದ್ಧನಾಗಿ ಬಾಗಿಲನ್ನು ತೆರೆದಾಗ ತನ್ನ ಉಪಪತ್ನಿ ಬಾಗಿಲ ಮುಂದೆ ಬಿದ್ದಿರುವುದನ್ನೂ
ಆಕೆಯ ಕೈಗಳು ಹೊಸ್ತಲಿನ ಮೇಲಿರುವುದನ್ನೂ ಕಂಡನು. 28ಅವನು, “ಏಳು, ಹೋಗೋಣ” ಎಂದು
ಆಕೆಯನ್ನು ಕರೆಯಲು ಪ್ರತ್ಯುತ್ತರವೇ ಬರಲಿಲ್ಲ. ಆಗ ಅವನು ಆಕೆಯ ಶವವನ್ನು ಕತ್ತೆಯ ಮೇಲೆ
ಹಾಕಿಕೊಂಡು ಸ್ವಸ್ಥಳಕ್ಕೆ ಹೋದನು.
29 ಅವನು ಮನೆಸೇರಿದ ಮೇಲೆ ಒಂದು ಕತ್ತಿಯನ್ನು ತೆಗೆದುಕೊಂಡು ತನ್ನ ಉಪಪತ್ನಿಯ
ಶವವನ್ನು ಎಲುಬುಗಳ ಸಹಿತವಾಗಿ ಹನ್ನೆರಡು ತುಂಡುಮಾಡಿ ಅವುಗಳನ್ನು ಇಸ್ರಯೇಲರ ಎಲ್ಲಾ
ಪ್ರಾಂತ್ಯಗಳಿಗೆ ಕಳುಹಿಸಿದನು. 30ಅವುಗಳನ್ನು ಕಂಡವರೆಲ್ಲರು, “ಇಸ್ರಯೇಲರು ಈಜಿಪ್ಟನ್ನು ಬಿಟ್ಟು ಬಂದ
ದಿವಸ ಮೊದಲ್ಗೊಂಡು ಈ ದಿವಸದವರೆಗೆ ಇಂಥ ಕೃತ್ಯ ನಡೆಯಲೂ ಇಲ್ಲ, ನಾವು ಅದನ್ನು ನೋಡಿಯೂ
ಇಲ್ಲ. ಈ ಸಂಗತಿಯನ್ನು ಗಂಭೀರವಾಗಿ ವಿಚಾರಿಸತಕ್ಕದ್ದು” ಎಂದುಕೊಂಡರು.

### ಇಸ್ರಯೇಲರ ಹಾಗು ಬೆನ್ಯಾಮೀನ್ಯರ ನಡುವೆ ಯುದ್ಧ

**20** ದಾನ್ ಪಟ್ಟಣದಿಂದ ಬೇರ್ಷೆಬದವರೆಗಿರುವ ಪ್ರಾಂತ್ಯಗಳಲ್ಲಿಯೂ ಗಿಲ್ಯಾದಿನಲ್ಲಿಯೂ ಇರುವ
ಇಸ್ರಯೇಲರೆಲ್ಲರು ಏಕ ಮನಸ್ಸಿನಿಂದ ಹೊರಟು ಮಿಚ್ಪೆಗೆ ಬಂದು ಸರ್ವೇಶ್ವರನ ಸನ್ನಿಧಿಯಲ್ಲಿ ಸಭೆ
ಸೇರಿದರು. 2ಆ ದೇವಪ್ರಜಾಸಭೆಯಲ್ಲಿ ಎಲ್ಲಾ ಕುಲಾಧಿಪತಿಗಳೂ ಯುದ್ಧಸನ್ನದ್ಧರಾದ ನಾಲ್ಕು ಲಕ್ಷ

ಕಾಲಾಳುಗಳೂ ಇದ್ದರು. [3](ಇಸ್ರಯೇಲರು ಕೂಡಿಕೊಂಡು ಮಿಚ್ಪೆಗೆ ಬಂದಿದ್ದಾರೆಂಬ ವರ್ತಮಾನ ಬೆನ್ಯಾಮೀನ್ಯರಿಗೆ ಮುಟ್ಟಿತು.) ಇಸ್ರಯೇಲರು, "ಈ ದುಷ್ಟತನ ಹೇಗೆ ನಡೆಯಿತೆಂದು ತಿಳಿಸಿರಿ," ಎಂದು ಕೇಳಿದರು. [4]ಹತಳಾದ ಸ್ತ್ರೀಯ ಗಂಡನಾದ ಆ ಲೇವಿಯನು, "ನಾನು ನನ್ನ ಉಪಪತ್ನಿಯ ಸಹಿತನಾಗಿ ಬೆನ್ಯಾಮೀನ್ಯರ ಊರಾದ ಗಿಬೆಯದಲ್ಲಿ ಒಂದು ರಾತ್ರಿ ಇಳಿದುಕೊಂಡಿದ್ದೆ. [5]ಆ ಊರಿನ ಜನರು ಅದೇ ರಾತ್ರಿ ನಾನು ಇಳಿದುಕೊಂಡಿದ್ದ ಮನೆಯನ್ನು ಸುತ್ತಿಕೊಂಡು ನನ್ನನ್ನು ಕೊಲ್ಲಬೇಕೆಂದಿದ್ದರು; ಮತ್ತು ನನ್ನ ಉಪಪತ್ನಿಯ ಮೇಲೆ ಅತ್ಯಾಚಾರಮಾಡಿದರು. ಆಕೆ ಸತ್ತಳು. [6]ಅವರು ಇಸ್ರಯೇಲರಲ್ಲಿ ನಡೆಸಿದ ಇಂಥ ಕೆಟ್ಟ ಹಾಗು ಹುಚ್ಚುಗೆಲಸ ಎಲ್ಲರಿಗೂ ಗೊತ್ತಾಗಲೆಂದು ನಾನು ಆಕೆಯ ಶವವನ್ನು ತುಂಡುಮಾಡಿ ಇಸ್ರಯೇಲರ ಎಲ್ಲಾ ಪ್ರಾಂತ್ಯಗಳಿಗೆ ಕಳುಹಿಸಿದೆನು. [7]ಇಲ್ಲಿ ಕೂಡಿರುವ ಎಲ್ಲ ಇಸ್ರಯೇಲರೇ, ಈಗ ನಿಮ್ಮ ಆಲೋಚನೆಗಳನ್ನೂ ಅಭಿಪ್ರಾಯಗಳನ್ನೂ ಹೇಳಿ," ಎಂದನು.

8 ಇದನ್ನು ಕೇಳಿ ಆ ಜನರು ಏಕಮನಸ್ಸಿನಿಂದ, "ನಮ್ಮಲ್ಲಿ ಯಾವನೂ ತನ್ನ ಗುಡಾರಕ್ಕೆ ಹೋಗಬಾರದು; ತನ್ನ ಮನೆಗೆ ಹಿಂದಿರುಗಕೂಡದು. [9]ನಾವು ಚೀಟು ಹಾಕೋಣ; ಅದು ಬಿದ್ದ ಪ್ರಕಾರವೇ ಗಿಬೆಯದವರಿಗೆ ವಿರುದ್ಧ ಯುದ್ಧಕ್ಕೆ ಹೋಗೋಣ. [10]ಇಸ್ರಯೇಲರ ಕುಲಗಳಲ್ಲಿ ನೂರಕ್ಕೆ ಹತ್ತು, ಸಾವಿರಕ್ಕೆ ನೂರು, ಹತ್ತು ಸಾವಿರಕ್ಕೆ ಸಾವಿರ ಈ ಪ್ರಕಾರವೇ ಜನರನ್ನು ಆರಿಸಿಕೊಂಡು ಅವರನ್ನು ಆಹಾರ ತರುವುದಕ್ಕಾಗಿ ಕಳುಹಿಸೋಣ. ಅವರು ಬಂದ ಮೇಲೆ ಬೆನ್ಯಾಮೀನ್ಯರಾದ ಗಿಬೆಯದವರು ಇಸ್ರಯೇಲರಲ್ಲಿ ನಡೆಸಿದ ದುಷ್ಕರ್ಮಕ್ಕಾಗಿ ಅವರನ್ನು ದಂಡಿಸೋಣ," ಎಂದುಕೊಂಡರು. [11]ಹೀಗೆ ಅವರೆಲ್ಲರೂ ಏಕಮನಸ್ಸಿನಿಂದ ಆ ಪಟ್ಟಣಕ್ಕೆ ವಿರುದ್ಧವಾಗಿ ಕೂಡಿಕೊಂಡರು.

12 ಅವರು ಬೆನ್ಯಾಮೀನ್ಯರ ಸಮಸ್ತ ಕುಲಸ್ಥರ ಬಳಿಗೆ ದೂತರನ್ನು ಕಳುಹಿಸಿ ಅವರಿಗೆ, "ನಿಮ್ಮಲ್ಲಿ ನಡೆದ ಈ ದುಷ್ಕರ್ಮ ಎಂಥದು? [13]ಈಗ ಗಿಬೆಯ ಊರಲ್ಲಿರುವ ಆ ನೀಚರನ್ನು ನಮಗೆ ಒಪ್ಪಿಸಿರಿ; ನಾವು ಅವರನ್ನು ಕೊಂದು ಇಸ್ರಯೇಲರ ಮಧ್ಯೆಯಿಂದ ಇಂಥ ದುಷ್ಟತನವನ್ನು ತೆಗೆದು ಹಾಕುತ್ತೇವೆ," ಎಂದು ಹೇಳಿಸಿದರು. [14]ಆದರೆ ಬೆನ್ಯಾಮೀನ್ಯರು ತಮ್ಮ ಬಂಧುಗಳ ಮಾತಿಗೆ ಕಿವಿಗೊಡದೆ ತಮ್ಮ ಎಲ್ಲ ಊರುಗಳಿಂದ ಗಿಬೆಯಕ್ಕೆ ಬಂದು ಇಸ್ರಯೇಲರ ವಿರುದ್ಧ ಯುದ್ಧಕ್ಕೆ ನಿಂತರು. [15]ಆ ದಿವಸದಲ್ಲಿ ಆಯಾ ಊರುಗಳಿಂದ ಯುದ್ಧಸನ್ನದ್ಧರಾಗಿ ಕೂಡಿಬಂದ ಬೆನ್ಯಾಮೀನ್ಯರ ಸಂಖ್ಯೆ ಇಪ್ಪತ್ತಾರು ಸಾವಿರ. ಇವರಲ್ಲದೆ ಗಿಬೆಯದಲ್ಲಿಯೇ ಏಳುನೂರು ಮಂದಿ ಯುದ್ಧವೀರರಿದ್ದರು. [16]ಈ ಎಲ್ಲ ಜನರಲ್ಲಿ ಏಳುನೂರು ಮಂದಿ ಎಡಚರಾದ ಯುದ್ಧವೀರರಿದ್ದರು. ಅವರಲ್ಲಿ ಪ್ರತಿಯೊಬ್ಬನು ಕೂದಲ ಎಳೆಯಷ್ಟೂ ಗುರಿತಪ್ಪದ ಹಾಗೆ ಕವಣೆಯನ್ನು ಹೊಡೆಯುವುದರಲ್ಲಿ ನಿಪುಣನು; [17]ಬೆನ್ಯಾಮೀನ್ಯರಲ್ಲದ ಇಸ್ರಯೇಲರಲ್ಲಿ ನಾಲ್ಕು ಲಕ್ಷ ಯೋಧರು ಇದ್ದರು; ಇವರೆಲ್ಲರು ವೀರರೇ.

## ಬೆನ್ಯಾಮೀನ್ಯರೊಡನೆ ಯುದ್ಧ

18 ಇಸ್ರಯೇಲರು ಬೇತೇಲಿಗೆ ಹೋಗಿ, ಬೆನ್ಯಾಮೀನ್ಯರ ಮೇಲೆ ಯುದ್ಧಕ್ಕೆ ನಮ್ಮಲ್ಲಿ ಮೊದಲು ಯಾರು ಹೋಗಬೇಕು ಎಂದು ದೇವರಾದ ಸರ್ವೇಶ್ವರನನ್ನು ಕೇಳಲು ಅವರು, "ಮೊದಲು ಯೆಹೂದಕುಲದವರು ಹೋಗಲಿ," ಎಂದು ಹೇಳಿದರು. [19]ಇಸ್ರಯೇಲರು ಬೆಳಿಗ್ಗೆ ಹೊರಟುಹೋಗಿ ಗಿಬೆಯರ ಎದುರಿನಲ್ಲಿ ಪಾಳೆಯ ಮಾಡಿಕೊಂಡರು. [20]ಬೆನ್ಯಾಮೀನ್ಯರೊಡನೆ ಯುದ್ಧ ಮಾಡುವುದಕ್ಕೆ ಸಿದ್ಧರಾಗಿ ಗಿಬೆಯದ ಎದುರಿನಲ್ಲಿ ವ್ಯೂಹ ಕಟ್ಟಿ ನಿಂತರು. [21]ಆ ದಿನ ಬೆನ್ಯಾಮೀನ್ಯರು ಗಿಬೆಯದಿಂದ ಹೊರಗೆ ಬಂದು ಇಸ್ರಯೇಲರಲ್ಲಿ ಇಪ್ಪತ್ತೆರಡು ಸಾವಿರ ಜನರನ್ನು ನೆಲಕ್ಕುರುಳಿಸಿದರು.

22 ಇಸ್ರಯೇಲರು ಪುನಃ ಧೈರ್ಯ ತಂದುಕೊಂಡು ಮೊದಲನೆಯ ದಿನ ವ್ಯೂಹಕಟ್ಟಿದ ಸ್ಥಳದಲ್ಲೇ ಮತ್ತೆ ವ್ಯೂಹಕಟ್ಟಿ ಯುದ್ಧಕ್ಕೆ ನಿಂತರು.

23 (ಇಸ್ರಯೇಲರು ಹೋಗಿ ಸರ್ವೇಶ್ವರನ ಮುಂದೆ ದುಃಖಿಸುತ್ತಾ, "ನಾವು ನಮ್ಮ ಬಂದುಗಳಾದ ಬೆನ್ಯಾಮೀನ್ಯರೊಡನೆ ಯುದ್ಧಮಾಡಬೇಕೇ?" ಎಂದು ಕೇಳಲು ಅವರು, "ಹೋಗಿ ಯುದ್ಧಮಾಡಿ", ಎಂದರು. [24]ಆದ್ದರಿಂದ ಅವರು ಎರಡನೆಯ ದಿನದಲ್ಲಿ ಯುದ್ಧಕ್ಕೆ ಸಿದ್ಧರಾಗಿ ಬೆನ್ಯಾಮೀನ್ಯರ ಸಮೀಪಕ್ಕೆ ಬಂದರು.)

25ಬೆನ್ಯಾಮೀನ್ಯರು ಎರಡನೆಯ ದಿನದಲ್ಲಿಯೂ ಗಿಬೆಯದಿಂದ ಹೊರಗೆ ಬಂದು ಇಸ್ರಯೇಲರಲ್ಲಿ ಹದಿನೆಂಟು
ಸಾವಿರ ಮಂದಿ ಯುದ್ಧವೀರರನ್ನು ನೆಲಕ್ಕೆ ಬೀಳಿಸಿದರು.
26 ಆಗ ಎಲ್ಲ ಜನರು ಬೇತೇಲಿಗೆ ಹೋಗಿ ಅಲ್ಲಿ ಸರ್ವೇಶ್ವರನ ಮುಂದೆ ಅಳುತ್ತಾ ಕುಳಿತು.
ಸಾಯಂಕಾಲದವರೆಗೆ ಉಪವಾಸಮಾಡಿದರು. ಇದಲ್ಲದೆ ಅವರು ಸರ್ವೇಶ್ವರನಿಗೆ ದಹನಬಲಿಗಳನ್ನೂ
ಶಾಂತಿಸಮಾಧಾನ ಬಲಿಗಳನ್ನೂ ಸಮರ್ಪಿಸಿದರು. 27ಆ ಕಾಲದಲ್ಲಿ ಸರ್ವೇಶ್ವರನ ಒಡಂಬಡಿಕೆಯ
ಮಂಜೂಷವು ಆ ಊರೊಳಗೆ ಇತ್ತು. 28ಆರೋನನ ಮೊಮ್ಮಗನೂ ಎಲ್ಲಾಜಾರನ ಮಗನೂ ಆದ
ಫೀನೆಹಾಸನು ಯಾಜಕ ಸೇವೆಮಾಡುತ್ತಿದ್ದನು. ಇಂತಿರಲು ಇಸ್ರಯೇಲರು, "ನಾವು ನಮ್ಮ ಬಂಧುಗಳಾದ
ಬೆನ್ಯಾಮೀನ್ಯರೊಡನೆ ಯುದ್ಧಕ್ಕೆ ಹೋಗಬೇಕೋ ಬೇಡವೋ" ಎಂದು ಸರ್ವೇಶ್ವರನನ್ನು ಕೇಳಿದರು.
ಸರ್ವೇಶ್ವರನು ಅವರಿಗೆ, "ಹೋಗಿ, ನಾಳೆ ಅವರನ್ನು ನಿಮ್ಮ ಕೈಗೆ ಒಪ್ಪಿಸುವೆನು," ಎಂದರು.
29 ಆಗ ಇಸ್ರಯೇಲರು ಗಿಬೆಯದ ಸುತ್ತಲೂ ಕೆಲವರನ್ನು ಹೊಂಚುಹಾಕುವುದಕ್ಕೆ ಇರಿಸಿ,
30ಉಳಿದವರು ಬೆನ್ಯಾಮೀನ್ಯರ ಸಂಗಡ ಕಾದಾಡುವುದಕ್ಕೋಸ್ಕರ ಮುಂಚಿನಂತೆ ಮೂರನೆಯ ದಿನ ಗಿಬೆಯದ
ಸಮೀಪದಲ್ಲಿ ವ್ಯೂಹಕಟ್ಟಿದರು. 31ಬೆನ್ಯಾಮೀನ್ಯರು ಇಸ್ರಯೇಲರೊಡನೆ ಯುದ್ಧ ಮಾಡುವುದಕ್ಕಾಗಿ
ಪಟ್ಟಣವನ್ನು ಬಿಟ್ಟು ದೂರಕ್ಕೆ ಬಂದರು. ಅವರು ಮುಂಚಿನಂತೆ ಜನರನ್ನು ವಧಿಸುವುದಕ್ಕೆ ಪ್ರಾರಂಭಿಸಿ
ಬೇತೇಲಿಗೂ ಬೈಲಿನಲ್ಲಿರುವ ಗಿಬೆಯಕ್ಕೂ ಹೋಗುವ ರಾಜಮಾರ್ಗಗಳಲ್ಲಿ ಸುಮಾರು ಮೂವತ್ತು
ಮಂದಿಯನ್ನು ಹತಿಸಿದರು. 32ಬೆನ್ಯಾಮೀನ್ಯರು, "ಅವರು ಮುಂಚಿನಂತೆ ಈಗಲೂ ಸೋತುಹೋಗುತ್ತಾರೆ"
ಎಂದು ನೆನೆಸಿದರು. ಇಸ್ರಯೇಲರಾದರೋ, "ಅವರು ತಮ್ಮ ಪಟ್ಟಣಕ್ಕೆ ದೂರವಾಗುವಂತೆ ನಾವು ಸ್ವಲ್ಪ
ದೂರ ಓಡಿ ಹೋಗೋಣ," ಎಂದು ಮಾತನಾಡಿಕೊಂಡು 33ತಾವು ಮೊದಲು ನಿಂತ ಸ್ಥಳದಿಂದ
ಓಡತೊಡಗಿದರು. ಬಾಳ್‍ತಾಮರಿಗೆ ಮುಟ್ಟಿದ ಕೂಡಲೆ ಅಲ್ಲಿ ನಿಂತು ಮತ್ತೆ ಯುದ್ಧವನ್ನು ಪ್ರಾರಂಭಿಸಿದರು.
ಅಷ್ಟರಲ್ಲಿ ಹೊಂಚುಹಾಕುತ್ತಿದ್ದವರು ತಾವು ಅಡಗಿಕೊಂಡಿದ್ದ ಗಿಬೆಯದ ಮೈದಾನಿನಿಂದ ಎದ್ದು ಪಟ್ಟಣದ
ಮುಂದೆ ಬಂದರು; 34ಅವರ ಸಂಖ್ಯೆ ಸುಮಾರು ಹತ್ತು ಸಾವಿರ ಮಂದಿ ಯುದ್ಧವೀರರು. ಯುದ್ಧ ಬಹಳ
ಘೋರವಾಯಿತು. ತಮಗೆ ಅಪಾಯ ಒದಗಿ ಬಂದಿದೆ ಎಂಬುದು ಬೆನ್ಯಾಮೀನ್ಯರಿಗೆ ಇನ್ನೂ ಗೊತ್ತಾಗಲಿಲ್ಲ.
35ಸರ್ವೇಶ್ವರ ಇಸ್ರಯೇಲರಿಗೆ ಜಯಕೊಟ್ಟದ್ದರಿಂದ ಅವರು ಆ ದಿನದಲ್ಲಿ ಇಪ್ಪತ್ತೈದು ಸಾವಿರದ ನೂರು
ಮಂದಿ ಬೆನ್ಯಾಮೀನ್ಯ ಯೋಧರನ್ನು ಕೊಂದುಹಾಕಿದರು. 36ತಾವು ಸೋತುಹೋದೆವೆಂಬುದು
ಬೆನ್ಯಾಮೀನ್ಯರಿಗೆ ಆಗ ತಿಳಿಯಿತು.

## ಇಸ್ರಯೇಲರ ವಿಜಯ

(ಇಸ್ರಯೇಲರಿಗೆ ತಾವು ಗಿಬೆಯದ ಸಮೀಪದಲ್ಲಿ ಹೊಂಚುಹಾಕುವುದಕ್ಕಾಗಿ ಇಟ್ಟ ಜನರಲ್ಲಿ ಭರವಸೆಯಿತ್ತು.
ಆದುದರಿಂದ ತಮ್ಮ ಸ್ಥಳವನ್ನು ಬಿಟ್ಟು ಬೆನ್ಯಾಮೀನ್ಯರ ಮುಂದೆ ಓಡಿಹೋದರು. 37ಅಷ್ಟರಲ್ಲಿ
ಅಡಗಿಕೊಂಡಿದ್ದವರು ಎದ್ದು ಗಿಬೆಯಕ್ಕೆ ಶೀಘ್ರವಾಗಿ ಹೋಗಿ ಅದರೊಳಗಿದ್ದ ಎಲ್ಲರನ್ನು ಕತ್ತಿಯಿಂದ
ಸಂಹರಿಸಿದರು. 38ಅಡಗಿದ್ದವರು ಊರಿಗೆ ಬೆಂಕಿಹೊತ್ತಿಸಿ ಹೊಗೆ ಏರಿಹೋಗುವಂತೆ ಮಾಡಿದ ಮೇಲೆ ಓಡಿ
ಹೋಗುತ್ತಿದ್ದವರು ತಿರುಗಿಕೊಂಡು ಯುದ್ಧಕ್ಕೆ ನಿಲ್ಲಬೇಕೆಂದು ಹೊಂಚುಗಾರರೂ ಉಳಿದ ಇಸ್ರಯೇಲರೂ
ತಮ್ಮತಮ್ಮೊಳಗೆ ಗೊತ್ತುಮಾಡಿದ್ದರು. 39ಬೆನ್ಯಾಮೀನ್ಯರಾದರೋ, ಇಸ್ರಯೇಲರು ಮುಂಚಿನಂತೆ ನಮ್ಮ
ಮುಂದೆ ಸೋತು ಹೋದರೆಂದು ನೆನೆಸಿ ಅವರನ್ನು ಸಂಹರಿಸಲು ಪ್ರಾರಂಭಿಸಿ ಸುಮಾರು ಮೂವತ್ತು
ಮಂದಿಯನ್ನು ಕೊಂದು ಹಾಕಿದರು. 40ಆದರೆ ಪಟ್ಟಣದಿಂದ ಹೊಗೆಯೆದ್ದು ಸ್ತಂಭದೋಪಾದಿಯಲ್ಲಿ
ಕಾಣಿಸಲು ಇಸ್ರಯೇಲರು ತಿರುಗಿ ನಿಂತರು. 41ಬೆನ್ಯಾಮೀನ್ಯರು ಹಿಂದಿರುಗಿ ನೋಡಿ ತಮ್ಮ ಪಟ್ಟಣ ಅಗ್ನಿಗೆ
ಆಹುತಿ ಆದದ್ದನ್ನು ಕಂಡು ತಮಗೆ ಅಪಾಯ ಪ್ರಾಪ್ತ ಆಯಿತೆಂದು ಕಳವಳಗೊಂಡರು. 42ಅವರು
ಇಸ್ರಯೇಲರಿಗೆ ಬೆನ್ನುತೋರಿಸಿ ಅರಣ್ಯಮಾರ್ಗವಾಗಿ ಓಡಿಹೋದರು. ಆದರೆ ಸೈನಿಕರು ಅವರನ್ನು
ಹಿಂದಟ್ಟಿದ್ದರಿಂದಲೂ ಪಟ್ಟಣಕ್ಕೆ ಬೆಂಕಿಹೊತ್ತಿಸಿದವರು ಬಂದುಬಿಟ್ಟದ್ದರಿಂದಲೂ ಅವರು ಉಭಯರ
ಮಧ್ಯದಲ್ಲಿ ಸಿಕ್ಕಿಹಾಳಾದರು. 43ಇಸ್ರಯೇಲರು ಅವರನ್ನು ಸುತ್ತಿಕೊಂಡು ಎಲ್ಲಿಯೂ ಓಡಗೊಡದೆ ಗಿಬೆಯ
ಊರಿನ ಪೂರ್ವದಿಕ್ಕಿನಲ್ಲಿ ಇರುವ ಮೆನೂಹದಲ್ಲಿ ತುಳಿದುಬಿಟ್ಟರು. 44ಈ ಪ್ರಕಾರ ಬೆನ್ಯಾಮೀನ್ಯರಲ್ಲಿ

ಹದಿನೆಂಟು ಸಾವಿರ ಮಂದಿ ಯುದ್ಧವೀರರು ಹತರಾದರು. 45ಇದಲ್ಲದೆ ಅವರು ಮರುಭೂಮಿಯಲ್ಲಿರುವ
ರಿಮ್ಮೋನ್ ಗಿರಿಗೆ ಓಡಿಹೋಗುವಾಗ ಹಕ್ಕಲು ತೆನೆಗಳನ್ನೋ ಎಂಬಂತೆ ಐದು ಸಾವಿರ ಜನರನ್ನು
ರಾಜಮಾರ್ಗಗಳಲ್ಲಿ ಕೊಂದುಹಾಕಿದರು. ಅಲ್ಲಿಂದ ಗಿದೋಮಿನವರೆಗೆ ಹಿಂದಟ್ಟಿ ಇನ್ನೂ ಎರಡು ಸಾವಿರ
ಜನರನ್ನು ಹತಮಾಡಿದರು. 46ಹೀಗೆ ಆ ದಿವಸ ಬೆನ್ಯಾಮೀನ್ಯರಲ್ಲಿ ಇಪ್ಪತ್ತೈದು ಸಾವಿರ ಯುದ್ದಸನ್ನದ್ಧರಾದ
ಯೋಧರು ಸಂಹೃತರಾದರು.)

47 ಆದರೆ ಆರುನೂರು ಮಂದಿ ಮರುಭೂಮಿಮಾರ್ಗವಾಗಿ ಓಡಿಹೋಗಿ ರಿಮ್ಮೋನ್ ಗಿರಿಯನ್ನು
ಸೇರಿ ಅಲ್ಲಿ ನಾಲ್ಕು ತಿಂಗಳಿದ್ದರು. 48ಇಸ್ರಯೇಲರು ತಿರುಗಿಕೊಂಡು ಬೆನ್ಯಾಮೀನ್ಯ ಪ್ರಾಂತ್ಯದ ಉಳಿದ
ಗ್ರಾಮನಗರಗಳಿಗೆ ಹೋಗಿ ಅವುಗಳ ನಿವಾಸಿಗಳನ್ನೂ ದನಕುರಿಗಳನ್ನೂ ಸಿಕ್ಕಿದ್ದೆಲ್ಲವನ್ನೂ ಸಂಹರಿಸಿ ಎಲ್ಲ
ಊರುಗಳಿಗೆ ಬೆಂಕಿ ಹೊತ್ತಿಸಿದರು.

### ಹತರಾಗದೆ ಉಳಿದ ಬೆನ್ಯಾಮೀನ್ಯರಿಗೆ ಹೆಂಡತಿಯರನ್ನು ದೊರಕಿಸಿದ್ದು

**21** ಇಸ್ರಯೇಲರೆಲ್ಲರೂ ಮಿಚ್ಪೆಯಲ್ಲಿ ಇದ್ದಾಗ ತಾವು ಬೆನ್ಯಾಮೀನ್ಯರಿಗೆ ತಮ್ಮ ಹೆಣ್ಣುಗಳನ್ನು
ಕೊಡುವುದಿಲ್ಲವೆಂದು ಆಣೆಯಿಟ್ಟಿದ್ದರು. 2ಅವರು ಬೇತೇಲಿಗೆ ಬಂದು ಸಾಯಂಕಾಲದವರೆಗೆ ದೇವರ
ಮುಂದೆ ಕುಳಿತು ಗಟ್ಟಿಯಾಗಿ ಅಳುತ್ತಾ 3"ಸರ್ವೇಶ್ವರಾ, ಇಸ್ರಯೇಲರ ದೇವರೇ, ನಮ್ಮಲ್ಲಿ ಹೀಗೆ ಏಕಾಯಿತು?
ಇಸ್ರಯೇಲರ ಒಂದು ಕುಲ ಹಾಳಾಗಿಹೋಯಿತಲ್ಲಾ!" ಎಂದು ಕೂಗಿಕೊಂಡರು. 4ಮರುದಿವಸ ಅವರು
ಬೆಳಿಗ್ಗೆ ಎದ್ದು ಬಲಿಪೀಠವನ್ನು ಕಟ್ಟಿ ದಹನಬಲಿಗಳನ್ನೂ ಶಾಂತಿಸಮಾಧಾನಬಲಿಗಳನ್ನೂ ಸಮರ್ಪಿಸಿದರು.
5ಮತ್ತು ಸರ್ವೇಶ್ವರನ ಮುಂದೆ ಸಭೆ ನೆರೆದಾಗ ಅದಕ್ಕೆ ಬಾರದೆ ಇದ್ದಂಥ ಇಸ್ರಯೇಲರು ಯಾರಾರೆಂದು
ವಿಚಾರಮಾಡಿದರು. ಏಕೆಂದರೆ ಮಿಚ್ಪೆಯಲ್ಲಿ, "ಸರ್ವೇಶ್ವರನ ಸನ್ನಿಧಿಗೆ ಬಾರದವರನ್ನು
ಕೊಂದುಹಾಕುವೆವೆಂದು ಆಣೆಯಿಟ್ಟು ಅವರು ದೃಢಪ್ರಮಾಣ ಮಾಡಿದ್ದರು. 6ಇಸ್ರಯೇಲರು ತಮ್ಮ
ಬಂಧುಗಳಾದ ಬೆನ್ಯಾಮೀನ್ಯರ ಅವಸ್ಥೆಯನ್ನು ನೆನೆಸಿ ದುಃಖದಿಂದ, "ಅಯ್ಯೋ, ಇಸ್ರಯೇಲರಾದ ನಮ್ಮಲ್ಲಿ
ಒಂದು ಕುಲ ಕಡಿಮೆಯಾಯಿತಲ್ಲಾ; 7ಜೀವದಿಂದುಳಿದವರಿಗೆ ಹೆಂಡತಿಯರನ್ನು ದೊರಕಿಸಿಕೊಡುವುದು
ಹೇಗೆ? ನಮ್ಮ ಹೆಣ್ಣುಗಳನ್ನು ಅವರಿಗೆ ಕೊಡುವುದಿಲ್ಲವೆಂದು ಸರ್ವೇಶ್ವರನ ಹೆಸರಿನಲ್ಲಿ ಆಣೆಯಿಟ್ಟೆವಲ್ಲಾ,"
ಎಂದು ಗೋಳಾಡಿದರು.

8 ಮಿಚ್ಪೆಯಲ್ಲಿ ಸರ್ವೇಶ್ವರನ ಮುಂದೆ ಸಭೆಸೇರಿದ್ದಾಗ ಅದಕ್ಕೆ ಬಾರದಿದ್ದ ಇಸ್ರಯೇಲರು
ಯಾರಾದರೂ ಇದ್ದಾರೋ ಎಂದು ವಿಚಾರಿಸುವಲ್ಲಿ, ಯಾಬೇಷ್ ಗಿಲ್ಯಾದಿನಿಂದ ಒಬ್ಬನೂ ಬರಲಿಲ್ಲವೆಂದು
ಗೊತ್ತಾಯಿತು. 9ಜನರನ್ನು ಲೆಕ್ಕಿಸಿದಾಗ ಯಾಬೇಷ್ ಗಿಲ್ಯಾದಿನಿಂದ ಯಾರೂ ಬರಲಿಲ್ಲವೆಂಬುದು
ದೃಢವಾಯಿತು. 10ಆಗ ಅವರು ತಮ್ಮಲ್ಲಿಂದ ಹನ್ನೆರಡು ಸಾವಿರಮಂದಿ ಪರಾಕ್ರಮ ಶಾಲಿಗಳನ್ನು
ಆರಿಸಿಕೊಂಡು ಅವರಿಗೆ, "ನೀವು ಯಾಬೇಷ್ ಗಿಲ್ಯಾದಿಗೆ ಹೋಗಿ ಎಲ್ಲ ನಿವಾಸಿಗಳನ್ನೂ ಸ್ತ್ರೀಯರನ್ನೂ
ಚಿಕ್ಕಮಕ್ಕಳನ್ನೂ ಬಿಡದೆ ಸಂಹರಿಸಬೇಕು; 11ಹೇಗೂ ಪುರುಷರೆಲ್ಲರನ್ನೂ ಮದುವೆಯಾದ ಸ್ತ್ರೀಯರನ್ನೂ
ನಿರ್ಮೂಲಮಾಡುವುದು ನಿಮ್ಮ ಕೆಲಸ." ಎಂದು ಆಜ್ಞಾಪಿಸಿ ಕಳುಹಿಸಿದರು. 12ಯಾಬೇಷ್ ಗಿಲ್ಯಾದಿನಲ್ಲಿ
ಇನ್ನೂ ಮದುವೆಯಾಗದಿದ್ದ ನಾನೂರು ಮಂದಿ ಯುವತಿಯರು ಇದ್ದರು. ಪಟ್ಟಣವನ್ನು ನಾಶಪಡಿಸುವುದಕ್ಕೆ
ಹೋದವರು ಇವರನ್ನು ಉಳಿಸಿ ಕಾನಾನ್ ನಾಡಿನ ಶಿಲೋವಿನಲ್ಲಿದ್ದ ಪಾಳೆಯಕ್ಕೆ ತೆಗೆದುಕೊಂಡು ಬಂದರು.
13ಅನಂತರ ಸರ್ವ ಸಭೆಯವರು ರಿಮ್ಮೋನ್ ಗಿರಿಯಲ್ಲಿದ್ದ ಬೆನ್ಯಾಮೀನ್ಯರ ಬಳಿಗೆ ದೂತರನ್ನು ಕಳುಹಿಸಿ
ಅವರಲ್ಲಿ ಸಮಾಧಾನ ವಾಕ್ಯವನ್ನು ಪ್ರಕಟಿಸಲು ಅವರು ತಿರುಗಿಬಂದರು. 14ಇಸ್ರಯೇಲರು ತಾವು ಯಾಬೇಷ್
ಗಿಲ್ಯಾದಿನಿಂದ ಉಳಿಸಿತಂದ ಕನ್ಯೆಯರನ್ನು ಅವರಿಗೆ ಮದುವೆ ಮಾಡಿಕೊಟ್ಟರು; ಅವರು ಸಾಯಲಿಲ್ಲ.

15ಸರ್ವೇಶ್ವರ ನಮ್ಮಲ್ಲಿ ಒಂದು ಲೋಪವನ್ನುಂಟುಮಾಡಿದ್ದಾರೆಂದು ಇಸ್ರಯೇಲರು ಬೆನ್ಯಾಮೀನ್ಯರ
ವಿಷಯದಲ್ಲಿ ದುಃಖಪಟ್ಟರು. 16ಸಭೆಯ ಹಿರಿಯರು, "ಉಳಿದಿರುವ ಬೆನ್ಯಾಮೀನ್ಯರಿಗೆ ಹೆಂಡತಿಯರನ್ನು
ದೊರಕಿಸುವುದು ಹೇಗೆ? ಅವರ ಸ್ತ್ರೀಯರೆಲ್ಲ ಸಂಹೃತರಾದರಲ್ಲಾ. 17ಇಸ್ರಯೇಲರ ಒಂದು ಕುಲ
ಸಂಪೂರ್ಣವಾಗಿ ಅಳಿದು ಹೋಗಬಾರದು. ತಪ್ಪಿಸಿಕೊಂಡು ಉಳಿದಿರುವ ಬೆನ್ಯಾಮೀನ್ಯರಿಗೆ ಬಾಧ್ಯಸ್ತರು

ಹುಟ್ಟಬೇಕಲ್ಲವೆ? 18ಬೆನ್ಯಾಮಿನ್ಯರಿಗೆ ತಮ್ಮ ಹೆಣ್ಣುಗಳನ್ನು ಕೊಡುವ ಇಸ್ರಯೇಲರು ಶಾಪಗ್ರಸ್ತರಾಗಲಿ! ಎಂದು
ಆಣೆಯಿಟ್ಟು ಕೊಂಡಿದ್ದೇವೆ ಇದರಿಂದ ನಾವು ಅವರಿಗೆ ನಮ್ಮ ಹೆಣ್ಣುಗಳನ್ನು ಕೊಡುವುದಕ್ಕಾಗುವುದಿಲ್ಲ"
19ಎಂದು ಮಾತನಾಡಿಕೊಳ್ಳುತ್ತಿರುವಾಗ ಶಿಲೋವಿನಲ್ಲಿ ವರ್ಷ ವರ್ಷ ಸರ್ವೇಶ್ವರನ ಉತ್ಸವ
ನಡೆಯುತ್ತದೆಂಬುದು ಅವರಿಗೆ ನೆನಪಿಗೆ ಬಂದಿತು. (ಶಿಲೋ ಎಂಬುದು ಬೇತೇಲಿನ ಉತ್ತರಕ್ಕೂ
ಬೇತೇಲಿನಿಂದ ಶೆಕೆಮಿಗೆ ಹೋಗುವ ರಾಜಮಾರ್ಗದ ಪೂರ್ವಕ್ಕೂ ಲೇಬೋನದ ದಕ್ಷಿಣಕ್ಕೂ ಇರುತ್ತದೆ.)
20ಆಗ ಅವರು ಬೆನ್ಯಾಮಿನ್ಯರನ್ನು ಕರೆದು ಅವರಿಗೆ, "ಇಗೋ, ನೀವು ದ್ರಾಕ್ಷೀ ತೋಟಗಳಲ್ಲಿ ಅಡಗಿಕೊಳ್ಳಿರಿ;
21ಶಿಲೋಮಿನ ಕನ್ಯೆಯರು ಹೊರಗೆ ಬಂದು ನಾಟ್ಯವಾಡುವಾಗ ನೀವು ತೋಟಗಳಿಂದ ಹೊರಗೆ ಬಂದು
ಪ್ರತಿಯೊಬ್ಬನು ತನ ತನಗೆ ಶಿಲೋವಿನ ಕನ್ನಿಕೆಗಳಿಂದ ಒಬ್ಬಳನ್ನು ಹೆಂಡತಿಯಾಗಿ ತೆಗೆದುಕೊಂಡು ನಿಮ್ಮ
ಪ್ರಾಂತ್ಯಕ್ಕೆ ಓಡಿ ಹೋಗಿರಿ. 22ಅವರ ತಂದೆಗಳೂ ಅಣ್ಣತಮ್ಮಂದಿರೂ ನಮ್ಮ ಹತ್ತಿರ ದೂರುತಂದರೆ ನಾವು
ಅವರಿಗೆ, 'ನಮ್ಮನ್ನು ನೋಡಿ ಅವರಿಗೆ ಕೃಪೆತೋರಿಸಿ; ಯುದ್ಧ ನಿಮಿತ್ತ ಪ್ರತಿಯೊಬ್ಬನಿಗೆ ಹೆಣ್ಣನ್ನು
ದೊರಕಿಸುವುದು ನಮ್ಮಿಂದಾಗಲಿಲ್ಲ; ಮತ್ತು ನಿಮ್ಮ ಹೆಣ್ಣುಮಕ್ಕಳನ್ನು ನೀವೇ ಕೊಡಲಿಲ್ಲವಾದ್ದರಿಂದ ನೀವು
ನಿರಪರಾಧಿಗಳು' ಎಂದು ಹೇಳಿ ಸಮಾಧಾನಪಡಿಸುವೆವು" ಎಂದರು. 23ಅದರಂತೆಯೇ ಬೆನ್ಯಾಮಿನ್ಯರು
ನಾಟ್ಯವಾಡುವುದಕ್ಕಾಗಿ ಹೊರಗೆ ಬಂದಿದ್ದ ಕನ್ಯೆಯರಲ್ಲಿ ತಮ್ಮ ಸಂಖ್ಯೆಗೆ ಸರಿದೂಗುವಷ್ಟು ಮಂದಿಯನ್ನು
ಹೆಂಡತಿಯರನ್ನಾಗಿ ಹಿಡಿದುಕೊಂಡು ತಮ್ಮ ಸ್ವಾಸ್ತ್ಯಭೂಮಿಗೆ ಹೋಗಿ ಅಲ್ಲಿ ಪಟ್ಟಣಗಳನ್ನು ಕಟ್ಟಿ
ವಾಸಮಾಡಿದರು.

24 ಅನಂತರ ಇಸ್ರಯೇಲರು ತಮ್ಮ ತಮ್ಮ ಕುಲಗೋತ್ರಗಳಿಗೆ ಸೊತ್ತಾಗಿ ಸಿಕ್ಕಿದ ಪ್ರದೇಶಗಳಿಗೆ
ಹಿಂದಿರುಗಿ ಹೋದರು. 25ಆ ಕಾಲದಲ್ಲಿ ಇಸ್ರಯೇಲರಲ್ಲಿ ಅರಸನಿರಲಿಲ್ಲ; ಪ್ರತಿಯೊಬ್ಬನು ತನ್ನ ಮನಸ್ಸಿಗೆ
ಬಂದಂತೆ ನಡೆಯುತ್ತಿದ್ದನು.